Volume : 9 | Issue : 133 | August : 08 : 2026 : Saturday
ಸಂಪುಟ : 9 | ಸಂಚಿಕೆ : 133 | ಆಗಸ್ಟ್ : 08 : 2026 : ಶನಿವಾರ

www.VIKRAMAVAHINI.com

—— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ ——

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481





ಆಸ್ಕರ್ ವಿಜೇತ ರಸೆಲ್ ಕ್ರೋವ್ ಜೊತೆ ತೆರೆ ಹಂಚಿಕೊಳ್ಳಲಿರುವ ಪ್ರಿಯಾಂಕಾ ಚೋಪ್ರಾ; 'ಬ್ಲೂಪ್ರಿಂಟ್' ಹಾಲಿವುಡ್ ಸೈನ್ಸ್ ಫಿಕ್ಷನ್ ಆಕ್ಷನ್ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಲಿದ್ದಾರೆ.

ಪದ್ಮಾವತಿ ದೇವಿಗೆ ರೂ 2 ಕೋಟಿ ಸ್ವರ್ಣ ಕಿರೀಟ ಪುಟ 3

'ದಯೆಯಿಲ್ಲದ ಶಿಕ್ಷಣ ಸಮಾಜಕ್ಕೆ ಅಪಾಯ' ಪುಟ 4

# ಬೆಂಗಳೂರಿನ 5 ಸ್ಟಾರ್ ಹೋಟೆಲ್‌ಗಳಲ್ಲಿ ಮುಗ್ಗಾದ ಮಾಂಸ?

● ವಿಕ್ರಮ ವಾಹಿನಿ । ಬೆಂಗಳೂರು

ಆಹಾರದ ಗುಣಮಟ್ಟ, ಸ್ವಚ್ಛತೆ ಹಾಗೂ ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆ ಕುರಿತು ಸಾರ್ವಜನಿಕರಿಂದ ಹೆಚ್ಚುತ್ತಿರುವ ದೂರುಗಳ ಹಿನ್ನೆಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಜ್ಯಾದ್ಯಂತ ಹೋಟೆಲ್, ರೆಸ್ಟೋರೆಂಟ್, ಕ್ಲೌಡ್ ಕಿಚನ್, ಬೇಕರಿ ಹಾಗೂ ಇತರ ಆಹಾರ ಮಳಿಗೆಗಳ ಮೇಲೆ ದಿಢೀರ್ ತಪಾಸಣೆ ಆರಂಭಿಸಿದೆ. ಈ ಕಾರ್ಯಾಚರಣೆಗೆ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ 30 ವಿಶೇಷ ತಂಡಗಳನ್ನು ರಚಿಸಲಾಗಿದ್ದು, ಬೆಂಗಳೂರು ಸೇರಿದಂತೆ ರಾಜ್ಯದ ಪ್ರಮುಖ ನಗರಗಳಲ್ಲಿ ಪರಿಶೀಲನೆ ನಡೆಸಲಾಗುತ್ತಿದೆ.

ಆರೋಗ್ಯ ಸಚಿವ ಯು.ಟಿ. ಖಾದರ್ ಅವರ ಸೂಚನೆಯ ಮೇರೆಗೆ ಆರಂಭವಾಗಿರುವ ಈ ವಿಶೇಷ ಕಾರ್ಯಾಚರಣೆಯ ಉದ್ದೇಶ ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಆಹಾರ ದೊರೆಯುವುದನ್ನು ಖಚಿತಪಡಿಸುವುದಾಗಿದೆ. ಆಹಾರ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಸ್ಟಾರ್ ಹೋಟೆಲ್, ರೆಸ್ಟೋರೆಂಟ್, ರಸ್ತೆ ಬದಿ ಆಹಾರ ಮಳಿಗೆ, ಕ್ಲೌಡ್ ಕಿಚನ್, ಫಾಸ್ಟ್‌ಫುಡ್ ಕೇಂದ್ರ ಸೇರಿದಂತೆ ವಿವಿಧ ಆಹಾರ ಸಂಸ್ಥೆಗಳಲ್ಲಿ ಅಧಿಕಾರಿಗಳು



ಸಮಗ್ರ ತಪಾಸಣೆ ನಡೆಸಲಿದ್ದಾರೆ. ಅಡುಗೆಮನೆಯ ಸ್ವಚ್ಛತೆ, ಆಹಾರದ ಗುಣಮಟ್ಟ, ಅವಧಿ ಮೀರಿದ ಆಹಾರ ಪದಾರ್ಥಗಳ ಬಳಕೆ, ಆಹಾರ ಸಂಗ್ರಹಣೆ, ಸಿಬ್ಬಂದಿಯ ನೈರ್ಮಲ್ಯ, ನಿಷೇಧಿತ ಕೃತಕ ಬಣ್ಣ ಮತ್ತು ರಾಸಾಯನಿಕಗಳ ಬಳಕೆ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ನಿಯಮಗಳ ಪಾಲನೆ ಸೇರಿದಂತೆ ಹಲವು ಅಂಶಗಳನ್ನು ಪರಿಶೀಲಿಸಲಾಗುತ್ತದೆ.

**ಆಹಾರದ ಗುಣಮಟ್ಟ ಮತ್ತು ಸ್ವಚ್ಛತೆ ಕುರಿತು ಹೆಚ್ಚುತ್ತಿರುವ ದೂರುಗಳ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಹೋಟೆಲ್, ರೆಸ್ಟೋರೆಂಟ್, ಕ್ಲೌಡ್ ಕಿಚನ್ ಸೇರಿದಂತೆ ಆಹಾರ ಮಳಿಗೆಗಳ ಮೇಲೆ ದಿಢೀರ್ ತಪಾಸಣೆ ಆರಂಭಿಸಿದೆ. 30 ವಿಶೇಷ ತಂಡಗಳು ಆಹಾರ ಸುರಕ್ಷತಾ ನಿಯಮಗಳ ಪಾಲನೆ, ಅಡುಗೆಮನೆಗಳ ಸ್ವಚ್ಛತೆ, ಅವಧಿ ಮೀರಿದ ಆಹಾರ ಪದಾರ್ಥಗಳ ಬಳಕೆ ಹಾಗೂ ನಿಷೇಧಿತ ರಾಸಾಯನಿಕಗಳ ಕುರಿತು ಪರಿಶೀಲನೆ ನಡೆಸಲಿದ್ದು, ಸಾರ್ವಜನಿಕರ ಆರೋಗ್ಯ ರಕ್ಷಣೆಗೆ ಆದ್ಯತೆ ನೀಡಿ, ನಿಯಮ ಉಲ್ಲಂಘಿಸುವವರ ವಿರುದ್ಧ ದಂಡ, ಪರವಾನಗಿ ಅಮಾನತು ಸೇರಿದಂತೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಇಲಾಖೆ ಎಚ್ಚರಿಸಿದೆ.**

ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆದ ವಿಡಿಯೊಗಳು ಹಾಗೂ ಸಾರ್ವಜನಿಕರಿಂದ ಬಂದ ದೂರುಗಳಲ್ಲಿ ಹಲವೆಡೆ ಅಸ್ವಚ್ಛ ಅಡುಗೆಮನೆ, ಕಳಪೆ ಆಹಾರ, ಅವಧಿ ಮೀರಿದ ಪದಾರ್ಥಗಳ ಬಳಕೆ ಹಾಗೂ ಆಹಾರ ಸುರಕ್ಷತಾ ನಿಯಮ ಉಲ್ಲಂಘನೆಯ ಆರೋಪಗಳು ಕೇಳಿಬಂದಿದ್ದವು. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ತಕ್ಷಣ ವಿಶೇಷ ತಪಾಸಣೆ ನಡೆಸಲು ನಿರ್ಧರಿಸಿದೆ.

ಕಳೆದ ವರ್ಷವೂ 'ಆಪರೇಷನ್ ಈಟ್ ರೈಟ್' ಅಭಿಯಾನದಡಿ ರಾಜ್ಯದ ವಿವಿಧ ಹೋಟೆಲ್‌ಗಳು ಮತ್ತು ಆಹಾರ ಮಳಿಗೆಗಳಲ್ಲಿ ಪರಿಶೀಲನೆ ನಡೆಸಿ, ನಿಯಮ ಉಲ್ಲಂಘಿಸಿದವರಿಗೆ ನೋಟಿಸ್ ನೀಡಲಾಗಿತ್ತು. ಈ ಬಾರಿಯೂ ಅದೇ ಮಾದರಿಯ ಕಾರ್ಯಾಚರಣೆಯನ್ನು ಇನ್ನಷ್ಟು ವ್ಯಾಪಕವಾಗಿ ಕೈಗೊಳ್ಳಲಾಗಿದೆ.

ಆಹಾರ ಸುರಕ್ಷತಾ ನಿಯಮ ಉಲ್ಲಂಘಿಸುವ ಹೋಟೆಲ್‌ಗಳು ಮತ್ತು ಆಹಾರ ಮಳಿಗೆಗಳ ವಿರುದ್ಧ ದಂಡ, ಪರವಾನಗಿ ಅಮಾನತು, ಅಗತ್ಯವಿದ್ದರೆ ಎಫ್‌ಐಆರ್ ದಾಖಲಿಸುವುದು ಸೇರಿದಂತೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಎಚ್ಚರಿಸಿದೆ. ಮುಂದಿನ ಹಂತದಲ್ಲಿ ಕಾಲೇಜು ಕ್ಯಾಂಟೀನ್, ವಿದ್ಯಾರ್ಥಿ ಹಾಸ್ಟೆಲ್, ಕ್ಯಾಟರಿಂಗ್ ಸೇವೆಗಳು ಹಾಗೂ ಬೃಹತ್ ಪ್ರಮಾಣದ ಆಹಾರ ತಯಾರಿಕಾ ಕೇಂದ್ರಗಳಿಗೂ ತಪಾಸಣೆ ವಿಸ್ತರಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸುರಕ್ಷಿತ ಮತ್ತು ಗುಣಮಟ್ಟದ ಆಹಾರವನ್ನು ಸಾರ್ವಜನಿಕರಿಗೆ ಒದಗಿಸುವುದು ಸರ್ಕಾರದ ಆದ್ಯತೆಯಾಗಿದ್ದು, ಆಹಾರ ಸುರಕ್ಷತಾ ನಿಯಮ ಪಾಲನೆಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಆರೋಗ್ಯ ಇಲಾಖೆ ಸ್ಪಷ್ಟಪಡಿಸಿದೆ.

## ■ ಸುದ್ದಿ ಚುಟುಕು

### ರೂ 1.50 ಲಕ್ಷ ಲಂಚ; ಬೆಸ್ಕಾಂ ಎಇಇ ಲೋಕಾ ಬಲೆಗೆ

● ವಿಕ್ರಮ ವಾಹಿನಿ । ಬೆಂಗಳೂರು

ಹೊಸ ಕಟ್ಟಡಕ್ಕೆ ವಿದ್ಯುತ್ ಸಂಪರ್ಕ ಕಲ್ಪಿಸಲು ರೂ.1.50 ಲಕ್ಷ ಲಂಚ ಪಡೆಯುತ್ತಿದ್ದ ವೇಳೆ ಬೆಸ್ಕಾಂನ ಹುಳಿಮಾವು ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಎಇಇ) ನಾಗರತ್ನ ಹಾಗೂ ಕಿರಿಯ ಎಂಜಿನಿಯರ್ (ಜೆಇ) ಸ್ವಾಮಿ ಅವರನ್ನು ಲೋಕಾಯುಕ್ತ ಪೊಲೀಸರು ಶುಕ್ರವಾರ ರೆಡ್‌ಹ್ಯಾಂಡ್ ಆಗಿ ಬಂಧಿಸಿದ್ದಾರೆ.

ಗುತ್ತಿಗೆದಾರ ಅರ್ಷದ್ ವುಲ್ಲಾ ಅವರು ತಮ್ಮ ಹೊಸ ಕಟ್ಟಡಕ್ಕೆ ವಿದ್ಯುತ್ ಸಂಪರ್ಕ ಪಡೆಯಲು ಬೆಸ್ಕಾಂ ಅಧಿಕಾರಿಗಳನ್ನು ಸಂಪರ್ಕಿಸಿದ್ದರು. ಈ ವೇಳೆ ಎಇಇ ನಾಗರತ್ನ ಮತ್ತು ಜೆಇ ಸ್ವಾಮಿ ಅವರು ಅನುಮತಿ ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸಲು ರೂ.1.50 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಇದರಿಂದ ಬೇಸತ್ತ ಗುತ್ತಿಗೆದಾರರು ಲೋಕಾಯುಕ್ತ ಪೊಲೀಸರಿಗೆ ದೂರು ಸಲ್ಲಿಸಿದ್ದರು.

ದೂರಿನ ಆಧಾರದ ಮೇಲೆ ಕಾರ್ಯಾಚರಣೆ ರೂಪಿಸಿದ ಲೋಕಾಯುಕ್ತ ಅಧಿಕಾರಿಗಳು, ದೂರುದಾರರಿಗೆ ಗುರುತು ಹಾಕಿದ ನೋಟುಗಳನ್ನು ನೀಡಿ ಅಧಿಕಾರಿಗಳಿಗೆ ಹಣ ನೀಡುವಂತೆ ಸೂಚಿಸಿದ್ದರು. ಶುಕ್ರವಾರ ಲಂಚದ ಹಣ ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ತಂಡ ದಿಢೀರ್ ದಾಳಿ ನಡೆಸಿ ಎಇಇ ನಾಗರತ್ನ ಹಾಗೂ ಜೆಇ ಸ್ವಾಮಿ ಅವರನ್ನು ರೆಡ್‌ಹ್ಯಾಂಡ್ ಆಗಿ ಬಂಧಿಸಿತು.

ಬಂಧಿತ ಅಧಿಕಾರಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಪ್ರಕರಣ ದಾಖಲಿಸಿಕೊಂಡಿರುವ ಲೋಕಾಯುಕ್ತ ಪೊಲೀಸರು, ಲಂಚಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ಇತರೆ ಮಾಹಿತಿಯನ್ನು ಪರಿಶೀಲಿಸುತ್ತಿದ್ದು, ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ.

### ನಿದಾ ಖಾನ್‌ಗೆ ಆಶ್ರಯ; ಎಐಎಮ್‌ಐಎಮ್ ನಾಯಕ ಸೆರೆ

● ವಿಕ್ರಮ ವಾಹಿನಿ । ನವದೆಹಲಿ

ಟಿಸಿಎಸ್ ಧರ್ಮಾಂತರ ಪ್ರಕರಣದ ಪ್ರಮುಖ ಆರೋಪಿ ಹಾಗೂ ಮಾಜಿ ಉದ್ಯೋಗಿ ನಿದಾ ಖಾನ್‌ಗೆ ಆಶ್ರಯ ನೀಡಿದ ಆರೋಪದ ಮೇರೆಗೆ ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರದ ಎಐಎಂಐಎಂ ಕಾರ್ಪೊರೇಟರ್ ಮತೀನ್ ಪಟೇಲ್ ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯ ಪದೇಪದೆ ಸಮನ್ಸ್ ಜಾರಿಗೊಳಿಸಿದ್ದರೂ ಹಾಜರಾಗದ ಹಿನ್ನೆಲೆಯಲ್ಲಿ ಅವರ ವಿರುದ್ಧ ಬಂಧನ ವಾರಂಟ್ ಹೊರಡಿಸಲಾಗಿತ್ತು. ಅದರಂತೆ ಗುರುವಾರ ಸಂಜೆ ಪೊಲೀಸರು ಅವರನ್ನು ಬಂಧಿಸಿ ವಿಚಾರಣೆಗಾಗಿ ನಾಸಿಕ್‌ಗೆ ಕರೆದೊಯ್ದಿದ್ದಾರೆ. ಇದೇ ವೇಳೆ ಅವರ ನಿವಾಸ ಹಾಗೂ ಕಚೇರಿ ವಿರುದ್ಧವೂ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ.

2022ರಲ್ಲಿ ಟಿಸಿಎಸ್‌ನ ಮಹಿಳಾ ಉದ್ಯೋಗಿಯೊಬ್ಬರು ಸಹೋದ್ಯೋಗಿ ದಾನಿಶ್ ಶೇಖ್ ವಿರುದ್ಧ ಮದುವೆಯಾಗುವುದಾಗಿ ನಂಬಿಸಿ ದೈಹಿಕ ಶೋಷಣೆ ನಡೆಸಿದ ಆರೋಪ ಮಾಡಿದ್ದರು.

ಈ ಪ್ರಕರಣದ ತನಿಖೆಯಲ್ಲಿ ಮಾಜಿ ಉದ್ಯೋಗಿ ನಿದಾ ಖಾನ್ ಮಹಿಳೆಯ ಮೇಲೆ ಧರ್ಮಾಂತರಕ್ಕೆ ಒತ್ತಡ ಹೇರಿದ ಆರೋಪವೂ ಕೇಳಿಬಂದಿತ್ತು.

ಪ್ರಕರಣದ ತನಿಖೆಯ ಭಾಗವಾಗಿ ನಿದಾ ಖಾನ್‌ಗೆ ಆಶ್ರಯ ಒದಗಿಸಿದವರು ಹಾಗೂ ಪ್ರಕರಣದಲ್ಲಿ ಪರೋಕ್ಷವಾಗಿ ಭಾಗಿಯಾಗಿರುವವರ ಪಾತ್ರದ ಬಗ್ಗೆಯೂ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

ಈ ಪ್ರಕರಣವು ದೇಶಾದ್ಯಂತ ವ್ಯಾಪಕ ಚರ್ಚೆಗೆ ಗ್ರಾಸವಾಗಿದ್ದು, ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆ, ಧಾರ್ಮಿಕ ಸ್ವಾತಂತ್ರ್ಯ ಹಾಗೂ ಕಿರುಕುಳ ತಡೆಗೆ ಸಂಬಂಧಿಸಿದ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಅಗತ್ಯವಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಈ ಪ್ರಕರಣದಲ್ಲಿ ಮಹಿಳಾ ಉದ್ಯೋಗಿಗಳ ಕಿರುಕುಳ, ಧರ್ಮಾಂತರಕ್ಕೆ ಪ್ರಚೋದನೆ, ಧಾರ್ಮಿಕ ಭಾವನೆಗಳಿಗೆ ಧಕ್ಕೆ ಹಾಗೂ ಮಾನಸಿಕ ಹಿಂಸೆ ಸೇರಿದಂತೆ ಹಲವು ಆರೋಪಗಳ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಪ್ರಕರಣ ಬೆಳಕಿಗೆ ಬಂದ ಬಳಿಕ ಸಂಬಂಧಿತ ಉದ್ಯೋಗಿಗಳನ್ನು ಟಿಸಿಎಸ್ ಅಮಾನತುಗೊಳಿಸಿದ್ದು, ಬಲವಂತ ಅಥವಾ ಕಿರುಕುಳದ ವಿರುದ್ಧ ಸಂಸ್ಥೆ ಶೂನ್ಯ ಸಹಿಷ್ಣುತೆ ನೀತಿ ಅನುಸರಿಸುವುದಾಗಿ ಸ್ಪಷ್ಟಪಡಿಸಿದೆ.

# ಮನವೊಲಿಕೆ ಬಳಿಕ ಹೊರಟ್ಟಿ ರಾಜೀನಾಮೆ


● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ರವರ ಮನವೊಲಿಕೆ ನಂತರ ಬಸವರಾಜು ಹೊರಟ್ಟಿಯವರು ಸಭಾಪತಿ ಬಸವರಾಜ ಹೊರಟ್ಟಿ ಸ್ಥಾನಕ್ಕೆ ರಾಜೀನಾಮೆ ನೀಡುವ ನಿರ್ಧಾರವನ್ನು ಕೈಗೊಂಡಿದ್ದಾರೆ.

ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವ ಪತ್ರವನ್ನು ಅವರು ರವಾನಿಸಿದ್ದು, ಸ್ವಇಚ್ಛೆಯಿಂದ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಕಾಂಗ್ರೆಸ್ ಹೈಕಮಾಂಡ್ ವಿಧಾನ ಪರಿಷತ್ ಸದಸ್ಯ ಸಲೀಂ ಅಹಮದ್ ರವರನ್ನು ಆಯ್ಕೆ ಮಾಡಿದ ಬೆನ್ನಲ್ಲೆ ರಾಜ್ಯ ರಾಜಕೀಯದಲ್ಲಿ ಸಭಾಪತಿ ಸ್ಥಾನಕ್ಕೆ ಸಂಬಂಧಿಸಿದಂತೆ ಹಲವು ರಾಜಕೀಯ ಬೆಳವಣಿಗೆಗಳು ನಡೆದಿದ್ದವು.

ಸಭಾಪತಿ ಸ್ಥಾನಕ್ಕೆ ನಾನು ರಾಜೀನಾಮೆ ಕೊಡಲ್ಲ, ಬೇಕಾದರೆ ಅವಿಶ್ವಾಸ ನಿರ್ಣಯ ಮಂಡಿಸಲಿ ಎಂದು



**ರಾಜೀನಾಮೆ ಕೊಡು ಅಂದರು ಕೊಟ್ಟೆ: ರಾಜೀನಾಮೆ ಬಳಿಕ ಹೇಳಿಕೆ ನೀಡಿರುವ ಬಸವರಾಜ ಹೊರಟ್ಟಿ, ಇಂದೇ ರಾಜೀನಾಮೆ ಕೊಡಿ ಅಂದರು. ಅದಕ್ಕಾಗಿ ಇಂದೇ ಕೊಟ್ಟೆ. ಈ ಮೊದಲು ಆ.14ರಂದು ರಾಜೀನಾಮೆ ಕೊಡಬೇಕಿತ್ತು. ಇಂದೇ ಕೊಟ್ಟೆ. ಆಗಲೇ ರಾಜೀನಾಮೆ ಕೊಡಲು ತೀರ್ಮಾನಿಸಿದ್ದೆ. ಸ್ವಲ್ಪ ಬೇಸರ ಆಗಿದೆ. ಅವಧಿ ಮುಗಿಯುವ ಮುನ್ನವೇ ರಾಜೀನಾಮೆ ಪಡೆದಿರುವುದು ಸ್ವಲ್ಪ ಬೇಸರ ಆಗಿದೆ. ಇಲ್ಲಿ ಸರ್ಕಾರದ ಒತ್ತಡ ಅಂತ ಬರಲ್ಲ. ರಾಜೀನಾಮೆ ಕೊಡಬೇಕು ಎಂದು ಹೇಳಿದರು. ಅದಕ್ಕೆ ಕೊಟ್ಟೆ ಎಂದು ಸ್ಪಷ್ಟನೆಯನ್ನೂ ಕೊಟ್ಟಿದ್ದಾರೆ.**

ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದರಿಂದ ನೂತನ ಸಭಾಪತಿ ಆಯ್ಕೆ ಜಟಿಲ ಎನಿಸಿತ್ತು.

ಈ ಎಲ್ಲಾ ಬೆಳವಣಿಗೆಗಳ ನಡುವೆಯೇ ನಿನ್ನೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ಸಭಾಪತಿ ಹೊರಟ್ಟಿಯವರನ್ನು ಭೇಟಿ ಮಾಡಿ ಚರ್ಚಿಸಿ ಅವರ ಮನವೊಲಿಸಿದ್ದರು. ಇದಾದ ಬಳಿಕ ಇಂದು ಬಸವರಾಜ ಹೊರಟ್ಟಿಯವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರನ್ನು ಭೇಟಿ ಮಾಡಿ ಚರ್ಚಿಸಿದ್ದರು.

ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಹಾಗೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರ ಮನವೊಲಿಕೆ ನಂತರ ಕೊನೆಗೂ ಹೊರಟಿಯವರು ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ವಿಧಾನ ಪರಿಷತ್ತಿನಲ್ಲಿ ಕಾಂಗ್ರೆಸ್‌ಗೆ ಬಹುಮತ ಇದ್ದು, ಸಭಾಪತಿ ಸ್ಥಾನ ಹಾಗೂ ಉಪಸಭಾಪತಿ ಎರಡು ಸ್ಥಾನಗಳನ್ನು ಕಾಂಗ್ರೆಸ್ ತನ್ನ ತೆಕ್ಕೆಗೆ ತೆಗೆದುಕೊಳ್ಳಲು ನಿರ್ಧರಿಸಿತ್ತು.

ಅದರಂತೆ ಸಭಾಪತಿ ಸ್ಥಾನಕ್ಕೆ ಸಲೀಂ ಅಹಮದ್ ರವರನ್ನು, ಉಪಸಭಾಪತಿ ಸ್ಥಾನಕ್ಕೆ ಉಮಾಶ್ರೀಯವರನ್ನು ಆಯ್ಕೆ ಮಾಡಲಾಗಿತ್ತು. 2ನೇ ಪುಟಕ್ಕೆ

# ಕರ್ನಾಟಕ ಎಸ್‌ಐಆರ್ ಅವಧಿ ಮತ್ತೆ ವಿಸ್ತರಣೆ




● ವಿಕ್ರಮ ವಾಹಿನಿ । ನವದೆಹಲಿ

ಕರ್ನಾಟಕದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯ ಗಡುವನ್ನು ಭಾರತೀಯ ಚುನಾವಣಾ ಆಯೋಗ ಮತ್ತೊಮ್ಮೆ ವಿಸ್ತರಿಸಿದೆ. ರಾಜ್ಯ ಮುಖ್ಯ ಚುನಾವಣಾಧಿಕಾರಿಯ ಮನವಿಯನ್ನು ಪರಿಗಣಿಸಿ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

ಹೊಸ ವೇಳಾಪಟ್ಟಿಯಂತೆ, ಮನೆ-ಮನೆ ಪರಿಶೀಲನೆ ನಡೆಸುವ ಃಐಔಗಳ ಕಾರ್ಯ ಆಗಸ್ಟ್ 17ರವರೆಗೆ ಮುಂದುವರಿಯಲಿದೆ. ಕರಡು ಮತದಾರರ ಪಟ್ಟಿ ಆಗಸ್ಟ್ 24ರಂದು ಪ್ರಕಟವಾಗಲಿದ್ದು, ಸೆಪ್ಟೆಂಬರ್ 23ರವರೆಗೆ ಹಕ್ಕು ಹಾಗೂ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸಲ್ಲಿಕೆಯಾಗುವ ಅರ್ಜಿಗಳನ್ನು ಅಕ್ಟೋಬರ್ 22ರೊಳಗೆ ವಿಲೇವಾರಿ ಮಾಡಲಾಗುವುದು. ಅಂತಿಮ ಮತದಾರರ ಪಟ್ಟಿ ಅಕ್ಟೋಬರ್ 27ರಂದು ಪ್ರಕಟವಾಗಲಿದೆ.

ಪರಿಷ್ಕೃತ ವೇಳಾಪಟ್ಟಿಯಂತೆ ಕರಡು ಮತದಾರರ ಪಟ್ಟಿಯ ಪ್ರಕಟಣೆ ಬಳಿಕ ಸಾರ್ವಜನಿಕರು ತಮ್ಮ ಹೆಸರು ಹಾಗೂ ವಿವರಗಳನ್ನು ಪರಿಶೀಲಿಸಿ, ಅಗತ್ಯವಿದ್ದರೆ ನಿಗದಿತ ಅವಧಿಯೊಳಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಬಹುದಾಗಿದೆ. ಎಲ್ಲ ಅರ್ಜಿಗಳ ಪರಿಶೀಲನೆ ಪೂರ್ಣಗೊಂಡ ಬಳಿಕ ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27ರಂದು ಪ್ರಕಟಿಸಲಾಗುವುದು.


ಪರಿಷ್ಕೃತ ವೇಳಾಪಟ್ಟಿಯನ್ನು ಎಲ್ಲಾ ಸಂಬಂಧಿತ ಅಧಿಕಾರಿಗಳಿಗೆ ತಕ್ಷಣ ತಿಳಿಸುವುದರ ಜೊತೆಗೆ, ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳಿಗೆ ವಿವಿಧ ಮಾಧ್ಯಮಗಳ ಮೂಲಕ ವ್ಯಾಪಕವಾಗಿ ಮಾಹಿತಿ ನೀಡುವಂತೆ ಚುನಾವಣಾ ಆಯೋಗ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ನಿರ್ದೇಶನ ನೀಡಿದೆ.

# ಶಿಂಧೆ ಬಣ ಸಂಸದರಿಗೆ ಮೋದಿ ಅಭಯ

● ವಿಕ್ರಮ ವಾಹಿನಿ । ನವದೆಹಲಿ

ಸಂಸತ್ತಿನ ಕಲಾಪಗಳು ವಿಪಕ್ಷಗಳ ಗದ್ದಲದಿಂದ ಪದೇಪದೆ ಅಸ್ತವ್ಯಸ್ತವಾಗುತ್ತಿರುವ ನಡುವೆಯೇ ಪ್ರಧಾನಿ ನರೇಂದ್ರ ಮೋದಿ ಅವರು ಎನ್‌ಡಿಎ ಮೈತ್ರಿಕೂಟದ ಲೋಕಸಭಾ ಸಂಸದರೊಂದಿಗೆ ಉಪಹಾರ ಸಭೆ ನಡೆಸಿ, ಸದನದ ಚರ್ಚೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಕರೆ ನೀಡಿದರು. ಸಂಸತ್ತನ್ನು "ಪ್ರಜಾಪ್ರಭುತ್ವದ ಅತ್ಯುನ್ನತ ದೇವಾಲಯ" ಎಂದು ಬಣ್ಣಿಸಿದ ಅವರು, ಹೊಸ ಸಂಸದರಿಗೆ ಮಾತನಾಡಲು ಅವಕಾಶ ಸಿಗದಿರುವುದು ದುರದೃಷ್ಟಕರ ಎಂದು ಹೇಳಿದರು.

ಬಂಡಾಯ ಸಂಸದರಿಗೆ ಅಭಯ: ಇತ್ತೀಚೆಗೆ ತೃಣಮೂಲ ಕಾಂಗ್ರೆಸ್ ತೊರೆದು ಎನ್‌ಸಿಪಿಐಗೆ ಸೇರ್ಪಡೆಯಾದ ಸಂಸದರು ಹಾಗೂ ಉದ್ಧವ್ ಠಾಕ್ರೆ ಬಣ ತೊರೆದು ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ಸೇರಿರುವ ಆರು ಸಂಸದರಿಗೆ ಪ್ರಧಾನಿ ವಿಶೇಷವಾಗಿ ಧೈರ್ಯ ತುಂಬಿದರು.



"ನೀವು ಯಾವುದೇ ಆತಂಕ ಪಡಬೇಕಾಗಿಲ್ಲ. ನಾನು ನಿಮ್ಮೊಂದಿಗಿದ್ದೇನೆ. ಎನ್‌ಡಿಎ ಒಂದು ಕುಟುಂಬದಂತಿದ್ದು, ಮೈತ್ರಿಕೂಟದ ಪ್ರತಿಯೊಬ್ಬ ಸಂಸದನಿಗೂ ಸಮಾನ ಗೌರವ ಮತ್ತು ಅವಕಾಶ ಸಿಗುತ್ತದೆ" ಎಂದು ಪ್ರಧಾನಿ ಹೇಳಿದರು.

ಅಭಿವೃದ್ಧಿಗೆ ಒತ್ತು: ಸಂಸದರು ತಮ್ಮ ಕ್ಷೇತ್ರಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ಅಗತ್ಯವಿದ್ದರೆ ನೇರವಾಗಿ ಪ್ರಧಾನಮಂತ್ರಿಗಳ ಕಚೇರಿಯನ್ನು ಸಂಪರ್ಕಿಸಬಹುದು. ರೈತರು, ಕಾರ್ಮಿಕರು ಸೇರಿದಂತೆ ಜನರ ಸಮಸ್ಯೆಗಳನ್ನು ತಿಳಿದು ಅಭಿವೃದ್ಧಿ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವಂತೆ ಅವರು ಸಲಹೆ ನೀಡಿದರು.

ಸಭೆಯ ಬಳಿಕ ಪ್ರಧಾನಿ ಮೋದಿ ಅವರು ಹಲವು ಸಂಸದರೊಂದಿಗೆ ಪ್ರತ್ಯೇಕವಾಗಿ ಮಾತುಕತೆ ನಡೆಸಿ, ಅವರ ಕ್ಷೇತ್ರಗಳ ಅಭಿವೃದ್ಧಿ ಹಾಗೂ ಜನಸಮಸ್ಯೆಗಳ ಕುರಿತು ಮಾಹಿತಿ ಪಡೆದರು.

ಸಭೆಯಲ್ಲಿ ಎನ್‌ಸಿಪಿಐ, ಶಿವಸೇನೆ, ಎಐಎಡಿಎಂಕೆ, ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ, ರಾಷ್ಟ್ರೀಯ ಲೋಕ ಮೋರ್ಚಾ, ಯುಪಿಪಿಎಲ್ ಸೇರಿದಂತೆ ಎನ್‌ಡಿಎ ಮೈತ್ರಿಕೂಟದ ವಿವಿಧ ಪಕ್ಷಗಳ 40ಕ್ಕೂ ಹೆಚ್ಚು ಲೋಕಸಭಾ ಸದಸ್ಯರು ಭಾಗವಹಿಸಿದ್ದರು.

# ಬೆಂಗಳೂರು ಟ್ರಾಫಿಕ್‌ಗೆ ಪಂಚಸೂತ್ರ

● ವಿಕ್ರಮ ವಾಹಿನಿ । ಬೆಂಗಳೂರು

ರಾಜಧಾನಿ ಬೆಂಗಳೂರಿನ ಸಂಚಾರ ದಟ್ಟಣೆ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯುವ ನಿಟ್ಟಿನಲ್ಲಿ ನಗರ ಸಂಚಾರ ಪೊಲೀಸ್ ವಿಭಾಗವು ಹೈದರಾಬಾದ್ ಮಾದರಿಯ 'ಪಂಚಸೂತ್ರ' ಜಾರಿಗೆ ತರುವ ಪ್ರಸ್ತಾವ ಸಿದ್ಧಪಡಿಸಿದೆ. ಕಾರ್ ಪೂಲಿಂಗ್‌ಗೆ ಅಧಿಕೃತ ಮಾನ್ಯತೆ, ಹಗಲಿನ ವೇಳೆ ಖಾಸಗಿ ಬಸ್‌ಗಳ ಸಂಚಾರ ನಿರ್ಬಂಧ, ಭಾರೀ ಸರಕು ಸಾಗಾಣಿಕೆ ವಾಹನಗಳಿಗೆ ನಿಗದಿತ ಸಮಯದಲ್ಲಿ ಮಾತ್ರ ಸಂಚಾರಕ್ಕೆ ಅವಕಾಶ ಸೇರಿದಂತೆ ಹಲವು ಕ್ರಮಗಳನ್ನು ಈ ಯೋಜನೆ ಒಳಗೊಂಡಿದೆ.

ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ ನೇತೃತ್ವದಲ್ಲಿ ಸಿದ್ಧಗೊಂಡಿರುವ ಈ ಪ್ರಸ್ತಾವನೆಯಲ್ಲಿ, ನಿಧಾನಗತಿಯ ವಾಹನಗಳ ಸಂಚಾರವನ್ನು ಸಮಯ ಆಧಾರಿತವಾಗಿ ನಿಯಂತ್ರಿಸುವ ಮೂಲಕ ನಗರದಲ್ಲಿ ವಾಹನಗಳ ಓಡಾಟ ಸುಗಮಗೊಳಿಸಲು ಉದ್ದೇಶಿಸಲಾಗಿದೆ. ಈ ಸಂಬಂಧ ಹೈದರಾಬಾದ್‌ನಲ್ಲಿ ಜಾರಿಯಲ್ಲಿರುವ ಸಂಚಾರ ನಿರ್ವಹಣಾ ಮಾದರಿಯ ಅಧ್ಯಯನವನ್ನೂ ಇಲಾಖೆ ನಡೆಸಿದೆ.

ಪ್ರಸ್ತಾವದಂತೆ, ಬೆಳಗ್ಗೆ 8ರಿಂದ ರಾತ್ರಿ 8ರವರೆಗೆ ಆಲ್ ಇಂಡಿಯಾ ಪರ್ಮಿಟ್ ಹೊಂದಿರುವ ಖಾಸಗಿ ಬಸ್‌ಗಳ ನಗರ ಪ್ರವೇಶಕ್ಕೆ ನಿರ್ಬಂಧ ವಿಧಿಸುವ ಬಗ್ಗೆ ಚಿಂತನೆ ನಡೆಸಲಾಗಿದೆ. ವಿವಿಧ ರಾಜ್ಯಗಳಿಂದ ಬರುವ ಖಾಸಗಿ ಬಸ್‌ಗಳು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸುವುದರಿಂದ ಟ್ರಾಫಿಕ್ ದಟ್ಟಣೆ ಹೆಚ್ಚಾಗುತ್ತಿದೆ ಎಂಬ ಕಾರಣದಿಂದ ಈ ಕ್ರಮವನ್ನು ಪರಿಗಣಿಸಲಾಗಿದೆ.

ಇದೇ ವೇಳೆ, ಉದ್ದದ ಟ್ರಕ್‌ಗಳು ಹಾಗೂ ಭಾರೀ ಸರಕು ಸಾಗಾಣಿಕೆ ವಾಹನಗಳಿಗೆ ಹಗಲಿನ ವೇಳೆ ನಗರ ಪ್ರವೇಶವನ್ನು ನಿರ್ಬಂಧಿಸಿ, ನಿಗದಿತ ಸಮಯದಲ್ಲಿ ಮಾತ್ರ ಸಂಚಾರಕ್ಕೆ ಅವಕಾಶ ಕಲ್ಪಿಸುವ ಪ್ರಸ್ತಾವವೂ ಇದೆ. ಇದರಿಂದ ಪ್ರಮುಖ ರಸ್ತೆಗಳಲ್ಲಿ ಸಂಚಾರದ ಒತ್ತಡ ಕಡಿಮೆಯಾಗಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ. 2ನೇ ಪುಟಕ್ಕೆ



**ದೆಹಲಿಯಲ್ಲಿ ಶುಕ್ರವಾರ ಸುರಿದ ಭಾರೀ ಮಳೆಯಿಂದ ಪ್ರಮುಖ ರಸ್ತೆಗಳು ಜಲಾವೃತಗೊಂಡು ಜನಜೀವನ ಅಸ್ತವ್ಯಸ್ತವಾಯಿತು. ದಕ್ಷಿಣ ದೆಹಲಿಯ ಮೆಹ್ರೌಲಿ-ಬದರ್‌ಪುರ ರಸ್ತೆಯ ಏರ್ ಫೋರ್ಸ್ ಸ್ಟೇಷನ್ ಸಮೀಪ 3ರಿಂದ 4 ಅಡಿ ನೀರು ನಿಂತ ಪರಿಣಾಮ ರಸ್ತೆಯೇ ನದಿಯಂತಾಗಿ, ಮಕ್ಕಳು ಮಳೆನೀರಿನಲ್ಲಿ ಈಜಾಡಿ ಸಂಭ್ರಮಿಸಿದರು. ಜಲಾವೃತ ಪ್ರದೇಶದಲ್ಲಿ ಸಿಲುಕಿದ ಜನರನ್ನು ಸುರಕ್ಷಿತವಾಗಿ ದಾಟಿಸಲು ಮಿಲಿಟರಿ ಸಿಬ್ಬಂದಿ ಹೆವಿ ಟ್ರಕ್‌ಗಳನ್ನು ಬಳಸಿಕೊಂಡು ನೆರವು ನೀಡಿದರು.**

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

## ಸವಿ ವಾಹಿನಿ

ಮರದ ಎಲೆ ಉದುರಿ ಬೀಳುವಾಗ, ಮನುಷ್ಯನಿಗೆ ಒಂದು ಒಳ್ಳೆಯ ಸಂದೇಶ ನೀಡುತ್ತದೆ. ಹೇ ಮನುಜಾ_ ನೀನು ಹೊರೆಯಾದರೆ... ನಿನ್ನವರೆ ನಿನ್ನನ್ನು ದೂರ ಮಾಡುತ್ತಾರೆ...ಎಂದು..!

## ದಿನ ಪಂಚಾಂಗ

ಆಗಸ್ಟ್, 8-2026 ಗ್ರೀಷ್ಮ ಋತು, ಆಷಾಢ ಮಾಸ,
ಬಹುಳ ಪಕ್ಷ. ದಶಮಿ ತಿಥಿ ಬೆ-11:18
ರೋಹಿಣಿ ನಕ್ಷತ್ರ ಮ-3:22
ರಾಹುಕಾಲ ಬೆ-9:15-10:50
2ನೇ ಶನಿವಾರ, ಹಿರಿಯ ನಾಗರಿಕರ ದಿನ,
ತುಳಸೀದಾಸ ಆರಾಧನೆ, ಹೆಮ್ಮರಗಾಲ ಕೃಷ್ಣೋತ್ಸವ

## ಆರೋಗ್ಯ

# ಸೋರೆಕಾಯಿ ಜ್ಯೂಸ್: ಆರೋಗ್ಯಕ್ಕೆ ಲಾಭ



ಆರೋಗ್ಯಕರ ಜೀವನಶೈಲಿಯತ್ತ ಜನರ ಒಲವು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಹಜ ಪಾನೀಯಗಳ ಬಳಕೆಯೂ ಹೆಚ್ಚಾಗಿದೆ. ಕಡಿಮೆ ಕ್ಯಾಲೊರಿ ಹಾಗೂ ಹೆಚ್ಚಿನ ನೀರಿನ ಅಂಶ ಹೊಂದಿರುವ ಸೋರೆಕಾಯಿ ಜ್ಯೂಸ್ ಇತ್ತೀಚಿನ ದಿನಗಳಲ್ಲಿ ಆರೋಗ್ಯ ಕಾಳಜಿ ಹೊಂದಿರುವವರಲ್ಲಿ ಜನಪ್ರಿಯವಾಗಿದೆ. ಜೀರ್ಣಕ್ರಿಯೆ ಸುಧಾರಣೆ, ತೂಕ ನಿಯಂತ್ರಣ, ದೇಹದ ಹೈಡ್ರೇಷನ್ ಹಾಗೂ ಹೃದಯದ ಆರೋಗ್ಯಕ್ಕೆ ಇದು ಸಹಕಾರಿಯಾಗಬಹುದು ಎಂದು ಆರೋಗ್ಯ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಸೋರೆಕಾಯಿ ಶೇ.90ಕ್ಕೂ ಹೆಚ್ಚು ನೀರಿನ ಅಂಶ ಹೊಂದಿರುವ ತರಕಾರಿಯಾಗಿದ್ದು, ದೇಹವನ್ನು ತಂಪಾಗಿಡಲು ಮತ್ತು ನೀರಿನ ಸಮತೋಲನ ಕಾಪಾಡಿಕೊಳ್ಳಲು ನೆರವಾಗುತ್ತದೆ. ಇದರಲ್ಲಿ ಫೈಬರ್, ವಿಟಮಿನ್‌ಗಳು, ಪೊಟ್ಯಾಸಿಯಂ ಸೇರಿದಂತೆ ಹಲವು ಅಗತ್ಯ ಪೋಷಕಾಂಶಗಳು ಇರುತ್ತವೆ. ನಿಯಮಿತವಾಗಿ ಮಿತ ಪ್ರಮಾಣದಲ್ಲಿ ಸೇವಿಸಿದರೆ ದೇಹದ ಸಾಮಾನ್ಯ ಆರೋಗ್ಯ ಕಾಪಾಡಿಕೊಳ್ಳಲು ಸಹಾಯವಾಗಬಹುದು.

ಸೋರೆಕಾಯಿ ಜ್ಯೂಸ್‌ನ ಪ್ರಮುಖ ಪ್ರಯೋಜನವೆಂದರೆ ಜೀರ್ಣಕ್ರಿಯೆಗೆ ದೊರೆಯುವ ಬೆಂಬಲ. ಇದರಲ್ಲಿ ಇರುವ ನಾರಿನ ಅಂಶವು ಆಹಾರ ಸರಿಯಾಗಿ ಜೀರ್ಣವಾಗಲು ನೆರವಾಗುತ್ತದೆ. ಮಲಬದ್ಧತೆ, ಹೊಟ್ಟೆ ಉಬ್ಬರ ಹಾಗೂ ಅಜೀರ್ಣದಂತಹ ಸಮಸ್ಯೆಗಳನ್ನು ಕಡಿಮೆ ಮಾಡಲು ಸಹಕಾರಿಯಾಗಬಹುದು. ಆದರೆ ಜೀರ್ಣಕ್ರಿಯೆಯ ಸಮಸ್ಯೆ ಇರುವವರು ತಮ್ಮ ದೇಹದ ಪ್ರತಿಕ್ರಿಯೆಯನ್ನು ಗಮನಿಸಿ ಸೇವಿಸುವುದು ಉತ್ತಮ.

ತೂಕ ಇಳಿಸಲು ಪ್ರಯತ್ನಿಸುವವರಿಗೆ ಸೋರೆಕಾಯಿ ಜ್ಯೂಸ್ ಉತ್ತಮ ಆಯ್ಕೆಯಾಗಬಹುದು. ಕಡಿಮೆ ಕ್ಯಾಲೊರಿ ಹೊಂದಿರುವುದರಿಂದ ಹಾಗೂ ಹೆಚ್ಚಿನ ಪ್ರಮಾಣದ ನೀರನ್ನು ಒಳಗೊಂಡಿರುವುದರಿಂದ ಹೊಟ್ಟೆ ತುಂಬಿದ ಅನುಭವ ನೀಡುತ್ತದೆ. ಇದರಿಂದ ಅನಗತ್ಯವಾಗಿ ಹೆಚ್ಚು ಆಹಾರ ಸೇವಿಸುವ ಅಭ್ಯಾಸ ಕಡಿಮೆಯಾಗಬಹುದು. ಆದರೆ ತೂಕ ಇಳಿಕೆಗೆ ಕೇವಲ ಜ್ಯೂಸ್ ಮಾತ್ರ ಅವಲಂಬಿಸದೆ ಸಮತೋಲಿತ ಆಹಾರ ಮತ್ತು ನಿಯಮಿತ ವ್ಯಾಯಾಮ ಅಗತ್ಯ.

ಸೋರೆಕಾಯಿಯಲ್ಲಿರುವ ಪೊಟ್ಯಾಸಿಯಂ ರಕ್ತದೊತ್ತಡ ನಿಯಂತ್ರಣಕ್ಕೆ ಸಹಾಯ ಮಾಡಬಹುದು. ಆರೋಗ್ಯಕರ ಆಹಾರ ಪದ್ಧತಿಯ ಭಾಗವಾಗಿ ಸೇವಿಸಿದರೆ ಹೃದಯದ ಆರೋಗ್ಯ ಕಾಪಾಡಿಕೊಳ್ಳಲು ನೆರವಾಗುತ್ತದೆ. ಅಲ್ಲದೆ, ಇದರಲ್ಲಿರುವ ವಿಟಮಿನ್ ಸಿ ಮತ್ತು ಆಂಟಿಆಕ್ಸಿಡೆಂಟ್‌ಗಳು ಚರ್ಮದ ಆರೋಗ್ಯ ಹಾಗೂ ದೇಹದ ರೋಗನಿರೋಧಕ ಸಾಮರ್ಥ್ಯಕ್ಕೆ ಸಹಕಾರಿ.

ದೇಹದಲ್ಲಿ ನೀರಿನ ಕೊರತೆ ಉಂಟಾಗದಂತೆ ನೋಡಿಕೊಳ್ಳಲು ಸೋರೆಕಾಯಿ ಜ್ಯೂಸ್ ನೆರವಾಗುತ್ತದೆ. ವಿಶೇಷವಾಗಿ ಬಿಸಿಲಿನ ಸಮಯದಲ್ಲಿ ದೇಹವನ್ನು ಹೈಡ್ರೇಟ್ ಆಗಿಡಲು ಇದು ಉಪಯುಕ್ತವಾಗಬಹುದು. ವಿಟಮಿನ್ ಎ, ಸಿ, ಕೆ ಹಾಗೂ ಖನಿಜಾಂಶಗಳಿರುವುದರಿಂದ ದೇಹದ ವಿವಿಧ ಕಾರ್ಯಗಳು ಸರಾಗವಾಗಿ ನಡೆಯಲು ಸಹಕಾರಿಯಾಗುತ್ತದೆ.

ಆದರೆ ಸೋರೆಕಾಯಿ ಜ್ಯೂಸ್ ಸೇವಿಸುವಾಗ ಕೆಲವು ಮುನ್ನೆಚ್ಚರಿಕೆಗಳನ್ನು ಪಾಲಿಸುವುದು ಅತ್ಯಂತ ಮುಖ್ಯ. ಕಹಿ ರುಚಿಯ ಸೋರೆಕಾಯಿಯನ್ನು ಯಾವುದೇ ಕಾರಣಕ್ಕೂ ಜ್ಯೂಸ್ ಮಾಡಿ ಸೇವಿಸಬಾರದು. ಕಹಿಯಾದ ಸೋರೆಕಾಯಿಯಲ್ಲಿ ವಿಷಕಾರಿ ಸಂಯುಕ್ತಗಳು ಇರುವ ಸಾಧ್ಯತೆಯಿದ್ದು, ಇದರಿಂದ ವಾಂತಿ, ಹೊಟ್ಟೆ ನೋವು, ಅತಿಸಾರ ಸೇರಿದಂತೆ ಗಂಭೀರ ಆರೋಗ್ಯ ಸಮಸ್ಯೆಗಳು ಉಂಟಾಗಬಹುದು.

# ಬನ್ನಂಜೆ ಗೋವಿಂದಾಚಾರ್ಯ ಎಂಬ ವಿಶ್ವವಿದ್ಯಾಲಯ




ಬನ್ನಂಜೆಯವರು ಶಾಲೆಗೆ ಹೋಗಿ ಕಲಿತದ್ದು ಬಹಳ ಕಡಿಮೆ. ಆರನೆಯ ತರಗತಿಗೇ ಅವರ ಶಾಲಾಭ್ಯಾಸ ಮುಗಿದಿದೆ. ಅವರ ಅಧ್ಯಾತ್ಮದ ಶಿಕ್ಷಣ ತರ್ಕಕೇಸರಿ ನಾರಾಯಣ ಆಚಾರ್ಯ ಹಾಗೂ ಶ್ರೀ ವಿದ್ಯಾಮಾನ್ಯ ತೀರ್ಥರಿಂದ ಆರಂಭಗೊಂಡಿತು. ಈ ಸಂದರ್ಭದಲ್ಲೇ ಅವರಿಗೆ ವೈದಿಕ ಸಾಹಿತ್ಯ, ವೇದ ವೇದಾಂಗವೇ ಮುಂತಾದ ಅಧ್ಯಾತ್ಮದ ಭದ್ರ ತಳಹದಿ ದೊರಕಿತು. ಒಂದು ಭಾಷೆಯಲ್ಲಿ ಪ್ರಭುತ್ವ ಮತ್ತು ಪರಿಣಿತಿಯನ್ನು ಗಳಿಸಿಕೊಂಡರೆ ಅದು ಎಲ್ಲ ಭಾಷೆಗಳ ಅಧ್ಯಯನಕ್ಕೂ ನಾಂದಿಯಾಗುತ್ತದೆಂಬ ಅವರ ಮಾತು ಅವರ ಸಂಸ್ಕೃತ, ಕನ್ನಡ, ಇಂಗ್ಲಿಷ್ ಭಾಷಾ ಪಾರಮ್ಯವನ್ನು ಸಾಬೀತುಮಾಡುತ್ತದೆ. ಶ್ರೀ ವಿದ್ಯಾಸಮುದ್ರ ತೀರ್ಥರಿಂದ ಅವರ ಬುದ್ಧಿಮತ್ತೆ ಮತ್ತು ವ್ಯಕ್ತಿತ್ವಕ್ಕೊಂದು ಸ್ಪಷ್ಟ ಆಕಾರ ದೊರಕಿತು. ಕಲಿತದ್ದನ್ನು ಎಲ್ಲ ಬಗೆಯ ಅಧ್ಯಾತದ ಗ್ರಂಥಗಳಿಗೂ ಶ್ರದ್ಧೆಯಿಂದ ಅವರು ವಿನಿಯೋಗಿಸಿಕೊಂಡರು. ಅದಮಾರು ಶ್ರೀ ವಿಬುಧೇಶತೀರ್ಥರಿಂದ ವಿದ್ಯಾವಾಚಸ್ಪತಿ ಎಂಬ ಎಕ್ಸ್ ಕ್ಲೂಸಿವ್ ಆದ ಅಭಿದಾನದ ಕಿರೀಟ, ಪೇಜಾವರರಿಂದ ಶ್ರೀಕೃಷ್ಣಾನುಗ್ರಹ ಪ್ರಶಸ್ತಿ, ಪಲಿಮಾರು ಶ್ರೀಗಳಿಂದ ಪ್ರತಿಭಾಂಬುಧಿ ಬಿರುದು, ಅಖಿಲ ಭಾರತ ಮಾಧ್ವ ಮಹಾಮಂಡಲದಿಂದ ಶಾಸ್ತ್ರ ಸವ್ಯಸಾಚಿ ಪುರಸ್ಕಾರ, ಸಂಶೋಧನ ವಿಚಕ್ಷಣ, ಪಂಡಿತ ಶಿರೋಮಣಿ, ಪಂಡಿತರತ್ನ, ವಿದ್ಯಾರತ್ನಾಕರ ಎಂಬಿತ್ಯಾದಿ ಅಭಿನಾಮಗಳು ಅವರನ್ನು ಅರಸಿ ಬಂದಿವೆ. ಭಾರತ ಸರ್ಕಾರದ ಪದ್ಮಶ್ರೀ ಗೌರವ, ಕೇಂದ್ರ ಸಾಹಿತ್ಯ ಅಕಾಡೆಮಿ (ಬನ್ನಂಜೆಯವರ ಅನುವಾದದ ಶ್ರೇಷ್ಠತೆಯ ಆವೆಯ ಮಣ್ಣಿನ ಆಟದ ಬಂಡಿ: ಶೂದ್ರಕನ 'ಮೃಚ್ಛಕಟಿಕ' ನಾಟಕದ ಅನುವಾದಕ್ಕೆ), ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಪ್ರಶಸ್ತಿ, ಆಳ್ವಾಸ್ ನುಡಿಸಿರಿ ಪ್ರಶಸ್ತಿಗಳು ಅವರಿಗೆ ಸಂದಿವೆ. ಉಡುಪಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ, ಮಂಗಳೂರು ವಿವಿಯಿಂದ ಗೌರವ ಡಾಕ್ಟರೇಟ್, ಬಹುಮುಖ್ಯವಾಗಿ, 2008ರಲ್ಲಿ ಅಮೆರಿಕಾದ ಪ್ರಿನ್ಸ್ ಟನ್ ನಲ್ಲಿ ನಡೆದ ವಿಶ್ವ ಶಾಂತಿ ಸಮ್ಮೇಳನದಲ್ಲಿ ವಿಶೇಷ ಆಹ್ವಾನಿತರಾಗಿ ಭಾಗಿಯಾಗಿದ್ದವರು ಬನ್ನಂಜೆಯವರು. ಸುಮಾರು 84 ವರ್ಷಗಳ ಸುದೀರ್ಘ ಬದುಕಿನಲ್ಲಿ 65 ವರ್ಷಗಳ ಅವಧಿಯಲ್ಲಿ ಪತ್ರಕರ್ತ, ಸಂಪಾದಕ (1970ರ ದಶಕದಲ್ಲಿ ಸುಮಾರು ಮೂರು ದಶಕಗಳ ಕಾಲ 'ಉದಯವಾಣಿ' ದಿನಪತ್ರಿಕೆಯ ಸಾಪ್ತಾಹಿಕ ಪೂರಕ ಆವೃತ್ತಿಯ ಸಂಪಾದಕರಾಗಿ ಸೇವೆ ಸಲ್ಲಿಸಿದ್ದರು), ಸಾಹಿತಿ, ಸಂಶೋಧನೆ, ಅನುವಾದಕ, ಭಾಷಾಂತರಕಾರ, ಭಾಷ್ಯಕಾರ, ಕವಿ, ಪ್ರವಚನಕಾರ, ಉಪನ್ಯಾಸಕರಾಗಿ ಸಾರ್ಥಕ ಬದುಕನ್ನು ನಡೆಸಿ ಈ ಸಮಾಜಕ್ಕೆ ತನ್ನದೇ ಆದ ವಿಶೇಷ ಕೊಡುಗೆಗಳನ್ನು ನೀಡಿದ್ದಾರೆ. ದೇಶ-ವಿದೇಶಗಳಲ್ಲಿ ಇವರು ನೀಡಿದ ಧಾರ್ಮಿಕ ಹಾಗೂ ತತ್ವಶಾಸ್ತ್ರದ ಉಪನ್ಯಾಸಗಳು ಹತ್ತು ಸಾವಿರಕ್ಕೂ ಹೆಚ್ಚು ಗಂಟೆಗಳ ಧ್ವನಿಮುದ್ರಣಗಳನ್ನು ಹೊಂದಿವೆ. ಅವರಿಲ್ಲದೆಯೂ ಅವರ ಚಿಂತನೆಗಳು ಮತ್ತೂ ಮತ್ತೂ ಅವರ ಹೊಸ ಹೊಸ ಹೊಳಹುಗಳನ್ನು ಕೊಡುತ್ತಲೇ ಇರುತ್ತದೆ. ಇದು ಮಾತ್ರ ಆತ್ಯಂತಿಕವಾದ ಸತ್ಯವೆಂದು ನಾನು ನಂಬಿದ್ದೇನೆ.

1997ರ 50ರ ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಸ್ವಾತಂತ್ರ್ಯದ ಬಂಧನ ಎಂಬ ಅವರ ದೀರ್ಘ ಲೇಖನದ ಕೆಲವು ಸಾಲುಗಳನ್ನು ಈ ಸಂದರ್ಭದಲ್ಲಿ ಉಲ್ಲೇಖಿಸುತ್ತೇನೆ. ಬನ್ನಂಜೆಯವರ ತಾರ್ಕಿಕ ಚಿಂತನೆಗಳು ಹೇಗಿರುತ್ತವೆ ಎಂಬುದಕ್ಕೆ. ನೋಡಿ:

ಪ್ರಾಚೀನ ಭಾರತದಲ್ಲಿ ಅರಸೊತ್ತಿಗೆಯಿತ್ತು. ಈಗ ಪ್ರಜಾಪ್ರಭುತ್ವವಿದೆ.

ರಾಜಾ ಪ್ರತ್ಯಕ್ಷ ದೇವತಾ- ಎಂದು ಬದುಕಿದ ಮಂದಿಗೆ ಸ್ವಾತಂತ್ರ್ಯದ ಕಲ್ಪನೆಯೂ ಇರುವುದು ಸಾಧ್ಯವಿಲ್ಲ ಎನ್ನುತ್ತಾರೆ. ಹಿಂದೆ ಒಬ್ಬ ಮೂರ್ಖ ರಾಜನಿಗೆ ಬಗ್ಗಿ ನಡೆದರೆ ಸಾಕಿತ್ತು.

ಈಗ ರಾಜರಿಲ್ಲ, ಆದರೆ ಮೂರ್ಖರಿದ್ದಾರೆ.

ಒಬ್ಬ ಮೂರ್ಖನಿಗೆ ಬಗ್ಗಿ ನಡೆದರೆ ಅದು ಅರಸೊತ್ತಿಗೆ.

ನೂರು ಜನ ಮೂರ್ಖರಿಗೆ ಬಗ್ಗೆ ನಡೆಯುವುದು ಪ್ರಜಾಪ್ರಭುತ್ವ!

ಹಾಗೆ ನೋಡಿದರೆ ಬಹಳ ಹಿಂದೆ ಹಾಗಿರಲಿಲ್ಲ.

ಭಾರತದಲ್ಲಿ ಮೊದಲಿದ್ದದ್ದು ಗಣತಂತ್ರವೆ; ಪ್ರಜಾಪ್ರಭುತ್ವವೆ.

ಮಹಾಭಾರತ ಹೇಳುತ್ತದೆ: ಕೃತಯುಗದಲ್ಲಿ ರಾಜನೂ ಇರಲಿಲ್ಲ; ಶಿಕ್ಷೆಯೂ ಇರಲಿಲ್ಲ. ಏಕೆಂದರೆ ತಪ್ಪು ಮಾಡುವವರೇ ಇರಲಿಲ್ಲ. ಮನುಷ್ಯ ಸತ್ಯವನ್ನೇ ಹೇಳುತ್ತಿದ್ದ; ಪ್ರಾಮಾಣಿಕವಾಗಿ ಬದುಕುತ್ತಿದ್ದ.

ಕೃತಯುಗದ ಮನುಷ್ಯ ಬೋದಾಳ ಇದ್ದ. ದಡ್ಡ ಇದ್ದ.

ಒಂದು ದಿನ ಮನುಷ್ಯನಿಗೆ ಗೊತ್ತಾಗಿ ಹೋಯಿತು; ಸತ್ಯ ಹೇಳುವ ನಾಲಿಗೆಯಿಂದಲೇ ಅದಕ್ಕಿಂತಲೂ ಚೆನ್ನಾಗಿ ಸುಳ್ಳು ಹೇಳಲು ಬರುತ್ತೆ.

ಅವನಿಗೆ ತಿಳಿದು ಹೋಯಿತು; ಅಪ್ರಾಮಾಣಿಕನಾಗಿದ್ದೂ ಪ್ರಾಮಾಣಿಕತೆಯ ಮುಖವಾಡ ಧರಿಸಿ ಜನರನ್ನು ನಂಬಿಸಬಹುದು.

ಆಗ ತಕರಾರು ಬಂತು. ತೀರ್ಮಾನಕ್ಕೆ ನ್ಯಾಯಾಲಯಗಳು ಬಂದವು; ನ್ಯಾಯಾಧೀಶರು ಬಂದರು.

ಸುಳ್ಳನ್ನು ಸತ್ಯ ಎಂದು ಸಾಧಿಸಲು ವಕೀಲರು. ಶಿಕ್ಷಿಸಲ್ಪಡುವ ಪ್ರಜೆಗಳು; ಶಿಕ್ಷಿಸುವ ರಾಜ.

ಇದೆಲ್ಲ ಮನುಷ್ಯನ ಬುದ್ಧಿವಂತಿಕೆಯ ಆವಿಷ್ಕಾರಗಳು; ಅಮೃತ ಫಲಗಳು .(ಬನ್ನಂಜೆ ಬರೆಹಗಳು-2)

ಬನ್ನಂಜೆ ಎಂದಾಕ್ಷಣ ನೂರು ನೆನಪುಗಳು ಹುಟ್ಟಿಕೊಳ್ಳುತ್ತವೆ. ನಾನು ಓದಿದ ಕೇಳಿದ ಅವರ ಮಾತು ಕೃತಿಯೆಲ್ಲವೂ ನೆನಪಿಗೆ ಬರುತ್ತವೆ. ಅವರನ್ನು ಕಳೆದುಕೊಂಡೆವು ಎಂದು ಈಗಲೂ ಒಪ್ಪಲು ಮನಸು ಸಿದ್ಧವಿಲ್ಲ. ಯಾವುದಾದರೂ ಸಮಸ್ಯೆ ಎದುರಾದರೆ ಬನ್ನಂಜೆಯವರನ್ನು ಕೇಳಿದರಾಯಿತು. ಅವರು ಪರಿಹಾರ ಕೊಡಬಲ್ಲರು ಎಂಬ ಧೈರ್ಯವಿತ್ತು. ಯಾವ ಹೊತ್ತಿಗೂ ಆ ಧೈರ್ಯವನ್ನು ಅವರ ಪ್ರವಚನ, ಬರೆಹಗಳೇ ಕೊಡಬಲ್ಲುದು ಎಂಬುದು ನನ್ನ ಬಲವಾದ ನಂಬಿಕೆ. ಎರಡು ಸಲ ಅವರನ್ನು ನೋಡಿ ಮಾತಾಡಿಸುವ ಭಾಗ್ಯ ನನಗೊದಗಿತ್ತು ಎಂಬ ದೊಡ್ಡಭಾವ ನನ್ನಲ್ಲಿದೆ. ನಾನು ಸಂಪಾದಿಸಿದ್ದ ಅದಮಾರು ಮಠದ ಪೂಜ್ಯ ಶ್ರೀ ವಿಬುಧೇಶತೀರ್ಥರ ಅಭಿವಂದನಾ ಗ್ರಂಥಕ್ಕೆ ಅವರಿಂದ ಲೇಖನವನ್ನು ಕೇಳಿದ್ದೆ. ವಿಸ್ತಾರವಾಗಿ ಬರೆದುಕೊಟ್ಟದ್ದನ್ನು ನಾನು ಯಾವತ್ತೂ ಸ್ಮರಿಸುತ್ತೇನೆ.

ಆ ಗ್ರಂಥದ ಬಿಡುಗಡೆಯ ಸಂದರ್ಭದಲ್ಲಿ ಅವರನ್ನು ಕಂಡು ಕಾಲನ್ನು ಮುಟ್ಟಿ ನಮಸ್ಕರಿಸಿದ್ದೆ. ಒಳ್ಳೆಯದಾಗಲಿ ಎಂದು ಹರಸಿದ್ದರು. ಅವರನ್ನು ನಾನು, ಬರೆಯುವುದನ್ನು ಕಲಿಸಿದ ಗುರುಗಳು ಎಂದೇ ತಿಳಿದಿದ್ದೇನೆ.

ಆ ಮೂಲಕ ಅವರಂತೆಯೇ ವಾಕ್ಯರಚನೆಯನ್ನು ಮಾಡಲು ಅನುಕರಿಸಿದ್ದೇನೆ. ಅವರ ಋಣಭಾರವನ್ನು ಅಕ್ಷರ ರೂಪದಲ್ಲಿ ಸ್ವಲ್ಪಮಟ್ಟಿಗಾದರೂ ತೀರಿಸುವ ಪ್ರಯತ್ನವಿದು. ಮರೆಯಲುಂಟೆ ಆ ಶ್ರೇಷ್ಠ ಸಾಧಕನನ್ನು!

ಆಡಲೇಬೇಕಾದ ಮಾತುಗಳಿವು: ಬೆಲೆಯಿಂದಕ್ಕುಮೆ ಕೃತಿ? ಗಾವಿಲ! ಭುವನದ ಭಾಗ್ಯದಿಂದಮಕ್ಕುಂನೋಳ್ಪಂ- ಎನ್ನುತ್ತಾನೆ ನೇಮಿಚಂದ್ರ. ಒಳ್ಳೆಯ ಕವಿಗಳು, ಒಳ್ಳೆಯ ಕೃತಿಗಳು ಭುವನದ ಭಾಗ್ಯದಿಂದ ಮಾತ್ರ ಬರುತ್ತದೆ. ಒಂದು ದೇಶದ ಗೌರವ, ಘನತೆ ಹೆಚ್ಚುವುದು ಅದರ ನೆಲದಿಂದಲ್ಲ. ಅಲ್ಲಿಯ ಸಾಹಿತ್ಯ-ಸಂಸ್ಕೃತಿ-ಕಲೆಗಳಿಂದ.

ರವಿ ಕಾಣದ್ದನ್ನು ಕವಿ ಕಾಣಬಲ್ಲ ಅಂತಾರೆ. ಕವಿಸೃಷ್ಟಿ ವಿಶ್ವದ ನಡೆ-ನುಡಿಯನ್ನು ತಿದ್ದುವ ಮೂಲಕ ರಾಷ್ಟ್ರಪ್ರೇಮ, ರಾಷ್ಟ್ರಕ್ಷೇಮ, ರಾಷ್ಟ್ರಭಕ್ತಿಯನ್ನು ಹುಟ್ಟಿಸುತ್ತದೆ. ರಾಷ್ಟ್ರ ಜಾಗೃತಿಯ ಪ್ರಜ್ಞೆಯನ್ನು ಬೆಳೆಸುತ್ತದೆ. ಲೇಖನಿ ಕತ್ತಿಗಿಂತ ಮಿಗಿಲಾದ ಕಾರ್ಯಸಾಧನೆಯನ್ನು ಮಾಡುತ್ತದೆ. ಇದು ಕವಿಸೃಷ್ಟಿಯ ವೈಶಿಷ್ಟ್ಯ, ವೈಚಿತ್ರ್ಯ ಹಾಗೂ ಚಮತ್ಕಾರ. ಬನ್ನಂಜೆಯವರು ಇಂಥ ಶ್ರೇಷ್ಠ ಕವಿ ಪರಂಪರೆಯಲ್ಲಿ ಸರ್ವಕಾಲಕ್ಕೂ ಅಗ್ರಮಾನ್ಯರಾಗಿ ಸಲ್ಲುವವರು. ನಿಜಕ್ಕೂ ಭಾರತದ ನೆಲ ಒಬ್ಬ ಶ್ರೇಷ್ಠ ಕವಿ, ವಿದ್ವಾಂಸ, ಅಪ್ರತಿಮ ವಾಗ್ಮಿ, ಅನುಪಮ ಸೃಷ್ಟಿಶೀಲ ಪ್ರತಿಭಾ ಸಂಪನ್ನನ್ನು ಕಳೆದುಕೊಂಡಿದೆ. ತುಂಬಲಾರದ ನಷ್ಟವೆಂದು ಹೇಳುವುದು, ಹೇಳಬೇಕಾದುದು ಇಂಥ ಮಹಾನ್ ಸಾಧಕರು ನಮ್ಮನ್ನು ಅಗಲಿದಾಗ ಮಾತ್ರ! ಬನ್ನಂಜೆ ಮತ್ತೆ ಹುಟ್ಟಿಬರಲೆಂದು ಆಶಿಸುವುದು, ಪ್ರಾರ್ಥಿಸುವುದು ಈ ಕಾರಣಕ್ಕಾಗಿ!



**ಟಿ. ದೇವಿದಾಸ್**

# 'ಸಭಾಪತಿ ರಾಜೀನಾಮೆ ಸ್ವಾಗತಾರ್ಹ; ಬಿಜೆಪಿ ರಾಜಕೀಯ ಮಾಡುತ್ತಿದೆ'

● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ನಿಯಮಾವಳಿ ಹಾಗೂ ಸಂಸದೀಯ ಪರಂಪರೆಗೆ ಅನುಗುಣವಾಗಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ಸ್ವಾಗತಾರ್ಹ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಹಾಗೂ ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ಹೇಳಿದ್ದಾರೆ.



ಶುಕ್ರವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ವಿಧಾನ ಪರಿಷತ್ತಿನಲ್ಲಿ ಯಾವುದೇ ಪಕ್ಷದ ಸಂಖ್ಯಾಬಲ ಕಡಿಮೆಯಾದಾಗ ಸಭಾಪತಿ ಅಥವಾ ಉಪಸಭಾಪತಿ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡುವುದು ಪರಂಪರೆಯಾಗಿದೆ ಎಂದು ತಿಳಿಸಿದರು. ಪ್ರಸ್ತುತ ಪರಿಷತ್ತಿನಲ್ಲಿ ಕಾಂಗ್ರೆಸ್‌ಗೆ 39, ಬಿಜೆಪಿಗೆ 24, ಜೆಡಿಎಸ್‌ಗೆ 6 ಹಾಗೂ ಒಬ್ಬ ಪಕ್ಷೇತರ ಸದಸ್ಯರಿದ್ದು, ಇದೇ ತಿಂಗಳ 13ರಿಂದ ಅಧಿವೇಶನ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಬಸವರಾಜ ಹೊರಟ್ಟಿ ಅವರು ರಾಜೀನಾಮೆ ನೀಡುವ ಮೂಲಕ ಸಂಸದೀಯ ಸಂಪ್ರದಾಯವನ್ನು ಮುಂದುವರಿಸಿದ್ದಾರೆ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಹೊರಟ್ಟಿ ಅವರ ರಾಜೀನಾಮೆಗೆ ರಾಜಕೀಯ ಬಣ್ಣ ಬಳಿಯುತ್ತಿರುವುದು ಸೂಕ್ತವಲ್ಲ ಎಂದು ರಮೇಶ್ ಬಾಬು ಟೀಕಿಸಿದರು. 2021ರಲ್ಲಿ ಕಾಂಗ್ರೆಸ್‌ನ ಪ್ರತಾಪಚಂದ್ರ ಶೆಟ್ಟಿ ಸಭಾಪತಿಯಾಗಿದ್ದಾಗ ಸಂಖ್ಯಾಬಲದ ನೆಪದಲ್ಲಿ ಬಿಜೆಪಿ ರಾಜೀನಾಮೆಗೆ ಒತ್ತಾಯಿಸಿ ಪರಿಷತ್ತಿನ ಕಲಾಪಕ್ಕೂ ಅಡ್ಡಿಪಡಿಸಿತ್ತು.

ಅಂದು ಅನುಸರಿಸಿದ್ದ ನಿಲುವಿಗೆ ವಿರುದ್ಧವಾಗಿ ಇಂದು ಬಿಜೆಪಿ ನಾಯಕರು ರಾಜಕೀಯ ಭಾಷಣ ಮಾಡುತ್ತಿರುವುದು ಅವರ ನೈತಿಕ ದಿವಾಳಿತನವನ್ನು ತೋರಿಸುತ್ತದೆ ಎಂದು ಆರೋಪಿಸಿದರು.

ಮೂರು ದಿನಗಳ ಹಿಂದಷ್ಟೇ ಬಸವರಾಜ ಹೊರಟ್ಟಿ ಅವರು ರಾಜೀನಾಮೆ ನೀಡದಂತೆ ಬಿಜೆಪಿ ನಾಯಕರು ಒತ್ತಡ ಹೇರಿದ್ದರು ಎಂದು ದೂರಿದ ಅವರು, ಈಗ ಅದನ್ನೇ ರಾಜಕೀಯವಾಗಿ ಬಳಸಿಕೊಳ್ಳಲು ಯತ್ನಿಸುತ್ತಿದ್ದಾರೆ ಎಂದರು. ರಾಜ್ಯದ ಮತದಾರರ ಪಟ್ಟಿಯ ಪರಿಷ್ಕರಣೆ ವಿಚಾರದಿಂದ ಜನರ ಗಮನ ಬೇರೆಡೆ ಸೆಳೆಯಲು ಸಭಾಪತಿ ರಾಜೀನಾಮೆ ವಿಚಾರವನ್ನು ಬಿಜೆಪಿ ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದರು.

ಮತದಾರರ ಪಟ್ಟಿಯಲ್ಲಿ ಹೆಸರು ಕೈಬಿಟ್ಟಿರುವ ವಿಚಾರದಲ್ಲಿ ಜನರಲ್ಲಿ ಗೊಂದಲ ಸೃಷ್ಟಿಸಿ ರಾಜಕೀಯ ಲಾಭ ಪಡೆಯುವ ಪ್ರಯತ್ನವನ್ನು ಬಿಜೆಪಿ ಮಾಡುತ್ತಿದೆ ಎಂದು ಟೀಕಿಸಿದ ರಮೇಶ್ ಬಾಬು, ಇತಿಹಾಸ ಮತ್ತು ದಾಖಲೆಗಳನ್ನು ತಿರುಚುವ ಮೂಲಕ ಸಭಾಪತಿ ಹುದ್ದೆಯನ್ನೂ ರಾಜಕೀಯಕ್ಕೆ ಎಳೆಯುತ್ತಿರುವ ಬಿಜೆಪಿಯ ಕ್ರಮವನ್ನು ಕೆಪಿಸಿಸಿ ತೀವ್ರವಾಗಿ ಖಂಡಿಸುತ್ತದೆ ಎಂದು ಹೇಳಿದರು.

ವಿಧಾನ ಪರಿಷತ್ತಿನಲ್ಲಿ ಜನಪರ ವಿಚಾರಗಳ ಬಗ್ಗೆ ಚರ್ಚೆ ನಡೆಸುವಲ್ಲಿ ವಿಫಲವಾಗಿರುವ ಬಿಜೆಪಿ ನಾಯಕರು ಇದೀಗ ಸಭಾಪತಿ ರಾಜೀನಾಮೆ ವಿಷಯವನ್ನು ರಾಜಕೀಯ ಅಸ್ತ್ರವನ್ನಾಗಿ ಬಳಸುತ್ತಿದ್ದಾರೆ ಎಂದು ಅವರು ಆರೋಪಿಸಿದರು.

# ಮನವೊಲಿಕೆ ಬಳಿಕ ಹೊರಟ್ಟಿ ರಾಜೀನಾಮೆ

1ನೇ ಪುಟದಿಂದ

ಮುಂದಿನ ವಿಧಾನ ಮಂಡಲದ ಅಧಿವೇಶನದಲ್ಲಿ ಸಭಾಪತಿ ಮತ್ತು ಉಪಸಭಾಪತಿ ಆಯ್ಕೆಗೆ ಕಾಂಗ್ರೆಸ್ ಮುಂದಾಗಿತ್ತು.

ಈ ಹಿಂದೆ ಜೆಡಿಎಸ್ ಹಾಗೂ ಬಿಜೆಪಿ ಬೆಂಬಲದಿಂದ ಸಭಾಪತಿಯಾಗಿ ಆಯ್ಕೆಯಾಗಿದ್ದ ಬಸವರಾಜ ಹೊರಟ್ಟಿಯವರಿಗೆ ರಾಜೀನಾಮೆ ನೀಡುವಂತೆ ನಾಲ್ಕೈದು ದಿನಗಳ ಹಿಂದೆಯೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೂರವಾಣಿ ಕರೆ ಮಾಡಿ ಮನವಿ ಮಾಡಿದ್ದರು. ಆದರೆ ಅವರು ರಾಜೀನಾಮೆ ಕೊಡಲು ಹಿಂದೇಟು ಹಾಕಿ, ರಾಜೀನಾಮೆ ಕೊಡಲ್ಲ, ಅವಿಶ್ವಾಸ ನಿರ್ಣಯ ಮಂಡಿಸಿ ಎಂದು ಸವಾಲು ಹಾಕಿದ್ದರು. ಇದು ಸಭಾಪತಿ ಹಾಗೂ ಉಪಸಭಾಪತಿ ಆಯ್ಕೆಯನ್ನು ಮತ್ತಷ್ಟು ಜಟಿಲಗೊಳಿಸಿತ್ತು.

ಸಭಾಪತಿ ಹೊರಟ್ಟಿಯವರ ಹೇಳಿಕೆಯ ನಂತರ ಅವರ ಮನವೊಲಿಸುವ ಪ್ರಯತ್ನವನ್ನು ಕಾಂಗ್ರೆಸ್ ನಾಯಕರು ನಡೆಸಿದ್ದರು.

ಅದರಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ರವರು ಸಭಾಪತಿ ಬಸವರಾಜ ಹೊರಟ್ಟಿಯವರ ಮನವೊಲಿಸಿ ರಾಜೀನಾಮೆ ಕೊಡಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಸವರಾಜ ಹೊರಟ್ಟಿಯವರ ರಾಜೀನಾಮೆಯಿಂದ ತೆರವಾಗಿರುವ ಸಭಾಪತಿ ಸ್ಥಾನಕ್ಕೆ ಕಾಂಗ್ರೆಸ್‌ನ ಸಲೀಂ ಅಹಮದ್ ಆಯ್ಕೆಯಾಗಲಿದ್ದು, ಉಪಸಭಾಪತಿಯಾಗಿದ್ದ ಪ್ರಾಣೇಶ್ ಅವರು ಈಗಾಗಲೇ ರಾಜೀನಾಮೆ ನೀಡಿದ್ದು, ಉಪಸಭಾಪತಿ ಸ್ಥಾನಕ್ಕೆ ಉಮಾಶ್ರೀ ನಿಯುಕ್ತಿಗೊಳ್ಳಲಿದ್ದಾರೆ.

ಬಸವರಾಜ ಹೊರಟ್ಟಿ ರಾಜೀನಾಮೆ ಅಂಗೀಕಾರ: ಸಭಾಧ್ಯಕ್ಷ ಸ್ಥಾನಕ್ಕೆ ನೀಡಿರುವ ರಾಜೀನಾಮೆಯನ್ನು ಉಪಸಭಾಪತಿಗಳು ಇಲ್ಲದಿರುವ ಕಾರಣ, ವಿಧಾನಪರಿಷತ್ ಕಾರ್ಯದರ್ಶಿಗಳಿಗೆ ಸಲ್ಲಿಕೆ ಮಾಡಿದ್ದಾರೆ. ರಾಜೀನಾಮೆ ಪತ್ರ ಸ್ವೀಕರಿಸಿರುವ ವಿಧಾನ ಪರಿಷತ್ತು ಕಾರ್ಯದರ್ಶಿಗಳು, ಸಭಾಪತಿ ಹುದ್ದೆ ತೆರವಾಗಿದೆ ಎಂದು ಅಧಿಸೂಚನೆಯನ್ನೂ ಹೊರಡಿಸಿದ್ದಾರೆ.

ನಿಯಮದ ಪ್ರಕಾರ ಯಾವಾಗಲೂ ರಾಜೀನಾಮೆ ಕೊಡುವಾಗ ಉಪಸಭಾಪತಿಗೆ ರಾಜೀನಾಮೆಗೆ ಸಲ್ಲಿಸಬೇಕು. ಉಪಸಭಾಪತಿ ಸ್ಥಾನ ಖಾಲಿ ಇದ್ದರೂ ಉಪಸಭಾಪತಿಗೆ ಸಭಾಪತಿ ರಾಜೀನಾಮೆ ಪತ್ರ ಸಲ್ಲಿಸಬೇಕು. ಅದನ್ನು ಕಾರ್ಯದರ್ಶಿ ರಾಜ್ಯಪಾಲರಿಗೆ ರವಾನಿಸಿ ಅಂಗೀಕಾರ ಪಡೆದುಕೊಳ್ಳುತ್ತಾರೆ.

## ಬೆಂಗಳೂರು ಟ್ರಾಫಿಕ್‌ಗೆ ಪಂಚಸೂತ್ರ

1ನೇ ಪುಟದಿಂದ

ನಗರದ ಮೇಲ್ಸೇತುವೆಗಳಲ್ಲಿ ಅಪಘಾತ ಹಾಗೂ ಸಂಚಾರ ದಟ್ಟಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪೀಕ್ ಅವರ್‌ಗಳಲ್ಲಿ ಬೈಕ್‌ಗಳ ಸಂಚಾರಕ್ಕೆ ನಿರ್ಬಂಧ ವಿಧಿಸುವ ಪ್ರಸ್ತಾವವೂ ಪರಿಶೀಲನೆಯಲ್ಲಿದೆ. ಎಲೆಕ್ಟ್ರಾನಿಕ್ ಸಿಟಿ ಎಲಿವೇಟೆಡ್ ಕಾರಿಡಾರ್, ಬಾಲಗಂಗಾಧರನಾಥ ಸ್ವಾಮೀಜಿ ಮೇಲ್ಸೇತುವೆ, ರಾಗಿಗುಡ್ಡ ಡಬಲ್ ಡೆಕ್ಕರ್ ಹಾಗೂ ಜಕ್ಕೂರು ಮೇಲ್ಸೇತುವೆಗಳಲ್ಲಿ ಪ್ರಾಯೋಗಿಕವಾಗಿ ಈ ವ್ಯವಸ್ಥೆ ಜಾರಿಗೊಳಿಸುವ ಕುರಿತು ಇಲಾಖೆ ಚಿಂತನೆ ನಡೆಸಿದೆ.

ಈ ಪಂಚಸೂತ್ರ ಜಾರಿಗೆ ಸರ್ಕಾರದ ಅನುಮೋದನೆ ಹಾಗೂ ವಿವಿಧ ಇಲಾಖೆಗಳ ಸಮನ್ವಯ ಅಗತ್ಯವಿದ್ದು, ಅನುಷ್ಠಾನಗೊಂಡರೆ ಬೆಂಗಳೂರಿನ ಸಂಚಾರ ದಟ್ಟಣೆ ಗಣನೀಯವಾಗಿ ಕಡಿಮೆಯಾಗುವ ನಿರೀಕ್ಷೆಯಿದೆ.

## ಎಸ್‌ಐಆರ್ ಬಳಿಕ ಗೃಹಲಕ್ಷ್ಮಿ ಫಲಾನುಭವಿಗಳ ಮರುಪರಿಶೀಲನೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಅರ್ಜಿಗಳನ್ನು ಮರುಪರಿಶೀಲಿಸಲು ಸರ್ಕಾರ ಸಿದ್ಧತೆ ನಡೆಸಿದೆ. ಅರ್ಹ ಫಲಾನುಭವಿಗಳನ್ನು ಮಾತ್ರ ಯೋಜನೆಯಲ್ಲಿ ಮುಂದುವರಿಸುವ ಉದ್ದೇಶದಿಂದ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ ಸರ್ಕಾರ ಆದೇಶ ಹೊರಡಿಸಿದೆ.

ಜಿಲ್ಲಾ ಮಟ್ಟದ ಸಮಿತಿಯಲ್ಲಿ ಜಿಲ್ಲಾಧಿಕಾರಿ, ಸಂಬಂಧಿಸಿದ ಸರ್ಕಾರಿ ಅಧಿಕಾರಿಗಳು ಹಾಗೂ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಇರಲಿದ್ದಾರೆ. ತಾಲ್ಲೂಕು ಮಟ್ಟದ ಸಮಿತಿಯಲ್ಲಿ ತಹಸೀಲ್ದಾರ್, ಸಂಬಂಧಿಸಿದ ಅಧಿಕಾರಿಗಳು ಹಾಗೂ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಇರಲಿದ್ದಾರೆ.

ಮರುಪರಿಶೀಲನೆ ವೇಳೆ ಫಲಾನುಭವಿಗಳು ತಮ್ಮ ಭಾವಚಿತ್ರದೊಂದಿಗೆ ಮತದಾರರ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಪಿಂಚಣಿ ಪಡೆಯುತ್ತಿರುವವರು, ಆದಾಯ ತೆರಿಗೆ ಮತ್ತು ಜಿಎಸ್‌ಟಿ ಪಾವತಿದಾರರು, ಸರ್ಕಾರಿ ನೌಕರರು ಹಾಗೂ ನಿವೃತ್ತಿ ಪಿಂಚಣಿ ಪಡೆಯುತ್ತಿರುವವರ ಮಾಹಿತಿಯನ್ನೂ ಅಧಿಕಾರಿಗಳು ಸಂಗ್ರಹಿಸಲಿದ್ದಾರೆ.

# ಕಟ್ಟಡ ತ್ಯಾಜ್ಯ ತೆರವಿಗೆ ಇಲಾಖೆಗಳಿಗೆ ಖಡಕ್ ಸೂಚನೆ

● ವಿಕ್ರಮ ವಾಹಿನಿ | ಬೆಂಗಳೂರು



'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಮನ್ವಯ ಸಭೆ ನಡೆಸಿ, ಕಾಮಗಾರಿಗಳಿಂದ ಉಂಟಾಗುವ ಕಟ್ಟಡ ಮತ್ತು ನೆಲಸಮ (ಸಿ&ಡಿ) ತ್ಯಾಜ್ಯವನ್ನು ಸಂಬಂಧಿತ ಇಲಾಖೆಗಳೇ ಕಡ್ಡಾಯವಾಗಿ ತೆರವುಗೊಳಿಸಬೇಕು ಎಂದು ಸೂಚಿಸಿದರು.

ಬೆಂಗಳೂರು ಉತ್ತರ ನಗರ ಪಾಲಿಕೆಯಲ್ಲಿ ನಡೆದ ಸಭೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ), ಬೆಂಗಳೂರು ಜಲಮಂಡಳಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ದಕ್ಷಿಣ ಪಶ್ಚಿಮ ರೈಲ್ವೆ, ಬೆಂಗಳೂರು ಮೆಟ್ರೋ, ಬೆಸ್ಕಾಂ, ಕೆಪಿಟಿಸಿಎಲ್, ಕೆಐಎಡಿಬಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿ ತಮ್ಮ ವ್ಯಾಪ್ತಿಯ ಸ್ವಚ್ಛತಾ ಕಾರ್ಯಗಳ ಪ್ರಗತಿ ಕುರಿತು ಮಾಹಿತಿ ನೀಡಿದರು.

ಸಭೆಯಲ್ಲಿ ಮಾತನಾಡಿದ ಆಯುಕ್ತರು, ನಗರ ಸ್ವಚ್ಛತೆಗೆ ಎಲ್ಲ ಇಲಾಖೆಗಳು ಸಮಾನ ಹೊಣೆಗಾರಿಕೆ ವಹಿಸಬೇಕು. ಕಾಮಗಾರಿಗಳಿಂದ ಉತ್ಪತ್ತಿಯಾಗುವ ಸಿ&ಡಿ ತ್ಯಾಜ್ಯವನ್ನು ನಿಗದಿತ ಡಂಪಿಂಗ್ ಕೇಂದ್ರಗಳಿಗೆ ಸಾಗಿಸುವುದು ಸಂಬಂಧಿತ ಇಲಾಖೆಗಳ ಜವಾಬ್ದಾರಿಯಾಗಿದೆ. ಈ ಕಾರ್ಯದಲ್ಲಿ ನಿರ್ಲಕ್ಷ್ಯ ತೋರಿದರೆ ಸಂಬಂಧಪಟ್ಟ ಇಲಾಖೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪಾಲಿಕೆ ವ್ಯಾಪ್ತಿಯ ಎಲ್ಲ ಅಭಿಯಂತರರು ತಮ್ಮ ಪ್ರದೇಶದಲ್ಲಿರುವ ಸಿ&ಡಿ ತ್ಯಾಜ್ಯ ಇರುವ ಸ್ಥಳಗಳನ್ನು ಗುರುತಿಸಿ ಶೀಘ್ರ ತೆರವುಗೊಳಿಸುವಂತೆ ಸೂಚಿಸಿದ ಅವರು, ರೈಲ್ವೆ ನಿಲ್ದಾಣಗಳು ಹಾಗೂ ರೈಲ್ವೆ ಆವರಣಗಳಲ್ಲಿ ಸಮರ್ಪಕ ಕಸದ ಬುಟ್ಟಿಗಳನ್ನು ಅಳವಡಿಸಿ ಸ್ವಚ್ಛತೆ ಕಾಪಾಡುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.


ಪ್ರತಿ ಇಲಾಖೆಯು ಪ್ರತಿದಿನ ತೆರವುಗೊಳಿಸಿದ ತ್ಯಾಜ್ಯದ ಪ್ರಮಾಣ ಮತ್ತು ವಿವರಗಳನ್ನು ಪಾಲಿಕೆಗೆ ಸಲ್ಲಿಸಬೇಕು. ತ್ಯಾಜ್ಯ ಸಾಗಿಸುವ ಪ್ರತಿಯೊಂದು ವಾಹನದ ಸಂಖ್ಯೆ, ಸಮಯ, ಸಂಬಂಧಿತ ಇಲಾಖೆ ಹಾಗೂ ಸಾಗಣೆ ವಿವರಗಳನ್ನು ಮೊಬೈಲ್‌ನಲ್ಲಿ ದಾಖಲಿಸಲಾಗುತ್ತಿದ್ದು, ಪ್ರತಿ ವಾಹನಕ್ಕೆ ಇಬ್ಬರು ಮಾರ್ಷಲ್‌ಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು. ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಸುಮಾರು 20 ಸಾವಿರ ಟನ್ ಸಿ&ಡಿ ತ್ಯಾಜ್ಯ ತೆರವುಗೊಳಿಸುವ ಗುರಿ ಹೊಂದಲಾಗಿದ್ದು, ಯೋಜಿತ ರೀತಿಯಲ್ಲಿ ಕಾರ್ಯ ಪೂರ್ಣಗೊಳಿಸಬೇಕು. ಸ್ವಚ್ಛತಾ ಕಾರ್ಯಕ್ಕೆ ಅಡ್ಡಿಪಡಿಸುವವರ ವಿರುದ್ಧ ಅಗತ್ಯವಿದ್ದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ತಮ್ಮ ಕಾರ್ಯಯೋಜನೆ ಹಾಗೂ ಪ್ರಗತಿ ಕುರಿತು ವಿವರಿಸಿದರು.

# ಹೆಸರಘಟ್ಟದಲ್ಲಿ ಭಾರತದ ಮೊದಲ 'ಕ್ವಾಂಟಮ್ ಸಿಟಿ': ಡಿಕೆಶಿ

● ವಿಕ್ರಮ ವಾಹಿನಿ | ಬೆಂಗಳೂರು

ಹೆಸರಘಟ್ಟದಲ್ಲಿ ಭಾರತದ ಮೊದಲ 'ಕ್ವಾಂಟಮ್ ಸಿಟಿ' ನಿರ್ಮಾಣವಾಗುತ್ತಿದ್ದು, ಇದು ಸಂಶೋಧನೆ ಮತ್ತು ಅತ್ಯಾಧುನಿಕ ತಂತ್ರಜ್ಞಾನ ಅಭಿವೃದ್ಧಿಯ ಪ್ರಮುಖ ಕೇಂದ್ರವಾಗಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಬೆಂಗಳೂರಿನ ಸೈನ್ಸ್ ಗ್ಯಾಲರಿಯಲ್ಲಿ 'ಕ್ವಾಂಟಮ್' ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು, ಕ್ವಾಂಟಮ್ ತಂತ್ರಜ್ಞಾನದಲ್ಲಿ ಕರ್ನಾಟಕವನ್ನು ಜಾಗತಿಕ ಕೇಂದ್ರವನ್ನಾಗಿ ರೂಪಿಸಲಾಗುತ್ತಿದೆ ಎಂದರು. ಧಾರವಾಡದ ಐಐಐಟಿಯಲ್ಲಿ ಕ್ವಾಂಟಮ್ ಕೃತಕ ಬುದ್ಧಿಮತ್ತೆ ಮತ್ತು ಕಂಪ್ಯೂಟಿಂಗ್ ಶ್ರೇಷ್ಠತಾ ಕೇಂದ್ರ ಸ್ಥಾಪಿಸಲಾಗಿದೆ ಎಂದು ಹೇಳಿದರು.

ಬೆಂಗಳೂರು-ಅಮೆರಿಕ ತಂತ್ರಜ್ಞಾನ ಸಹಭಾಗಿತ್ವ ಬಲಪಡಿಸಲು ನಗರದಲ್ಲಿ ಪೂರ್ಣ ಪ್ರಮಾಣದ ಅಮೆರಿಕ ಕಾನ್ಸುಲೇಟ್ ಸ್ಥಾಪಿಸಬೇಕು ಎಂದು ಮನವಿ ಮಾಡಿದರು. 'ಕ್ವಾಂಟಮ್' ಪ್ರದರ್ಶನವನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲಾಗಿದೆ ಎಂದು ತಿಳಿಸಿದರು.



# ಆ.9ರಂದು ನೇರಳೆ ಮಾರ್ಗದಲ್ಲಿ 2 ಗಂಟೆ ಮೆಟ್ರೋ ಸ್ಥಗಿತ

● ವಿಕ್ರಮ ವಾಹಿನಿ | ಬೆಂಗಳೂರು

ನಿರ್ವಹಣಾ ಕಾಮಗಾರಿ ಹಿನ್ನೆಲೆಯಲ್ಲಿ ಆಗಸ್ಟ್ 9ರಂದು ನೇರಳೆ ಮಾರ್ಗದ ಬೈಯಪ್ಪನಹಳ್ಳಿ-ಎಂ.ಜಿ. ರಸ್ತೆ ನಡುವಿನ ಮೆಟ್ರೋ ಸೇವೆ ಬೆಳಗ್ಗೆ 7ರಿಂದ 9ರವರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳ್ಳಲಿದೆ ಎಂದು ಬಿಎಂಆರ್‌ಸಿಎಲ್ ತಿಳಿಸಿದೆ.

ಈ ಅವಧಿಯಲ್ಲಿ ಟ್ರಿನಿಟಿ, ಎಂ.ಜಿ. ರಸ್ತೆ ಸೇರಿದಂತೆ ಮಾರ್ಗದ ಆರು ನಿಲ್ದಾಣಗಳಲ್ಲಿ ರೈಲು ಸಂಚಾರ ಇರುವುದಿಲ್ಲ. ಉಳಿದ ಮಾರ್ಗಗಳಲ್ಲಿ ಮೆಟ್ರೋ ಸೇವೆ ಎಂದಿನಂತೆ ಮುಂದುವರಿಯಲಿದೆ. ಬೆಳಗ್ಗೆ 9ರಿಂದ ಬೈಯಪ್ಪನಹಳ್ಳಿ-ಎಂ.ಜಿ. ರಸ್ತೆ ನಡುವಿನ ಸೇವೆಯೂ ಪುನರಾರಂಭಗೊಳ್ಳಲಿದ್ದು, ಪ್ರಯಾಣಿಕರು ಮುಂಚಿತವಾಗಿ ತಮ್ಮ ಪ್ರಯಾಣ ಯೋಜಿಸಿಕೊಳ್ಳುವಂತೆ ಬಿಎಂಆರ್‌ಸಿಎಲ್ ಮನವಿ ಮಾಡಿದೆ. ಸ್ವಾಮಿ ವಿವೇಕಾನಂದ ರಸ್ತೆ ಮತ್ತು ಇಂದಿರಾನಗರ ಮೆಟ್ರೋ ನಿಲ್ದಾಣಗಳ ನಡುವಿನ ನಿರ್ವಹಣಾ ಕಾಮಗಾರಿ ಪೂರ್ಣಗೊಳಿಸಲು ಈ ತಾತ್ಕಾಲಿಕ ಸೇವಾ ವ್ಯತ್ಯಯ ಕೈಗೊಳ್ಳಲಾಗಿದೆ. ಪ್ರಯಾಣಿಕರ ಅನುಕೂಲಕ್ಕಾಗಿ ಚಲ್ಲಘಟ್ಟ-ಎಂ.ಜಿ. ರಸ್ತೆ, ಬೈಯಪ್ಪನಹಳ್ಳಿ-ವೈಟ್‌ಫೀಲ್ಡ್ ಸೇರಿದಂತೆ ಇತರ ಮಾರ್ಗಗಳಲ್ಲಿ ಮೆಟ್ರೋ ಸಂಚಾರ ಸಾಮಾನ್ಯವಾಗಿ ಇರಲಿದೆ.

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ಆಗಸ್ಟ್, 08- 2026
ಶನಿವಾರ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481


# ಸರಿಯಾಗಿ ಮಾಡಿದ ಊಟಕ್ಕೆ ಅಗ್ನಿಹೋತ್ರದ ಫಲ!

● ವಿಕ್ರಮ ವಾಹಿನಿ । ಗೋಕರ್ಣ

ಪ್ರತಿಯೊಬ್ಬ ಮನುಷ್ಯನಿಗೂ ಇಷ್ಟು ಬಾರಿ ಉಸಿರಾಟ ಎಂದು ವಿಧಿ ಮೊದಲೇ ನಿಗದಿಸಿದಂತೆ, ಪ್ರತಿಯೊಬ್ಬ ಮನುಷ್ಯನಿಗೂ ಅವನ ಜೀವಿತಾವಧಿಯಲ್ಲಿ ಇಷ್ಟು ಆಹಾರ ಸ್ವೀಕರಿಸಬಹುದು ಎಂದು ವಿಧಿ ಬರೆದಿರುತ್ತದೆ. ದೀರ್ಘ ಉಸಿರಾಟದ ಮೂಲಕ ಹೆಚ್ಚು ಕಾಲ ಜೀವಿಸಬಹುದು. ಹಾಗೆಯೇ ಅಗತ್ಯಕ್ಕಿಂತ ಹೆಚ್ಚೆಚ್ಚೆ ಆಹಾರ ಸ್ವೀಕರಿಸಿದಂತೆ ಅವನು ಮೃತ್ಯುವಿಗೆ ಹೆಚ್ಚೆಚ್ಚೆ ಹತ್ತಿರವಾಗುತ್ತಾ ಸಾಗುತ್ತಾನೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ತಿಳಿಸಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 07.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಅನ್ನವೇ ಮೃತ್ಯು ಹಾಗೂ ಅನ್ನವೇ ಜೀವನಕ್ಕೆ ಕಾರಣ ಎಂದು ಭಾರತೀಯ ಶಾಸ್ತ್ರಗಳು ಹೇಳಿವೆ. ಆಹಾರವನ್ನು ಸರಿಯಾಗಿ ಬಳಸಿದಾಗ ಅದು ಜೀವಕ್ಕೆ ಪೂರಕ ಮತ್ತು ವ್ಯತಿರಿಕ್ತವಾಗಿ ಬಳಸಿದಾಗ ಅದೇ ಸಾವಿಗೆ ಕಾರಣವಾಗುತ್ತದೆ. ಬೋಧಾಯನರು ಧರ್ಮಸೂತ್ರಗಳಲ್ಲಿ ಭೋಜನವನ್ನು ಯಜ್ಞ ಎಂದಿದ್ದು, ಶಂಕರಾಚಾರ್ಯರು ತಮ್ಮ ಪ್ರಪಂಚಸಾರ ತಂತ್ರದಲ್ಲಿ ಇದೇ ಅಭಿಪ್ರಾಯವನ್ನು ಹೇಳಿದ್ದಾರೆ. ಆಯುರ್ವೇದ ತಜ್ಞರಾದ ಚರಕ – ಸುಶ್ರುತರೂ ಕೂಡ ಭೋಜನವನ್ನು ಯಜ್ಞ ಎಂದು ಕರೆದಿದ್ದು, ಉಪನಿಷತ್ತುಗಳೂ ಕೂಡ ಭೋಜನವನ್ನು ಯಜ್ಞ ಎಂದಿವೆ ಎಂದು ತಿಳಿಸಿದರು.



ನಮ್ಮೊಳಗಿರುವ ಜಠರಾಗ್ನಿಯೇ ಅಗ್ನಿಯಾಗಿದ್ದು, ನಾವು ಮಾಡುವ ಊಟವೇ ಇದಕ್ಕೆ ಅರ್ಪಿಸುವ ಹವಿಸ್ಸಾಗಿದೆ. ನಮಗೇ ಎಂದು ಕೊಳ್ಳದೇ ನಮ್ಮೊಳಗಿರುವ ಪರಮಾತ್ಮನಿಗೆ ಎಂದು ಊಟವನ್ನು ವಿಧಿವತ್ತಾಗಿ ಸೇವಿಸಿದಾಗ ಅದು ನಿಜವಾಗಿ ಯಜ್ಞವೇ ಆಗುತ್ತದೆ. ಸರಿಯಾದ ಕ್ರಮ ಹಾಗೂ ಹೊತ್ತಿನಲ್ಲಿ ಮಾಡುವ ಭೋಜನವು ಅಗ್ನಿಹೋತ್ರವೇ ಆಗುತ್ತದೆ. ಈ ಕುರಿತಾಗಿ ಪ್ರಾಣಾಗ್ನಿಹೋತ್ರೋಪನಿಷತ್ ಎಂಬ ಉಪನಿಷತ್ತೇ ಇದ್ದು, ಇದು ಆಹಾರದ ವಿಧಿ – ನಿಷೇಧಗಳನ್ನು ಹಾಗೂ ಅದರಂತೆ ನಡೆದುಕೊಂಡಾಗ ಆಗುವ ವಿವಿಧ ಲಾಭಗಳನ್ನು ತಿಳಿಸುತ್ತದೆ ಎಂದು ವಿವರಿಸಿದರು.

ಭೋಜನವನ್ನು ಸ್ವೀಕರಿಸುವಾಗ ಭಾವವೇ ಪ್ರಧಾನವಾಗಿದ್ದು, ಜೊತೆಗೆ ಯಾವ ಕಾಲದಲ್ಲಿ, ಯಾವ ಸ್ಥಳದಲ್ಲಿ, ಯಾವ ಪ್ರಮಾಣದಲ್ಲಿ ಹಾಗೂ ಯಾವುದನ್ನು ಊಟಮಾಡಬೇಕು ಎಂದು ಸರಿಯಾಗಿ ತಿಳಿದು ಆಹಾರವನ್ನು ಸ್ವೀಕರಿಸಿದಾಗ ಅದು ಯಜ್ಞಕ್ಕಿಂತ ಕಡಿಮೆಯಲ್ಲ ಎಂದು ಶ್ರೀಗಳು ನಿರೂಪಿಸಿದರು.

**ಊಟವನ್ನು ಹೇಗೆ ಮಾಡಬೇಕು?**

ನಮಗಾಗಿ ಎಂದು ಆಹಾರವನ್ನು ತಯಾರಿಸಬಾರದು. ಅತಿಥಿಗಳು, ಗರ್ಭಿಣಿಯರು, ಮಕ್ಕಳು ಮತ್ತು ವೃದ್ಧರು ಹಾಗೂ ಕಷ್ಟದಲ್ಲಿ ಇರುವವರಿಗೆ ಆಹಾರವನ್ನು ನೀಡಬೇಕು. ಆನಂತರವಷ್ಟೇ ನಾವು ಆಹಾರವನ್ನು ಸ್ವೀಕರಿಸಬೇಕು. ಹೀಗೆ ಮಾಡದೇ, ನಾವೇ ಮೊದಲು ಊಟ ಮಾಡಿದರೆ ಅದು ಪಾಪವಾಗಿ ತಾಪದಿಂದ ನಮ್ಮನ್ನೇ ಸುಡುತ್ತದೆ ಎಂದು ಹೇಳಲಾಗಿದೆ. ಇದು ಪ್ರಾಚೀನ ಭಾರತದ ಶಾಸ್ತ್ರಕಾರರ ಹೃದಯ ವೈಶಾಲ್ಯವನ್ನು ತೋರಿಸುತ್ತದೆ ಎಂದರು.

**ಪ್ರಾಣಾಂತಕವಾಗಬಹುದಾದ ಕುಲಾಂತರಿ ಗೋಧಿ:**

ಗೋಧೂಮ ಎಂದು ಪ್ರಾಚೀನ ಕಾಲದಿಂದಲೂ ಬಳಕೆಯಲ್ಲಿರುವ ಗೋಧಿ ಇಂದು ತನ್ನ ಮೂಲಸ್ವರೂಪವನ್ನೇ ಕಳೆದುಕೊಂಡಿದೆ. ಇಂದು ಸಿಗುವ ಗೋಧಿ ಸಂಪೂರ್ಣ ರೂಪಾಂತರಗೊಂಡಿದೆ. ಕೃಷಿತೋಟದಲ್ಲಿ ಕ್ರಿಮಿಗಳಿಂದ ರಕ್ಷಿಸಲು ಗೋಧಿಯನ್ನು ರೂಪಾಂತರ ಮಾಡಲಾಗಿದ್ದು, ಇಂದು ಸಿಗುವ ಗೋಧಿಯನ್ನು ಮನುಷ್ಯನು ತಿನ್ನಲು ಯೋಗ್ಯವೇ? ಎಂದು ಪ್ರಶ್ನಿಸುವಂತಾಗಿದೆ. ಕೆಟ್ಟ ಗೋಧಿಯನ್ನು ಮತ್ತಷ್ಟು ಕೆಡಿಸಿರುವ ವಸ್ತುವೇ ಮೈದಾ. ಅದು ಮನುಷ್ಯನ ಜೀರ್ಣಾಂಗದ ಮೇಲೆ ಕೆಟ್ಟ ಪರಿಣಾಮವನ್ನು ಉಂಟುಮಾಡುತ್ತದೆ ಎಂದು ಆಧುನಿಕ ವಿಜ್ಞಾನ ಹೇಳುತ್ತಿದೆ. ಜೀರ್ಣಕ್ಕೆ ಕಷ್ಟವಾಗುವ ಆಹಾರವನ್ನು ತಿನ್ನಬಾರದು ಎಂದು ಅಭಿಪ್ರಾಯಪಟ್ಟರು.

ಭಂಡಾರಿ ಸಮಾಜದಿಂದ ಸ್ವರ್ಣಪಾದುಕಾ ಪೂಜೆ ನೆರವೇರಿತು. ಭಂಡಾರಿ ಸಮಾಜದ ಅಧ್ಯಕ್ಷ ಶಿವು ಭಂಡಾರಿ, ಸುಬ್ರಾಯ ಭಂಡಾರಿ ಮನುವಳ್ಳಿ, ಹರಿಹರ ಭಂಡಾರಿ ಕಡತೋಕ ಸೇರಿದಂತೆ ಭಂಡಾರಿ ಸಮಾಜದ ನೂರಾರು ಗುರುಬಂಧುಗಳು ಪಾದುಕಾ ಪೂಜೆಯಲ್ಲಿ ಪಾಲ್ಗೊಂಡು ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಜಿ.ವಿ ಹೆಗಡೆ, ಸತೀಶ ಭಟ್ಟ ಧಾರೇಶ್ವರ, ದಿನ ಪ್ರಧಾನರಾದ ಪಾದೇಕಲ್ಲು ವಿಷ್ಣು ಭಟ್ ದಂಪತಿಗಳು ಉಪಸ್ಥಿತರಿದ್ದರು.

# ಒತ್ತುವರಿ ತೆರವು ವಸ್ತುಗಳ ಗುಜರಿ ಮಾರಾಟ ಆರೋಪಕ್ಕೆ ಜಿಬಿಎ ಸ್ಪಷ್ಟನೆ

● ವಿಕ್ರಮ ವಾಹಿನಿ । ಬೆಂಗಳೂರು

ಹೆಬ್ಬಾಳ ವಿಭಾಗದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಯಲ್ಲಿ ವಶಪಡಿಸಿಕೊಂಡ ವಸ್ತುಗಳನ್ನು ಗುಜರಿಗೆ ಮಾರಾಟ ಮಾಡಲಾಗಿದೆ ಎಂಬ ಮಾಧ್ಯಮ ವರದಿಯನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ತಳ್ಳಿಹಾಕಿದ್ದು, ಆರೋಪಗಳು ವಾಸ್ತವಾಂಶಕ್ಕೆ ದೂರವಾಗಿವೆ ಎಂದು ಸ್ಪಷ್ಟಪಡಿಸಿದೆ.

ಜುಲೈ 29ರಂದು ವಾರ್ಡ್‌ಗಳಾದ 57, 58 ಹಾಗೂ 59ರ ವ್ಯಾಪ್ತಿಯ ಸಂಜಯನಗರ ಮುಖ್ಯರಸ್ತೆಯ ನಾಗಶೆಟ್ಟಿಹಳ್ಳಿ ಬಸ್ ನಿಲ್ದಾಣದಿಂದ ಬಳ್ಳಾರಿ ಸರ್ವೀಸ್ ರಸ್ತೆಯವರೆಗೆ ವಿಶೇಷ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗಿತ್ತು. ಈ ವೇಳೆ ಬೀದಿಬದಿ ವ್ಯಾಪಾರಿಗಳಿಂದ ತೆರವುಗೊಳಿಸಿದ ಉಪಯುಕ್ತ ವಸ್ತುಗಳನ್ನು ಅವರು ನಿಗದಿತ ದಂಡ ಪಾವತಿಸಿ ಮರಳಿ ಪಡೆದುಕೊಂಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಾರ್ಯಾಚರಣೆ ವೇಳೆ ಅನಧಿಕೃತ ವ್ಯಾಪಾರ ನಡೆಸಿದವರಿಂದ 1.65 ಲಕ್ಷ ದಂಡ ವಸೂಲಿ ಮಾಡಲಾಗಿದೆ. ಬಳಿಕ ವಾರ್ಡ್ 57ರ ಸಿಲ್ಟ್ ಹಾಗೂ ಟ್ರ್ಯಾಕ್ಟರ್ ಗುತ್ತಿಗೆದಾರರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಚಾಲಕ ಡೆಬ್ರಿಸ್ ಸಾಗಣೆ ವೇಳೆ ಕೆಲವು ಅನುಪಯುಕ್ತ ಪ್ಲಾಸ್ಟಿಕ್ ಹಾಗೂ ತ್ಯಾಜ್ಯ ವಸ್ತುಗಳನ್ನು ಗುಜರಿಗೆ ಮಾರಾಟ ಮಾಡಿರುವುದು ಸಾರ್ವಜನಿಕರ ದೂರಿನ ಹಿನ್ನೆಲೆಯಲ್ಲಿ ಬೆಳಕಿಗೆ ಬಂದಿತ್ತು.

ಈ ಸಂಬಂಧ ತಕ್ಷಣ ವಿಚಾರಣೆ ನಡೆಸಿ ಚಾಲಕ ಬಸವಲಿಂಗ ಅವರಿಗೆ 10 ಸಾವಿರ ದಂಡ ವಿಧಿಸಲಾಗಿದ್ದು, ಆ ಮೊತ್ತವನ್ನು ಜಿಬಿಎ ಮುಖ್ಯ ಆಯುಕ್ತರ ಖಾತೆಗೆ ಜಮಾ ಮಾಡಲಾಗಿದೆ. ಹೀಗಾಗಿ ಒತ್ತುವರಿ ತೆರವು ಕಾರ್ಯಾಚರಣೆಗೆ ಸಂಬಂಧಿಸಿದಂತೆ ಒಟ್ಟು 1.75 ಲಕ್ಷ ದಂಡ ಸರ್ಕಾರದ ಖಾತೆಗೆ ಜಮಾ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಹೀಗಾಗಿ, ಒತ್ತುವರಿ ತೆರವು ಕಾರ್ಯಾಚರಣೆಯಲ್ಲಿ ವಶಪಡಿಸಿಕೊಂಡ ವಸ್ತುಗಳನ್ನು ಅನಧಿಕೃತವಾಗಿ ಗುಜರಿಗೆ ಮಾರಾಟ ಮಾಡಲಾಗಿದೆ ಎಂಬ ಸುದ್ದಿ ಸತ್ಯಕ್ಕೆ ದೂರವಾಗಿದ್ದು, ತಪ್ಪಿತಸ್ಥ ಸಿಬ್ಬಂದಿಯ ವಿರುದ್ಧ ಈಗಾಗಲೇ ಕ್ರಮ ಕೈಗೊಂಡಿರುವುದಾಗಿ ಜಿಬಿಎ ಸ್ಪಷ್ಟಪಡಿಸಿದೆ.

# ಏರ್ ಗನ್‌ನಿಂದ ಗುಂಡಿನ ದಾಳಿ: ಐಟಿ ಉದ್ಯೋಗಿ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಮದ್ಯದ ಅಮಲಿನಲ್ಲಿ ಅಪಾರ್ಟ್‌ಮೆಂಟ್ ಭದ್ರತಾ ಸಿಬ್ಬಂದಿ ಮೇಲೆ ಏರ್ ಗನ್‌ನಿಂದ ಫೈರ್ ಮಾಡಿದ ಆರೋಪದ ಮೇಲೆ ಐಟಿ ಉದ್ಯೋಗಿಯೊಬ್ಬನನ್ನು ಸೂರ್ಯನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಆಗಸ್ಟ್ 6ರ ಬೆಳಗಿನ ಜಾವ ಆನೇಕಲ್ ಹೊರವಲಯದ ಬಂಡಾಪುರದಲ್ಲಿರುವ ಸಿಪಾನಿ ಅಪಾರ್ಟ್‌ಮೆಂಟ್‌ನಲ್ಲಿ ಘಟನೆ ನಡೆದಿದೆ. ಉತ್ತರ ಪ್ರದೇಶದ ಲಕ್ನೋ ಮೂಲದ ಅನುರಾಗ್ ತಿವಾರಿ (40) ಬಂಧಿತ ಆರೋಪಿ. ಕಳೆದ ಎಂಟು ತಿಂಗಳಿಂದ ಅಪಾರ್ಟ್‌ಮೆಂಟ್‌ನ ಫ್ಲ್ಯಾಟ್‌ನಲ್ಲಿ ವಾಸಿಸುತ್ತಿದ್ದ ಈತ, ವೈಟ್‌ಫೀಲ್ಡ್‌ನ ಖಾಸಗಿ ಐಟಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆ ನಡೆದ ವೇಳೆ ಆರೋಪಿ ಮದ್ಯದ ಅಮಲಿನಲ್ಲಿದ್ದನು. ಕುಟುಂಬದವರೊಂದಿಗೆ ಫೋನ್‌ನಲ್ಲಿ ಮಾತನಾಡುವಾಗ ಗಲಾಟೆ ನಡೆದಿದ್ದು, ಬಳಿಕ ಬಾಲ್ಕನಿಗೆ ಬಂದ ಅನುರಾಗ್ ತಿವಾರಿ ಏರ್ ಗನ್‌ನಿಂದ ಗುಂಡು ಹಾರಿಸಲು ಆರಂಭಿಸಿದ್ದಾನೆ.

ಅಪಾರ್ಟ್‌ಮೆಂಟ್‌ನಲ್ಲಿ ಗುಂಡಿನ ಸದ್ದು ಕೇಳಿ ಎಚ್ಚೆತ್ತ ಭದ್ರತಾ ಸಿಬ್ಬಂದಿ ಎಚ್ಚರಿಕೆ ನೀಡಿದಾಗ, ಅವರತ್ತಲೂ ಏರ್ ಗನ್‌ನಿಂದ ಫೈರ್ ಮಾಡಿದ್ದಾನೆ. ಅದೃಷ್ಟವಶಾತ್ ಭದ್ರತಾ ಸಿಬ್ಬಂದಿಗೆ ಯಾವುದೇ ಗಾಯವಾಗಿಲ್ಲ.

ಆರೋಪಿ ಸುಮಾರು 45 ನಿಮಿಷಗಳ ಕಾಲ ಏರ್ ಗನ್‌ನಿಂದ ಗುಂಡು ಹಾರಿಸಿದ್ದು, ಪಾರ್ಕಿಂಗ್ ಪ್ರದೇಶದಲ್ಲಿದ್ದ ಕಾರುಗಳು ಹಾಗೂ ಶೀಟ್‌ಗಳಿಗೆ ಪೆಲೆಟ್‌ಗಳಿಂದ ಹಾನಿಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಸಂಬಂಧ ಶಸ್ತ್ರಾಸ್ತ್ರ ಕಾಯ್ದೆ ಹಾಗೂ ಭಾರತೀಯ ನ್ಯಾಯ ಸಂಹಿತೆಯಡಿ ಪ್ರಕರಣ ದಾಖಲಿಸಿಕೊಂಡಿದ್ದು, ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ಮುಂದುವರಿದಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

# ಅಗ್ನಿ–4 ಕ್ಷಿಪಣಿ ಯಶಸ್ವಿ ಪರೀಕ್ಷೆ

● ವಿಕ್ರಮ ವಾಹಿನಿ । ನವದೆಹಲಿ

ಭಾರತ ತನ್ನ ಪರಮಾಣು ಸಾಮರ್ಥ್ಯದ ಬ್ಯಾಲಿಸ್ಟಿಕ್ ಕ್ಷಿಪಣಿ ಶಕ್ತಿಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಸಾಧನೆ ಮಾಡಿದೆ. ಮಧ್ಯಮ ದೂರದ ಬ್ಯಾಲಿಸ್ಟಿಕ್ ಕ್ಷಿಪಣಿ ಅಗ್ನಿ–4 ಅನ್ನು ಆಗಸ್ಟ್ 6ರಂದು ಒಡಿಶಾದ ಚಾಂದಿಪುರದಲ್ಲಿರುವ ಇಂಟಿಗ್ರೇಟೆಡ್ ಟೆಸ್ಟಿಂಗ್ ರೇಂಜ್‌ನಿಂದ ಯಶಸ್ವಿಯಾಗಿ ಪರೀಕ್ಷಿಸಲಾಗಿದೆ.

ರಕ್ಷಣಾ ಮೂಲಗಳ ಪ್ರಕಾರ, ಈ ಪರೀಕ್ಷೆಯನ್ನು ಸ್ಟ್ರಾಟಜಿಕ್ ಫೋರ್ಸಸ್ ಕಮಾಂಡ್ ಮೇಲ್ವಿಚಾರಣೆಯಲ್ಲಿ ನಡೆಸಲಾಗಿದ್ದು, ಕ್ಷಿಪಣಿಯ ಎಲ್ಲ ತಾಂತ್ರಿಕ ಮತ್ತು ಕಾರ್ಯಾಚರಣಾ ಮಾನದಂಡಗಳು ಯಶಸ್ವಿಯಾಗಿ ದೃಢಪಟ್ಟಿವೆ. ನಿಗದಿತ ಮಾರ್ಗದಲ್ಲಿ ಹಾರಿದ ಕ್ಷಿಪಣಿಯು ಗುರಿ ಸಾಧಿಸುವ ಸಾಮರ್ಥ್ಯವನ್ನು ಯಶಸ್ವಿಯಾಗಿ ಪ್ರದರ್ಶಿಸಿದೆ.

ಸುಮಾರು 4,000 ಕಿಲೋಮೀಟರ್ ವ್ಯಾಪ್ತಿಯ ಗುರಿಗಳನ್ನು ಹೊಡೆಯುವ ಸಾಮರ್ಥ್ಯ ಹೊಂದಿರುವ ಅಗ್ನಿ–4, ಭಾರತದ ಅಗ್ನಿ ಕ್ಷಿಪಣಿ ಸರಣಿಯ ಪ್ರಮುಖ ಮಧ್ಯಮ ದೂರದ ಬ್ಯಾಲಿಸ್ಟಿಕ್ ಕ್ಷಿಪಣಿಯಾಗಿದೆ. ಈ ಯಶಸ್ವಿ ಪರೀಕ್ಷೆಯೊಂದಿಗೆ ಭಾರತದ ಪರಮಾಣು ತಡೆ ಸಾಮರ್ಥ್ಯ ಮತ್ತಷ್ಟು ಬಲಗೊಂಡಿದ್ದು, ದೇಶದ ಕಾರ್ಯತಂತ್ರದ ರಕ್ಷಣಾ ವ್ಯವಸ್ಥೆಗೆ ಮಹತ್ವದ ಬಲ ದೊರೆತಿದೆ.

ಅಗ್ನಿ–4ನಲ್ಲಿ ಅತ್ಯಾಧುನಿಕ ಘನ ಇಂಧನ ತಂತ್ರಜ್ಞಾನವನ್ನು ಬಳಸಲಾಗಿದ್ದು, ಕಡಿಮೆ ಸಮಯದಲ್ಲಿ ಉಡಾವಣೆಗೆ ಸಜ್ಜುಗೊಳಿಸಬಹುದು. ರಸ್ತೆ ಆಧಾರಿತ ಮೊಬೈಲ್ ಲಾಂಚರ್‌ನಿಂದಲೂ ಉಡಾವಣೆ ಮಾಡುವ ಸಾಮರ್ಥ್ಯ ಇರುವುದರಿಂದ ಕ್ಷಿಪಣಿಯ ಚಲನಶೀಲತೆ ಹೆಚ್ಚಿದ್ದು, ಶತ್ರುಗಳಿಗೆ ಗುರಿ ಪತ್ತೆಹಚ್ಚುವುದು ಕಷ್ಟಕರವಾಗುತ್ತದೆ.

ರಕ್ಷಣಾ ವಿಜ್ಞಾನಿಗಳ ಪ್ರಕಾರ, ಇಂತಹ ನಿಯಮಿತ ಪರೀಕ್ಷೆಗಳು ಕ್ಷಿಪಣಿಯ ನಿಖರತೆ, ವಿಶ್ವಾಸಾರ್ಹತೆ ಹಾಗೂ ಕಾರ್ಯಕ್ಷಮತೆಯನ್ನು ನಿರಂತರವಾಗಿ ಪರಿಶೀಲಿಸಲು ಮತ್ತು ಸುಧಾರಿಸಲು ನೆರವಾಗುತ್ತವೆ. ಪರೀಕ್ಷೆಯ ಯಶಸ್ಸು ಕ್ಷಿಪಣಿ ಈಗ ಕಾರ್ಯಾಚರಣೆಗೆ ಸಂಪೂರ್ಣ ಸಿದ್ಧವಾಗಿರುವುದನ್ನು ಸೂಚಿಸುತ್ತದೆ.

ಅಗ್ನಿ ಸರಣಿಯಲ್ಲಿ ಅಗ್ನಿ–1ರಿಂದ ಅಗ್ನಿ–5ರವರೆಗೆ ವಿವಿಧ ದೂರದ ಗುರಿಗಳನ್ನು ಹೊಡೆಯುವ ಸಾಮರ್ಥ್ಯದ ಕ್ಷಿಪಣಿಗಳನ್ನು ಅಭಿವೃದ್ಧಿಪಡಿಸಲಾಗಿದೆ.

ಈ ಯಶಸ್ವಿ ಪರೀಕ್ಷೆಯು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಹಾಗೂ ಸ್ಟ್ರಾಟಜಿಕ್ ಫೋರ್ಸಸ್ ಕಮಾಂಡ್ ದೇಶದ ಕ್ಷಿಪಣಿ ವ್ಯವಸ್ಥೆಗಳನ್ನು ನಿರಂತರವಾಗಿ ಆಧುನೀಕರಿಸುತ್ತಿರುವುದಕ್ಕೆ ಮತ್ತೊಂದು ಸಾಕ್ಷಿಯಾಗಿದೆ. ಇದು ಕೇವಲ ತಾಂತ್ರಿಕ ಸಾಧನೆಯಷ್ಟೇ ಅಲ್ಲ, ಭಾರತದ ರಕ್ಷಣಾ ಸನ್ನದ್ಧತೆ ಹಾಗೂ ಪರಮಾಣು ತಡೆ ಸಾಮರ್ಥ್ಯವನ್ನು ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ.

# ಹೊರಟ್ಟಿ ರಾಜೀನಾಮೆ ಬಲವಂತದ್ದು: ರವಿಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಅವರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಸುಮಾರು 15 ಮಂದಿ ಕಾಂಗ್ರೆಸ್ ಸದಸ್ಯರ ತಂಡ ಬಲವಂತವಾಗಿ ರಾಜೀನಾಮೆ ಪಡೆದುಕೊಂಡಿರುವುದು ಅತ್ಯಂತ ಖಂಡನೀಯ ಮತ್ತು ಪ್ರಜಾಪ್ರಭುತ್ವ ವಿರೋಧಿ ನಡೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆರೋಪಿಸಿದ್ದಾರೆ.



ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸದಸ್ಯರ ತಂಡ ಬಲವಂತವಾಗಿ ರಾಜೀನಾಮೆ ಪಡೆದಿದೆ ಎಂದು ಬಿಜೆಪಿ ನಾಯಕ ಎನ್. ರವಿಕುಮಾರ್ ಗಂಭೀರ ಆರೋಪ ಮಾಡಿದ್ದಾರೆ. ಸಂವಿಧಾನಾತ್ಮಕ ಹುದ್ದೆಯ ಗೌರವಕ್ಕೆ ಧಕ್ಕೆ ಉಂಟುಮಾಡಲಾಗಿದೆ ಎಂದು ಆರೋಪಿಸಿರುವ ಅವರು, ಮುಖ್ಯಮಂತ್ರಿ ಬೇಷರತ್ ಕ್ಷಮೆಯಾಚಿಸುವವರೆಗೆ ಸದನದಲ್ಲಿ ಹೋರಾಟ ಮುಂದುವರಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಮುಖ್ಯಮಂತ್ರಿಗಳು ಸಭಾಪತಿ ಬಸವರಾಜ ಹೊರಟ್ಟಿ ಅವರ ಆಪ್ತ ಕಾರ್ಯದರ್ಶಿಗೆ ಲೆಟರ್‌ಹೆಡ್ ತರಲು ಸೂಚಿಸಿ, ಅದರ ಮೇಲೆ ಹೊರಟ್ಟಿ ಅವರ ಸಹಿಯನ್ನು ಬಲವಂತವಾಗಿ ಪಡೆದುಕೊಂಡಿದ್ದಾರೆ. ಇದು ಸಂವಿಧಾನಾತ್ಮಕ ಹುದ್ದೆಯಲ್ಲಿರುವ ವ್ಯಕ್ತಿಯ ಮೇಲೆ ನಡೆಸಿರುವ ದೌರ್ಜನ್ಯ ಮತ್ತು ವಂಚನೆಯ ಕೃತ್ಯವಾಗಿದೆ ಎಂದು ಅವರು ಹೇಳಿದ್ದಾರೆ.

ಈ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ವಿಧಾನ ಪರಿಷತ್ ಸದಸ್ಯರಾದ ಎ. ರವಿ, ಬಿಲ್ಕಿಸ್ ಬಾನು, ಆಡಳಿತ ಪಕ್ಷದ ಮುಖ್ಯ ಸಚೇತಕ ಸಲೀಂ ಅಹ್ಮದ್, ಶ್ರೀನಿವಾಸ್ ಸೇರಿದಂತೆ ಕಾಂಗ್ರೆಸ್‌ನ ಹಲವು ಸದಸ್ಯರು ಉಪಸ್ಥಿತರಿದ್ದರು ಎಂದು ರವಿಕುಮಾರ್ ತಿಳಿಸಿದ್ದಾರೆ.


ಬಸವರಾಜ ಹೊರಟ್ಟಿ ಅವರು ಆಗಸ್ಟ್ 14ರಂದು ಸದನದಲ್ಲಿ ನಿಗದಿತ ಸಂಸದೀಯ ಪ್ರಕ್ರಿಯೆ ಅನುಸರಿಸಿ ಗೌರವಯುತವಾಗಿ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವುದಾಗಿ ಈಗಾಗಲೇ ಘೋಷಿಸಿದ್ದರು. ಆದರೆ ಅದಕ್ಕೂ ಮುನ್ನವೇ ಮುಖ್ಯಮಂತ್ರಿ ಅವರು ಸಭಾಪತಿಯನ್ನು ಪದವಿಯಿಂದ ಹೊರಹಾಕುವ ರೀತಿಯಲ್ಲಿ ವರ್ತಿಸಿರುವುದು ಅತ್ಯಂತ ಖಂಡನೀಯ ಎಂದು ಅವರು ಹೇಳಿದ್ದಾರೆ.

ಸಂವಿಧಾನಾತ್ಮಕ ಹುದ್ದೆಯ ಗೌರವವನ್ನು ತುಳಿದಿರುವ ಈ ರೀತಿಯ "ಗೂಂಡಾಗಿರಿ"ಯನ್ನು ಬಿಜೆಪಿ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಮುಖ್ಯಮಂತ್ರಿ ಅವರು ಸದನದಲ್ಲಿ ಬಹಿರಂಗವಾಗಿ ಬೇಷರತ್ ಕ್ಷಮೆಯಾಚಿಸುವವರೆಗೆ ಸದನ ಸುಗಮವಾಗಿ ನಡೆಯಲು ಅವಕಾಶ ನೀಡುವುದಿಲ್ಲ. ಈ ವಿಷಯವನ್ನು ಬಿಜೆಪಿ ಅತ್ಯಂತ ಗಂಭೀರವಾಗಿ ಪರಿಗಣಿಸಿ ಪ್ರಬಲ ಹೋರಾಟ ನಡೆಸಲಿದೆ ಎಂದು ಎನ್. ರವಿಕುಮಾರ್ ಎಚ್ಚರಿಕೆ ನೀಡಿದ್ದಾರೆ.

# ವಿಎಚ್‌ಪಿ ಅಧ್ಯಕ್ಷ ಅಲೋಕ್ ಕುಮಾರ್‌ಗೆ ಪುತ್ತಿಗೆ ಮಠದಲ್ಲಿ ಸನ್ಮಾನ

● ವಿಕ್ರಮ ವಾಹಿನಿ । ಉಡುಪಿ

ವಿಶ್ವ ಹಿಂದೂ ಪರಿಷತ್ತಿನ ಅಂತಾರಾಷ್ಟ್ರೀಯ ಅಧ್ಯಕ್ಷರೂ, ಸುಪ್ರೀಂ ಕೋರ್ಟ್‌ನ ಹಿರಿಯ ನ್ಯಾಯವಾದಿಗಳೂ ಆದ ಶ್ರೀ ಅಲೋಕ್ ಕುಮಾರ್ ಜೀ ಅವರು ಪುತ್ತಿಗೆ ಮೂಲಮಠಕ್ಕೆ ಭೇಟಿ ನೀಡಿ, ಪರಮಪೂಜ್ಯ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರ ದರ್ಶನ ಪಡೆದು ಆಶೀರ್ವಾದ ಸ್ವೀಕರಿಸಿದರು.



ಮೂಲಮಠಕ್ಕೆ ಆಗಮಿಸಿದ ಅವರನ್ನು ಪುತ್ತಿಗೆ ವಿದ್ಯಾಪೀಠದ ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರು ವೇದಘೋಷದೊಂದಿಗೆ ಸಾಂಪ್ರದಾಯಿಕವಾಗಿ ಸ್ವಾಗತಿಸಿದರು. ಬಳಿಕ ಅವರು ಶ್ರೀ ಕಂಬದ ಗಣಪತಿ, ಶ್ರೀ ನರಸಿಂಹ ದೇವರು ಹಾಗೂ ಶ್ರೀ ಮುಖ್ಯಪ್ರಾಣ ದೇವರ ದರ್ಶನ ಪಡೆದರು. ವಿದ್ಯಾಪೀಠದಲ್ಲಿ ನಡೆಯುತ್ತಿರುವ ವೇದಾಧ್ಯಯನ, ಧಾರ್ಮಿಕ ಶಿಕ್ಷಣ ಮತ್ತು ವಿವಿಧ ಸೇವಾ ಚಟುವಟಿಕೆಗಳ ಕುರಿತು ಶ್ರೀಪಾದರು ಅವರಿಗೆ ವಿವರಿಸಿದರು. ನಂತರ ನಡೆದ ಸರಳ ಸಮಾರಂಭದಲ್ಲಿ ಪರಮಪೂಜ್ಯ ಶ್ರೀಪಾದರು ಅಲೋಕ್ ಕುಮಾರ್ ಜೀ ಅವರನ್ನು ಗೌರವಿಸಿ, ಹಿಂದೂ ಸಮಾಜದ ಸಂಘಟನೆ, ಸನಾತನ ಧರ್ಮದ ಸಂರಕ್ಷಣೆ ಹಾಗೂ ವಿಶ್ವ ಹಿಂದೂ ಪರಿಷತ್ತಿನ ಕಾರ್ಯವಿಸ್ತಾರಕ್ಕಾಗಿ ಅವರು ಸಲ್ಲಿಸುತ್ತಿರುವ ಸೇವೆಯನ್ನು ಶ್ಲಾಘಿಸಿ ಆಶೀರ್ವದಿಸಿದರು. ಅಲೋಕ್ ಕುಮಾರ್ ಜೀ ಅವರು ಪುತ್ತಿಗೆ ಮಠದ ಕಿರಿಯ ಶ್ರೀಪಾದರಾದ ಪರಮಪೂಜ್ಯ ಶ್ರೀ ಸುಶ್ರೀಂದ್ರ ತೀರ್ಥ ಶ್ರೀಪಾದರ ದರ್ಶನ ಪಡೆದು ಆಶೀರ್ವಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್ತಿನ ಪ್ರಾಂತ ಕಾರ್ಯದರ್ಶಿ ಶ್ರೀ ಶರಣ್ ಪಂಪ್‌ವೆಲ್, ದಕ್ಷಿಣ ಕನ್ನಡ ಜಿಲ್ಲಾ ಕಾರ್ಯಾಧ್ಯಕ್ಷ ಶ್ರೀ ಸುನಿಲ್ ಕೆ.ಆರ್., ಉಡುಪಿ ಜಿಲ್ಲಾ ಅಧ್ಯಕ್ಷ ಶ್ರೀ ವಿಷ್ಣುಮೂರ್ತಿ ಆಚಾರ್ಯ, ಉಡುಪಿ ಜಿಲ್ಲಾ ಕಾರ್ಯದರ್ಶಿ ಶ್ರೀ ದಿನೇಶ್ ಮೆಂಡನ್, ಬಿಜೆಪಿ ಜಿಲ್ಲಾ ವಕ್ತಾರ ಶ್ರೀ ಮಧುಕರ ಮುದ್ರಾಡಿ, ಅರ್ಚಕ–ಪುರೋಹಿತ–ಮಠ–ಮಂದಿರ ಪ್ರಮುಖರಾದ ಶ್ರೀ ಗಿರೀಶ್ ತಂತ್ರಿ ಮೊದಲಾದವರು ಉಪಸ್ಥಿತರಿದ್ದರು. ಶ್ರೀಮಠದ ಅಂತಾರಾಷ್ಟ್ರೀಯ ಕಾರ್ಯದರ್ಶಿ ಶ್ರೀ ಪ್ರಸನ್ನ ಆಚಾರ್ಯ ಅವರು ಗಣ್ಯರನ್ನು ಸ್ವಾಗತಿಸಿದರು. ಸುಗುಣ ಶಾಲೆಯ ಶ್ರೀ ಪ್ರಮೋದ್ ಅವರು ಕಾರ್ಯಕ್ರಮ ನಿರ್ವಹಿಸಿದರು. ಶ್ರೀ ಪುತ್ತಿಗೆ ವಿದ್ಯಾಪೀಠದ ಪ್ರಾಚಾರ್ಯರಾದ ಡಾ. ಸುನೀಲ್ ಆಚಾರ್ಯ ಅವರು ವಂದಿಸಿದರು.

# ಪದ್ಮಾವತಿ ದೇವಿಗೆ ರೂ 2 ಕೋಟಿ ಸ್ವರ್ಣ ಕಿರೀಟ

● ವಿಕ್ರಮ ವಾಹಿನಿ । ಬೆಂಗಳೂರು

ಅಮೇರಿಕದ ಅರಿಜೋನಾ ರಾಜ್ಯದ ಫೀನಿಕ್ಸ್ ಮಹಾನಗರದಲ್ಲಿರುವ ಶ್ರೀ ವೆಂಕಟಕೃಷ್ಣ ಮಂದಿರದಲ್ಲಿ ವಿರಾಜಮಾನರಾಗಿರುವ ಶ್ರೀ ಪದ್ಮಾವತಿ ದೇವಿಗೆ, ಭಕ್ತರೊಬ್ಬರು ಸುಮಾರು ರೂ 2 ಕೋಟಿ ಮೌಲ್ಯದ ಸ್ವರ್ಣ ಕಿರೀಟವನ್ನು ಸಮರ್ಪಿಸುತ್ತಿದ್ದಾರೆ. ಈ ಕಿರೀಟವನ್ನು ಪರಮಪೂಜ್ಯ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರ ಜನ್ಮ ನಕ್ಷತ್ರದ ಶುಭಸಂದರ್ಭದಲ್ಲಿ, ಸೆಪ್ಟೆಂಬರ್ ತಿಂಗಳಲ್ಲಿ ನಡೆಯುವ ವಿಶೇಷ ಕಾರ್ಯಕ್ರಮದಲ್ಲಿ ದೇವಿಗೆ ಸಮರ್ಪಿಸಲಾಗುವುದು.

ಬೆಂಗಳೂರಿನ ಗೋವರ್ಧನ ಕ್ಷೇತ್ರದಲ್ಲಿ, ಪರಮಪೂಜ್ಯ ಶ್ರೀಪಾದರು ಈ ಸ್ವರ್ಣ ಕಿರೀಟವನ್ನು ವಿಶೇಷ ಪೂಜೆಯೊಂದಿಗೆ ಬಾಲಕೃಷ್ಣನಿಗೆ ಸಮರ್ಪಿಸಿ, ಬಳಿಕ ಅದನ್ನು ಫೀನಿಕ್ಸ್ ಶ್ರೀ ವೆಂಕಟಕೃಷ್ಣ ಮಂದಿರದಲ್ಲಿ ಶ್ರೀ ಪದ್ಮಾವತಿ ದೇವಿಗೆ ಅರ್ಪಿಸುವ ಸಲುವಾಗಿ ಸಂಬಂಧಿತ ಭಕ್ತರಿಗೆ ಹಸ್ತಾಂತರಿಸಿದರು.

ಅಮೇರಿಕದಲ್ಲಿ ಪರಮಪೂಜ್ಯ ಶ್ರೀಪಾದರು ಸ್ಥಾಪಿಸಿರುವ ಹನ್ನೊಂದು ದೇವಸ್ಥಾನಗಳಲ್ಲಿ ಮೊದಲನೆಯದು ಹಾಗೂ 2000 ರಲ್ಲಿ ಸ್ಥಾಪನೆಯಾದ ಪ್ರಥಮ ದೇವಸ್ಥಾನ ಎಂಬ ಹೆಗ್ಗಳಿಕೆಗೆ ಫೀನಿಕ್ಸ್‌ನ ಶ್ರೀ ವೆಂಕಟಕೃಷ್ಣ ಮಂದಿರ ಪಾತ್ರವಾಗಿದೆ. ಈ ಕ್ಷೇತ್ರವು ಉತ್ತರ ಅಮೆರಿಕಾದ ಭಾರತೀಯರ ಪ್ರಮುಖ ಆಧ್ಯಾತ್ಮಿಕ ಕೇಂದ್ರಗಳಲ್ಲಿ ಒಂದಾಗಿ ಬೆಳೆಯುತ್ತಿದೆ.

ಇದೇ ಕ್ಷೇತ್ರದಲ್ಲಿ ನಾಲ್ಕು ವರ್ಷಗಳ ಹಿಂದೆ ಶ್ರೀ ವೆಂಕಟೇಶ್ವರ ಸ್ವಾಮಿಗೆ ಸುಮಾರು ರೂ 4 ಕೋಟಿ ಮೌಲ್ಯದ ಸ್ವರ್ಣ ಕಿರೀಟವನ್ನು ಭಕ್ತರು ಸಮರ್ಪಿಸಿದ್ದರು.

ಇದೀಗ ಶ್ರೀ ಪದ್ಮಾವತಿ ದೇವಿಗೆ ಸಮರ್ಪಿಸಲಾಗುತ್ತಿರುವ ಈ ಸ್ವರ್ಣ ಕಿರೀಟವು ಆ ಮಹತ್ವದ ಸೇವೆಯ ಮತ್ತೊಂದು ಸುವರ್ಣ ಅಧ್ಯಾಯವಾಗಿದೆ. ಈ ಸೇವೆಯನ್ನು ಶ್ರೀಮಠದ ಭಕ್ತರೊಬ್ಬರು ಅಪಾರ ಭಕ್ತಿ, ಶ್ರದ್ಧೆ ಹಾಗೂ ಸಮರ್ಪಣಾಭಾವದಿಂದ ನೆರವೇರಿಸುತ್ತಿದ್ದು, ಶ್ರೀಮಠದ ವಿದೇಶಿ ಧಾರ್ಮಿಕ ಚಟುವಟಿಕೆಗಳ ಇತಿಹಾಸದಲ್ಲಿ ಇದೊಂದು ಮಹತ್ವದ ಮೈಲಿಗಲ್ಲಾಗಿದೆ.



ಇದಲ್ಲದೆ, ಫೀನಿಕ್ಸ್ ಶ್ರೀ ವೆಂಕಟಕೃಷ್ಣ ಕ್ಷೇತ್ರಕ್ಕಾಗಿ ಈಗಾಗಲೇ ನಾಲ್ಕು ಎಕರೆ ವಿಶಾಲ ಜಾಗವನ್ನು ಪಡೆದುಕೊಳ್ಳಲಾಗಿದ್ದು, ಪರಮಪೂಜ್ಯ ಶ್ರೀಪಾದರ ಶಿಷ್ಯರೂ, ಅಲ್ಲಿನ ಪ್ರಧಾನ ಅರ್ಚಕರೂ ಆದ ಶ್ರೀ ಕಿರಣ್ ಆಚಾರ್ಯ ಅವರ ನೇತೃತ್ವದಲ್ಲಿ ಆಗಮಶಾಸ್ತ್ರದ ನಿಯಮಾನುಸಾರ ಭವ್ಯ, ವೈಭವೋಪೇತ ಹಾಗೂ ಬೃಹತ್ ದೇವಸ್ಥಾನದ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.

ಮುಂಬರುವ ದಿನಗಳಲ್ಲಿ ಈ ಕ್ಷೇತ್ರವು ವಿಶ್ವದ ಪ್ರಮುಖ ವೈಷ್ಣವ ಆಧ್ಯಾತ್ಮಿಕ ಕೇಂದ್ರಗಳಲ್ಲಿ ಒಂದಾಗಿ ರೂಪುಗೊಳ್ಳುವ ನಿರೀಕ್ಷೆಯಿದೆ.

ಈ ಸಂದರ್ಭದಲ್ಲಿ ಶ್ರೀಮಠದ ಅಂತಾರಾಷ್ಟ್ರೀಯ ಕಾರ್ಯದರ್ಶಿಗಳಾದ ಶ್ರೀ ಪ್ರಸನ್ನಾಚಾರ್ಯರು,

ಗೋವರ್ಧನ ಕ್ಷೇತ್ರದ ವ್ಯವಸ್ಥಾಪಕರಾದ ಶ್ರೀ ಕುಂಜಾರರು, ಸುಗುಣ ಸಂಧ್ಯಾ ಗುರುಕುಲದ ಕಾರ್ಯದರ್ಶಿ ಶ್ರೀ ಅಭಿಷೇಕ್ ಹಾಗೂ ಅನೇಕ ಭಕ್ತರು ಉಪಸ್ಥಿತರಿದ್ದರು.

# ಮೈನಿಂಗ್ ಲಾರಿ ಡಿಕ್ಕಿ: ಇಬ್ಬರು ಪಾದಚಾರಿಗಳ ದುರ್ಮರಣ

● ವಿಕ್ರಮ ವಾಹಿನಿ । ಬಳ್ಳಾರಿ

ಗಣಿ ನಾಡು ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ವೆಂಕಟಗಿರಿ ಗ್ರಾಮದ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಇಬ್ಬರು ಪಾದಚಾರಿಗಳು ಮೃತಪಟ್ಟಿದ್ದಾರೆ. ಮೈನಿಂಗ್ ಲಾರಿಯೊಂದು ಪಾದಚಾರಿಗಳಿಗೆ ಡಿಕ್ಕಿ ಹೊಡೆದು ಬಳಿಕ ನಿಯಂತ್ರಣ ತಪ್ಪಿ ಪಲ್ಟಿಯಾದ ಘಟನೆ ಶುಕ್ರವಾರ ನಡೆದಿದೆ.

ಮೃತರನ್ನು ಹೊಸಪೇಟೆ ಮೂಲದ ಕುಮಾರ್ (34) ಹಾಗೂ ಮಂಜುನಾಥ (28) ಎಂದು ಗುರುತಿಸಲಾಗಿದೆ. ಇಬ್ಬರೂ ರಸ್ತೆ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವೇಳೆ ಹಿಂದಿನಿಂದ ವೇಗವಾಗಿ ಬಂದ ಮೈನಿಂಗ್ ಲಾರಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಅಪಘಾತದ ಬಳಿಕ ಲಾರಿ ಚಾಲಕನ ನಿಯಂತ್ರಣ ತಪ್ಪಿದ ವಾಹನ ರಸ್ತೆ ಬದಿಯಲ್ಲಿ ಪಲ್ಟಿಯಾಗಿದೆ. ಘಟನೆ ತಿಳಿದ ಕೂಡಲೇ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.

ಚಾಲಕನ ಅಜಾಗರೂಕ ಚಾಲನೆಯೇ ಅಪಘಾತಕ್ಕೆ ಕಾರಣ ಎನ್ನಲಾಗಿದ್ದು, ಈ ಕುರಿತು ಸಂಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅಪಘಾತದ ಬಗ್ಗೆ ಪೊಲೀಸರು ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.

# ಭೂಗರ್ಭಶಾಸ್ತ್ರ ತಜ್ಞರ ಅಭಿಪ್ರಾಯ ಪಡೆಯದೆ ಕೊಳವೆ ಬಾವಿ ಕೊರೆಸಬೇಡಿ: ಈಶ್ವರ ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ವಿವಿಧ ಪ್ರದೇಶಗಳಲ್ಲಿ ಅಂತರ್ಜಲಮಟ್ಟ 1000 ಅಡಿಗೂ ಕೆಳಗೆ ಹೋಗಿದ್ದು, ಅನಿವಾರ್ಯ ಪರಿಸ್ಥಿತಿಯಲ್ಲಿ ಮಾತ್ರವೇ ಕೊಳವೆ ಬಾವಿ ಕೊರೆಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಜಲಜೀವನ್ ಅಭಿಯಾನ ಕುರಿತಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ತುಮಕೂರು, ಕೋಲಾರ ಮತ್ತು ಚಿಕ್ಕಬಳ್ಳಾಪುರ ಸೇರಿದಂತೆ ಹಲವು ಕಡೆ 1000 ಅಡಿ ಕೊರೆದರೂ ನೀರು ಬರುವುದಿಲ್ಲ. ನೀರು ಸಿಕ್ಕರೂ ಕುಡಿಯಲು ಯೋಗ್ಯವಾಗಿರುವುದಿಲ್ಲ. ಹಲವು ಕೊಳವೆ ಬಾವಿಗಳು ನಿಷ್ಕ್ರಿಯವಾಗುತ್ತಿವೆ. ಹೀಗಾಗಿ ಸಾಧ್ಯವಾದಷ್ಟೂ ಮೇಲ್ಮೈ ನೀರು ಪೂರೈಕೆಗೆ ಆದ್ಯತೆ ನೀಡಿ, ಅನಿವಾರ್ಯವಾದಲ್ಲಿ ಮಾತ್ರ ಭೂಗರ್ಭ ಶಾಸ್ತ್ರಜ್ಞರ ಅಭಿಪ್ರಾಯ ಪಡೆದು ಕೊಳವೆ ಬಾವಿ ಕೊರೆಸಿ ಎಂದು ಆದೇಶ ನೀಡಿದರು.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಈಗಾಗಲೇ ಕೊರೆಸಲಾಗಿರುವ, ಸಕ್ರಿಯವಾಗಿರುವ ಮತ್ತು ಬತ್ತಿಹೋಗಿರುವ ಕೊಳವೆ ಬಾವಿಗಳ ಮರುಪೂರಣಕ್ಕೆ ವಿಬಿಜಿ ರಾಮ್ ಜಿ ಯೋಜನೆಯಡಿ ಕಾಮಗಾರಿ ಕೈಗೆತ್ತಿಕೊಳ್ಳಲು ಸೂಚಿಸಿದರು.

ರಾಜ್ಯದಲ್ಲಿ ಮಳೆ ಕೊರತೆಯಿಂದ ಜುಲೈ ತಿಂಗಲಲ್ಲಿ 766 ಗ್ರಾಮ ಪಂಚಾಯತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿತ್ತು. ಈ ತಿಂಗಳು ಮಳೆಯಾಗುತ್ತಿರುವುದರಿಂದ ಈ ಸಂಖ್ಯೆ 747ಕ್ಕೆ ಇಳಿಕೆಯಾಗಿದೆ.



ಪ್ರಸ್ತುತ 138 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುತ್ತಿರುವುದಾಗಿ ಅಧಿಕಾರಿಗಳು ಸಭೆಗೆ ತಿಳಿಸಿದರು.

ಯಾವುದೇ ಗ್ರಾಮದಿಂದ ಕುಡಿಯುವ ನೀರಿನ ಸಮಸ್ಯೆ ಕುರಿತು ದೂರು ಬಂದರೆ 24 ಗಂಟೆಯೊಳಗೆ ಪರಿಹರಿಸಲು ಇಲ್ಲವೆ ಟ್ಯಾಂಕರ್ ಮೂಲಕ ನೀರು ಪೂರೈಸಲು ಈಶ್ವರ ಖಂಡ್ರೆ ಸೂಚಿಸಿದರು.

ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಳ್ಳದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು, ಜಲಮೂಲಗಳ ಸಮರ್ಪಕ ನಿರ್ವಹಣೆಗೆ ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು ಸಚಿವರು ಸೂಚಿಸಿದರು.

ಬರ ಪರಿಸ್ಥಿತಿಯನ್ನು ಎದುರಿಸಲು ಮುನ್ನೆಚ್ಚರಿಕಾ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಸಭೆಯಲ್ಲಿ ಕಾರ್ಯದರ್ಶಿ ಡಿ. ರಂದೀಪ್, ಆಯುಕ್ತರಾದ ಫೌಜಿಯಾ ತರನ್ನುಂ ಮತ್ತಿತರರು ಪಾಲ್ಗೊಂಡಿದ್ದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ಲಾರಿ ಬಿಟ್ಟು ಚಾಲಕ ಪರಾರಿ; ಕಳಸ–ಕುದುರೆಮುಖದಲ್ಲಿ ಜಾಮ್

● ವಿಕ್ರಮ ವಾಹಿನಿ | ಚಿಕ್ಕಮಗಳೂರು

ಅಪಾಯಕಾರಿ ರಸ್ತೆ ತಿರುವಿನಲ್ಲಿ ಲಾರಿಯನ್ನು ನಿಲ್ಲಿಸಿ ಕೀ ಸಮೇತ ಚಾಲಕ ಪರಾರಿಯಾದ ಘಟನೆ ಕಳಸ ತಾಲ್ಲೂಕಿನ ನೆಲ್ಲಿಬೀಡು ಗ್ರಾಮದ ಬಳಿ ನಡೆದಿದೆ. ಇದರಿಂದ ಕಳಸ–ಕುದುರೆಮುಖ ಮಾರ್ಗದಲ್ಲಿ ಕಿ.ಮೀ.ಗಟ್ಟಲೆ ಸಂಚಾರ ದಟ್ಟಣೆ ಉಂಟಾಗಿ, ಮಳೆಯ ನಡುವೆ ನೂರಾರು ವಾಹನಗಳು ರಸ್ತೆಯಲ್ಲಿ ಸಿಲುಕಿದವು.

ಕಳಸ–ಮಂಗಳೂರು ಸಂಪರ್ಕಿಸುವ ರಾಜ್ಯ ಹೆದ್ದಾರಿಯ ಅಪಾಯಕಾರಿ ತಿರುವಿನಲ್ಲೇ ಚಾಲಕ ಲಾರಿಯನ್ನು ನಿಲ್ಲಿಸಿ ನಾಪತ್ತೆಯಾಗಿದ್ದಾನೆ. ಲಾರಿ ಮಾಲೀಕರಿಂದ 6 ಸಾವಿರ ಹಣ ಪಡೆದ ಬಳಿಕ ಚಾಲಕ ವಾಹನವನ್ನು ರಸ್ತೆಯಲ್ಲೇ ಬಿಟ್ಟು ತೆರಳಿದ್ದಾನೆ ಎನ್ನಲಾಗಿದೆ.

ಮಾಹಿತಿ ಪಡೆದ ಕುದುರೆಮುಖ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಲಾರಿಯನ್ನು ತೆರವುಗೊಳಿಸಲು ಪ್ರಯತ್ನಿಸಿದರೂ, ಚಾಲಕ ಕೀ ತೆಗೆದುಕೊಂಡು ಹೋಗಿದ್ದರಿಂದ ಸಾಧ್ಯವಾಗಲಿಲ್ಲ. ಲಾರಿ ಮಾಲೀಕರಿಗೆ ಕರೆ ಮಾಡಿ ಪರ್ಯಾಯ ಚಾಲಕನನ್ನು ಕಳುಹಿಸುವಂತೆ ಸೂಚಿಸಿದ್ದು, ಪರಾರಿಯಾಗಿರುವ ಚಾಲಕನಿಗಾಗಿ ಶೋಧ ಮುಂದುವರಿದಿದೆ.ಇದೇ ಮಾರ್ಗದಲ್ಲಿ ಮೂರು ಹಳೆಯ ಹಾಗೂ ಅಪಾಯಕಾರಿ ಸೇತುವೆಗಳಿದ್ದು, ಅವುಗಳ ಸ್ಥಿತಿ ಶಿಥಿಲಗೊಂಡಿದೆ. ಇಂತಹ ಪರಿಸ್ಥಿತಿಯಲ್ಲಿ ಭಾರಿ ಸರಕು ಸಾಗಣೆ ಲಾರಿಗಳಿಗೆ ಸಂಚಾರಕ್ಕೆ ಅವಕಾಶ ನೀಡುತ್ತಿರುವುದಕ್ಕೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸೇತುವೆಗಳ ಸುರಕ್ಷತೆ ಕುರಿತು ಸೂಕ್ತ ಕ್ರಮ ಕೈಗೊಂಡು ಭಾರಿ ವಾಹನಗಳ ಸಂಚಾರ ನಿಯಂತ್ರಿಸಬೇಕು ಹಾಗೂ ರಸ್ತೆಯಲ್ಲಿ ನಿಂತಿರುವ ಲಾರಿಯನ್ನು ತಕ್ಷಣ ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸ್ಥಳೀಯರು ಮತ್ತು ಪ್ರವಾಸಿಗರು ಆಗ್ರಹಿಸಿದ್ದಾರೆ.

# ಪರ್ತಗಾಳಿಯಲ್ಲಿ ಶ್ರೀ ಸ್ವಾಮೀಜಿಯ 10ನೇ ಚಾತುರ್ಮಾಸ್ಯ ಆರಂಭ

● ವಿಕ್ರಮ ವಾಹಿನಿ | ಪರ್ತಗಾಳಿ (ಗೋವಾ)




ದಕ್ಷಿಣ ಅಯೋಧ್ಯೆ ಎಂದೇ ಪ್ರಸಿದ್ಧಿ ಪಡೆದಿರುವ ಶ್ರೀ ಸಂಸ್ಥಾನ ಗೋಕರ್ಣ ಪರ್ತಗಾಳಿ ಜೀವೋತ್ತಮ ಮಠದ ಕೇಂದ್ರ ಮಠದಲ್ಲಿ ಪರಾಭವ ನಾಮ ಸಂವತ್ಸರದ ಚಾತುರ್ಮಾಸ್ಯ–2026 ಧಾರ್ಮಿಕ ವೈಭವ ಹಾಗೂ ಭಕ್ತಿಭಾವದಿಂದ ಆರಂಭಗೊಂಡಿದೆ.

ಮಠದ 24ನೇ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀಮದ್ ವಿದ್ಯಾಧೀಶ ತೀರ್ಥ ಶ್ರೀಪಾದ ವಡೇರ್ ಸ್ವಾಮೀಜಿಯವರು ಆಗಸ್ಟ್ 5ರಂದು ವಿಧಿವತ್ತಾಗಿ ಚಾತುರ್ಮಾಸ್ಯ ವ್ರತ ಸ್ವೀಕರಿಸಿದರು.

ಗಣಪತಿ ಪೂಜೆ, ಮೃತ್ತಿಕಾ ಪೂಜೆ, ವ್ಯಾಸ ಪೂಜೆ, ಸಂಕಲ್ಪ ಹಾಗೂ ಚಾತುರ್ಮಾಸ್ಯ ವ್ರತ ಸ್ವೀಕಾರ ಸೇರಿದಂತೆ ವಿವಿಧ ವೈದಿಕ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು. ಈ ಬಾರಿ ನಡೆಯುತ್ತಿರುವುದು ಶ್ರೀ ಸ್ವಾಮೀಜಿಯವರ 10ನೇ ಚಾತುರ್ಮಾಸ್ಯವಾಗಿದ್ದು, ಪರ್ತಗಾಳಿ ಕೇಂದ್ರ ಮಠದಲ್ಲಿ ನಡೆಯುತ್ತಿರುವ ನಾಲ್ಕನೇ ಚಾತುರ್ಮಾಸ್ಯ ಎಂಬ ವಿಶೇಷತೆ ಹೊಂದಿದೆ. ಕಳೆದ ವರ್ಷ ನಡೆದ ಮಠದ 550ನೇ ವರ್ಷದ ಮಹೋತ್ಸವದ ಬಳಿಕದ ಮೊದಲ ಚಾತುರ್ಮಾಸ್ಯವೂ ಇದಾಗಿದೆ.

ಸುಮಾರು 370 ವರ್ಷಗಳ ಆಧ್ಯಾತ್ಮಿಕ ಪರಂಪರೆ ಹೊಂದಿರುವ ಪರ್ತಗಾಳಿ ಮಠವು ಶ್ರೀರಾಮ, ಸೀತಾದೇವಿ, ಲಕ್ಷ್ಮಣ ಹಾಗೂ ಹನುಮಂತರ ದಿವ್ಯ ಸಾನ್ನಿಧ್ಯದಿಂದ ಪ್ರಸಿದ್ಧಿ ಪಡೆದಿದ್ದು, 77 ಅಡಿ ಎತ್ತರದ ಭವ್ಯ ಕಂಚಿನ ಶ್ರೀರಾಮ ಪ್ರತಿಮೆಯಿಂದ ದೇಶಾದ್ಯಂತ ಗಮನ ಸೆಳೆದಿದೆ. ಇದೇ ಹಿನ್ನೆಲೆಯಲ್ಲಿ ಭಕ್ತರು ಈ ಕ್ಷೇತ್ರವನ್ನು ಪ್ರೀತಿಯಿಂದ "ದಕ್ಷಿಣ ಅಯೋಧ್ಯೆ" ಎಂದು ಕರೆಯುತ್ತಾರೆ.

ಈ ಸಂದರ್ಭದಲ್ಲಿ ಮಠದ ನೂತನ ವೆಬ್‌ಸೈಟ್‌ಗೆ ಶ್ರೀ ಸ್ವಾಮೀಜಿಯವರು ಚಾಲನೆ ನೀಡಿದರು. ಜೊತೆಗೆ ವೇದಾಧ್ಯಯನ, ಸಂಸ್ಕೃತ ಶಿಕ್ಷಣ ಹಾಗೂ ಸನಾತನ ಧರ್ಮದ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಜೀವೋತ್ತಮ ವಿದ್ಯಾಪೀಠ ವೈದಿಕ ಪಾಠಶಾಲೆಗೂ ಚಾಲನೆ ನೀಡಲಾಯಿತು. ಆದರ್ಶಧಾಮ ಹಾಗೂ ಶ್ರೀರಾಮ ಥೀಮ್ ಪಾರ್ಕ್ ನಿರ್ಮಾಣಕ್ಕಾಗಿ ದೇಣಿಗೆ ನೀಡಿದ ಶಶಿಕಾಂತ್ ರಾಯಪ್ಪ ಶಾನಭಾಗ್ ಅವರನ್ನು ಶ್ರೀ ಸ್ವಾಮೀಜಿಯವರು ಆಶೀರ್ವದಿಸಿದರು.

ಆಶೀರ್ವಚನ ನೀಡಿದ ಶ್ರೀ ಸ್ವಾಮೀಜಿಯವರು, ದೇವರನ್ನು ಒಲಿಸಿಕೊಳ್ಳಲು ಸಂಪತ್ತಿಗಿಂತ ಶುದ್ಧ ಭಕ್ತಿ ಮುಖ್ಯ ಎಂದು ತಿಳಿಸಿದರು.

ಆಗಸ್ಟ್ 5ರಿಂದ ಸೆಪ್ಟೆಂಬರ್ 26ರವರೆಗೆ ನಡೆಯಲಿರುವ ಚಾತುರ್ಮಾಸ್ಯದ ಅವಧಿಯಲ್ಲಿ ತ್ರಿಕಾಲ ಪೂಜೆ, ವೇದಪಾರಾಯಣ, ಧಾರ್ಮಿಕ ಪ್ರವಚನ, ಗುರುಭಿಕ್ಷೆ, ಭಜನೆ, ತಪ್ತಮುದ್ರಾಧಾರಣೆ, ಆರೋಗ್ಯ ಹಾಗೂ ರಕ್ತದಾನ ಶಿಬಿರ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಡೆಯಲಿವೆ.

ಕಾರ್ಯಕ್ರಮದಲ್ಲಿ ಗೋವಾ, ಕರ್ನಾಟಕ, ಕೇರಳ ಹಾಗೂ ಮಹಾರಾಷ್ಟ್ರ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರು, ವೈದಿಕರು, ವಿವಿಧ ದೇವಾಲಯಗಳ ಆಡಳಿತ ಮಂಡಳಿ ಸದಸ್ಯರು, ಮಾಜಿ ಉಪಮುಖ್ಯಮಂತ್ರಿ ದಿಗಂಬರ್ ಕಾಮತ್, ಗೋಕರ್ಣ ಮಠ ಸೆಂಟ್ರಲ್ ಕಮಿಟಿ ಪದಾಧಿಕಾರಿಗಳು ಹಾಗೂ ಪರ್ತಗಾಳಿ ಚಾತುರ್ಮಾಸ್ಯ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಆಯುಷ್ಮಾನ್ ದುರ್ಬಳಕೆ; 2,359 ಆಸ್ಪತ್ರೆಗಳ ವಿರುದ್ಧ ಕ್ರಮ

● ವಿಕ್ರಮ ವಾಹಿನಿ | ನವದೆಹಲಿ

ಆಯುಷ್ಮಾನ್ ಭಾರತ್–ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ ಮಾರ್ಗಸೂಚಿ ಉಲ್ಲಂಘಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 2,359 ಆಸ್ಪತ್ರೆಗಳನ್ನು ಯೋಜನೆಯ ಪಟ್ಟಿಯಿಂದ ಕೈಬಿಡಲಾಗಿದ್ದು, 1,200ಕ್ಕೂ ಹೆಚ್ಚು ಆಸ್ಪತ್ರೆಗಳನ್ನು ಅಮಾನತುಗೊಳಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಲೋಕಸಭೆಗೆ ತಿಳಿಸಿದ್ದಾರೆ.

ಯೋಜನೆಗೆ ಸಂಬಂಧಿಸಿದ ಅಕ್ರಮಗಳ ಹಿನ್ನೆಲೆಯಲ್ಲಿ 29 ಎಫ್‌ಐಆರ್ ದಾಖಲಿಸಲಾಗಿದ್ದು, 328.49 ಕೋಟಿ ದಂಡ ವಿಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ವಂಚನೆ ತಡೆಗೆ ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರ ಕೃತಕ ಬುದ್ಧಿಮತ್ತೆ ಹಾಗೂ ಯಂತ್ರ ಕಲಿಕೆ ತಂತ್ರಜ್ಞಾನ ಬಳಸಿ ಆಸ್ಪತ್ರೆಗಳ ಪರಿಹಾರ ಮೊತ್ತದ ಬೇಡಿಕೆಗಳನ್ನು ಪರಿಶೀಲಿಸುತ್ತಿದೆ.

ಅನಧಿಕೃತ ಬಿಲ್ಲಿಂಗ್, ನಕಲಿ ದಾಖಲೆಗಳು ಹಾಗೂ ಸುಳ್ಳು ಚಿಕಿತ್ಸಾ ವಿವರಗಳನ್ನು ಪತ್ತೆಹಚ್ಚಿ ಅನುಮಾನಾಸ್ಪದ ಅರ್ಜಿಗಳಿಗೆ ಹಣ ಬಿಡುಗಡೆ ತಡೆದ ಪರಿಣಾಮ 676.14 ಕೋಟಿ ಸಾರ್ವಜನಿಕ ಹಣ ಉಳಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

2026ರ ಜುಲೈ 31ರ ವೇಳೆಗೆ ದೇಶಾದ್ಯಂತ 95.99 ಕೋಟಿ ಆಯುಷ್ಮಾನ್ ಭಾರತ್ ಆರೋಗ್ಯ ಖಾತೆಗಳು ರಚನೆಯಾಗಿದ್ದು, ಗುಜರಾತ್ ರಾಜ್ಯದಲ್ಲೇ 5.25 ಕೋಟಿ ಆರೋಗ್ಯ ಖಾತೆಗಳು ನಿರ್ಮಾಣವಾಗಿವೆ. ಡಿಜಿಟಲ್ ಆರೋಗ್ಯ ಸೇವೆಗಳನ್ನು ಸುಲಭಗೊಳಿಸುವ ನಿಟ್ಟಿನಲ್ಲಿ ಈ ಖಾತೆಗಳು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಸಚಿವರು ತಿಳಿಸಿದ್ದಾರೆ. ಆಯುಷ್ಮಾನ್ ಭಾರತ್–ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಆರ್ಥಿಕವಾಗಿ ದುರ್ಬಲ ವರ್ಗದ ಕುಟುಂಬಗಳಿಗೆ ವರ್ಷಕ್ಕೆ 5 ಲಕ್ಷದವರೆಗೆ ನಗದುರಹಿತ ದ್ವಿತೀಯ ಹಾಗೂ ತೃತೀಯ ಹಂತದ ಆಸ್ಪತ್ರೆ ಚಿಕಿತ್ಸೆಯ ಸೌಲಭ್ಯ ಒದಗಿಸಲಾಗುತ್ತಿದೆ

2025–26ರಲ್ಲಿ 3.75 ಕೋಟಿ ಆಯುಷ್ಮಾನ್ ಕಾರ್ಡ್‌ಗಳು ಸಿದ್ಧಗೊಂಡಿದ್ದು, 2.74 ಕೋಟಿ ಆಸ್ಪತ್ರೆ ದಾಖಲಾತಿಗಳಿಗೆ ಅನುಮೋದನೆ ನೀಡಲಾಗಿದೆ. ಇದೇ ಅವಧಿಯಲ್ಲಿ 5,074 ಹೊಸ ಆಸ್ಪತ್ರೆಗಳು ಯೋಜನೆಗೆ ಸೇರ್ಪಡೆಯಾಗಿವೆ. ಕೇಂದ್ರ ಸರ್ಕಾರ ಯೋಜನೆ ಅನುಷ್ಠಾನಕ್ಕಾಗಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ 8,438.27 ಕೋಟಿ ಅನುದಾನ ಬಿಡುಗಡೆ ಮಾಡಿದೆ.

# ಗ್ರಾಮಾಭಿವೃದ್ಧಿ ಆಗದಿದ್ದರೆ ನಗರದ ಮೇಲೆ ಒತ್ತಡ ಹೆಚ್ಚಳ: ಈಶ್ವರ ಖಂಡ್ರೆ

● ವಿಕ್ರಮ ವಾಹಿನಿ | ಬೆಂಗಳೂರು



ಇಂದಿನ ಆಧುನಿಕ ಯುಗಮಾನದಲ್ಲಿ ಗ್ರಾಮಗಳ ಅಭಿವೃದ್ಧಿ ಆಗದಿದ್ದರೆ, ಮೂಲಭೂತ ಸೌಕರ್ಯ ಕೊರತೆಯಾದರೆ ನಗರಗಳ ಮೇಲೆ ಒತ್ತಡ ಹೆಚ್ಚುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಕರ್ನಾಟಕ ಪಂಚಾಯತ್ ಪರಿಷತ್ ಗಾಂಧೀ ಭವನದಲ್ಲಿ ಆಯೋಜಿಸಿದ್ದ ವಿಕೇಂದ್ರೀಕರಣ ಯೋಜನೆ ಕುರಿತ 2 ದಿನಗಳ ಕಾರ್ಯಾಗಾರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು.

ಗ್ರಾಮೀಣ ಯುವಜನರು ಉದ್ಯೋಗ ಅರಸಿ ನಗರ, ಪಟ್ಟಣಗಳಿಗೆ ಬರುತ್ತಿದ್ದು, ಹಳ್ಳಿಗಳು ವೃದ್ಧಾಶ್ರಮಗಳಾಗುತ್ತಿವೆ. ಹೀಗಾಗಿ ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ, ಸಂಪರ್ಕ ರಸ್ತೆ, ಜಲ ಮೂಲಗಳ ಸಂರಕ್ಷಣೆ ಮಾಡಿ, ಯುವಜನರಿಗೆ ಕೌಶಲ್ಯ ತರಬೇತಿ ನೀಡಿ ಇರುವಲ್ಲಿಯೇ ಉದ್ಯೋಗ ಒದಗಿಸಿದರೆ ಆಗ ಗ್ರಾಮಗಳಿಗೆ ಜೀವಕಳೆ ಇರುತ್ತದೆ ಎಂದರು.

ಕರ್ನಾಟಕ ಅಧಿಕಾರ ವಿಕೇಂದ್ರೀಕರಣದಲ್ಲಿ ಮುಂಚೂಣಿಯಲ್ಲಿದೆ ಎಂದ ಅವರು ರಾಮಕೃಷ್ಣ ಹೆಗಡೆ ಮತ್ತು ನಸೀರ್ ಸಾಬ್ ಅವರ ಕೊಡುಗೆಯನ್ನು ಸ್ಮರಿಸಿದರು.

ದೇಶಾದ್ಯಂತ ಅಧಿಕಾರ ವಿಕೇಂದ್ರೀಕರಣ ಆಗಬೇಕು, ಮಹಾತ್ಮಾ ಗಾಂಧೀ ಅವರು ಗ್ರಾಮ ಸ್ವರಾಜ್ಯದ ಕಲ್ಪನೆ ಸಾಕಾರವಾಗಬೇಕು ಎಂದು ದಿವಂಗತ ಪ್ರಧಾನಿ ರಾಜೀವ್ ಗಾಂಧೀ ಮತ್ತು ಪಿ.ವಿ. ನರಸಿಂಹರಾವ್ ಶ್ರಮಿಸಿದರು ಎಂದರು.

ದೇಶದಲ್ಲಿ 2.68 ಗ್ರಾಮ ಪಂಚಾಯತಿಗಳಿದ್ದು, ಇವುಗಳ ಅಭಿವೃದ್ಧಿಗೆ ಕೇಂದ್ರ ಹಣಕಾಸು ಆಯೋಗಗಳು ಹೆಚ್ಚಿನ ಅನುದಾನ ನೀಡಬೇಕು. ಗ್ರಾಮೀಣರು ತಮ್ಮ ಗ್ರಾಮದ ಅಭಿವೃದ್ಧಿಯನ್ನು ತಾವೇ ಮಾಡಿಕೊಳ್ಳಬೇಕು. ಇದಕ್ಕಾಗಿ ಗ್ರಾಮಸಭೆಗಳಲ್ಲಿ ಸಕ್ರಿಯವಾಗಿ ಭಾಗಿಯಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಡಿ.ಆರ್. ಪಾಟೀಲ್, ಕೇರಳಂನ ಮಾಜಿ ಹಣಕಾಸು ಸಚಿವ ಥಾಮಸ್ ಐಸಾಕ್, ಕೇರಳಂ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಎಸ್.ಎಂ. ವಿಜಯಾನಂದ್ ಮತ್ತಿತರರು ಪಾಲ್ಗೊಂಡಿದ್ದರು.

# ಹಲವು ರಾಜ್ಯಗಳಿಗೆ ಭಾರಿ ಮಳೆ ಎಚ್ಚರಿಕೆ

● ವಿಕ್ರಮ ವಾಹಿನಿ | ನವದೆಹಲಿ

ದೇಶಾದ್ಯಂತ ಮುಂಗಾರು ಚುರುಕುಗೊಂಡಿದ್ದು, ಉತ್ತರ ಭಾರತ, ಪೂರ್ವ ಕರಾವಳಿ ಹಾಗೂ ಮಧ್ಯ ಭಾರತದ ಹಲವು ರಾಜ್ಯಗಳಲ್ಲಿ ಮುಂದಿನ ಕೆಲ ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ. ತಡವಾಗಿ ಆರಂಭವಾದ ಮುಂಗಾರು ಇದೀಗ ಬಿರುಸುಗೊಂಡಿದ್ದು, ಕೆಲವೆಡೆ ಪ್ರವಾಹ ಮತ್ತು ಭೂಕುಸಿತದ ಅಪಾಯವೂ ಹೆಚ್ಚಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಎಚ್ಚರಿಕೆಯಿಂದ ಇರುವಂತೆ ಇಲಾಖೆ ಸೂಚಿಸಿದೆ.

ಜಮ್ಮು–ಕಾಶ್ಮೀರ, ಲಡಾಖ್, ಹಿಮಾಚಲ ಪ್ರದೇಶ, ಉತ್ತರಾಖಂಡ, ಹರಿಯಾಣ, ದೆಹಲಿ ಹಾಗೂ ಪಶ್ಚಿಮ ಉತ್ತರ ಪ್ರದೇಶದಲ್ಲಿ ಆಗಸ್ಟ್ 12ರವರೆಗೆ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ. ವಿಶೇಷವಾಗಿ ಹಿಮಾಚಲ ಪ್ರದೇಶ, ಉತ್ತರಾಖಂಡ ಹಾಗೂ ಜಮ್ಮು–ಕಾಶ್ಮೀರದ ಪರ್ವತ ಪ್ರದೇಶಗಳಲ್ಲಿ ಭೂಕುಸಿತ ಮತ್ತು ರಸ್ತೆ ಸಂಚಾರಕ್ಕೆ ಅಡಚಣೆ ಉಂಟಾಗುವ ಸಾಧ್ಯತೆ ಇರುವುದರಿಂದ ಸ್ಥಳೀಯ ಆಡಳಿತ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದೆ.

ಮಧ್ಯಪ್ರದೇಶ, ವಿದರ್ಭ ಹಾಗೂ ಛತ್ತೀಸ್‌ಗಢದಲ್ಲೂ ಆಗಸ್ಟ್ 7ರಿಂದ 12ರವರೆಗೆ ವ್ಯಾಪಕ ಮಳೆಯಾಗಲಿದ್ದು, ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಮತ್ತು ಪ್ರವಾಹ ಪರಿಸ್ಥಿತಿ ಎದುರಾಗುವ ಸಾಧ್ಯತೆ ಇದೆ. ಒಡಿಶಾ, ಪಶ್ಚಿಮ ಬಂಗಾಳ, ಜಾರ್ಖಂಡ್, ಬಿಹಾರ, ಸಿಕ್ಕಿಂ ಹಾಗೂ ಅಂಡಮಾನ್–ನಿಕೋಬಾರ್ ದ್ವೀಪಗಳಲ್ಲಿಯೂ ಭಾರೀ ಮಳೆಯ ಮುನ್ಸೂಚನೆ ನೀಡಲಾಗಿದೆ. ಒಡಿಶಾದಲ್ಲಿ ಪ್ರಮುಖ ನದಿಗಳ ನೀರಿನ ಮಟ್ಟ ಏರಿಕೆಯಾಗುವ ಸಾಧ್ಯತೆ ಇರುವುದರಿಂದ ಅಧಿಕಾರಿಗಳು ಕಟ್ಟೆಚ್ಚರ ವಹಿಸಿದ್ದಾರೆ.

ಅರುಣಾಚಲ ಪ್ರದೇಶ, ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಹಾಗೂ ತ್ರಿಪುರಾದಲ್ಲಿ ಆಗಸ್ಟ್ 12ರವರೆಗೆ ನಿರಂತರ ಮಳೆಯಾಗುವ ಸಾಧ್ಯತೆ ಇದೆ. ಗೋವಾ, ಕೊಂಕಣ, ಮಧ್ಯ ಮಹಾರಾಷ್ಟ್ರ, ಗುಜರಾತ್, ಸೌರಾಷ್ಟ್ರ ಹಾಗೂ ಕಚ್ ಪ್ರದೇಶಗಳಲ್ಲಿಯೂ ಭಾರೀ ಮಳೆಯ ಮುನ್ಸೂಚನೆ ನೀಡಲಾಗಿದೆ. ಮಳೆಯು ರೈತರಿಗೆ ಅನುಕೂಲಕರವಾಗಿದ್ದರೂ, ನದಿ ತೀರದ, ಗುಡ್ಡಗಾಡು ಹಾಗೂ ತಗ್ಗು ಪ್ರದೇಶದ ನಿವಾಸಿಗಳು ಎಚ್ಚರಿಕೆಯಿಂದ ಇರಬೇಕು.

# ಭಕ್ತರಿಗೆ ಅನ್ನಪ್ರಸಾದ ವಿತರಣೆ ಸುಗಮ: ಟಿಟಿಡಿಯಿಂದ 'ಮೂವಿಂಗ್ ಟೇಬಲ್' ವ್ಯವಸ್ಥೆ

● ವಿಕ್ರಮ ವಾಹಿನಿ | ತಿರುಮಲ



ಭಕ್ತರಿಗೆ ಅನ್ನಪ್ರಸಾದವನ್ನು ತ್ವರಿತವಾಗಿ ಹಾಗೂ ಯಾವುದೇ ಅನಾನುಕೂಲತೆ ಇಲ್ಲದೆ ವಿತರಿಸುವ ಉದ್ದೇಶದಿಂದ ತಿರುಮಲ ತಿರುಪತಿ ದೇವಸ್ಥಾನಗಳು (ಟಿಟಿಡಿ) ಹೊಸ 'ಮೂವಿಂಗ್ ಟೇಬಲ್' ವ್ಯವಸ್ಥೆಯನ್ನು ಪರಿಚಯಿಸಿದೆ.

ಯಾತ್ರಿಕರ ದಟ್ಟಣೆ ಹೆಚ್ಚಿರುವ ಸಮಯದಲ್ಲಿ ಅನ್ನಪ್ರಸಾದ ವಿತರಣೆಯನ್ನು ವೇಗಗೊಳಿಸಲು ಈ ವ್ಯವಸ್ಥೆಯನ್ನು ಪ್ರಾಯೋಗಿಕವಾಗಿ ಆರಂಭಿಸಲಾಗಿದೆ. ಟಿಟಿಡಿಯ ಹೆಚ್ಚುವರಿ ಕಾರ್ಯನಿರ್ವಾಹಕ ಅಧಿಕಾರಿ ವೆಂಕಯ್ಯ ಚೌಧರಿ ಅವರ ಮಾರ್ಗದರ್ಶನದಲ್ಲಿ ಎಂಜಿನಿಯರಿಂಗ್ ಹಾಗೂ ಅಡುಗೆ ವಿಭಾಗಗಳ ಸಮನ್ವಯದೊಂದಿಗೆ ಈ ವ್ಯವಸ್ಥೆ ಜಾರಿಗೊಂಡಿದೆ.

ಸುಮಾರು ರೂ 10 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಈ 'ಮೂವಿಂಗ್ ಟೇಬಲ್' ಏಳು ಮೀಟರ್ ಉದ್ದವಿದ್ದು, ಕನ್ವೇಯರ್ ಬೆಲ್ಟ್ ಮಾದರಿಯಲ್ಲಿ ಕಾರ್ಯನಿರ್ವಹಿಸುತ್ತದೆ. ಟೇಬಲ್ ಮೇಲೆ ಇರಿಸಲಾದ ಅನ್ನಪ್ರಸಾದದ ತಟ್ಟೆಗಳು ನಿರಂತರವಾಗಿ ಚಲಿಸುತ್ತಿರುತ್ತವೆ. ಇದರಿಂದ ಭಕ್ತರು ಸರದಿಯಲ್ಲಿ ಮುಂದುವರಿಯುತ್ತಲೇ ಸುಲಭವಾಗಿ ತಟ್ಟೆಗಳನ್ನು ಪಡೆದುಕೊಳ್ಳಬಹುದಾಗಿದೆ.

ಈ ವ್ಯವಸ್ಥೆಯನ್ನು ಕಳೆದ ತಿಂಗಳು ತಿರುಮಲದ ರಿಂಗ್ ರಸ್ತೆ ಸಮೀಪ ಪ್ರಾಯೋಗಿಕವಾಗಿ ಪರೀಕ್ಷಿಸಲಾಗಿತ್ತು. ಉತ್ತಮ ಪ್ರತಿಕ್ರಿಯೆ ದೊರೆತ ಹಿನ್ನೆಲೆಯಲ್ಲಿ ವೈಕುಂಠಂ ಕ್ಯೂ ಕಾಂಪ್ಲೆಕ್ಸ್–1 ಮತ್ತು 2, ನಾರಾಯಣಗಿರಿ ಶೆಡ್‌ಗಳು ಸೇರಿದಂತೆ ಪ್ರಮುಖ ಸರತಿ ಮಾರ್ಗಗಳಲ್ಲಿ ಇನ್ನೂ 10 'ಮೂವಿಂಗ್ ಟೇಬಲ್'ಗಳನ್ನು ಅಳವಡಿಸಲು ಟಿಟಿಡಿ ನಿರ್ಧರಿಸಿದೆ.

ಇದರ ಜೊತೆಗೆ, ಪ್ರಸ್ತುತ ಏಳು ಮೀಟರ್ ಉದ್ದದ ಟೇಬಲ್‌ಗಳನ್ನು 12ರಿಂದ 15 ಮೀಟರ್‌ಗಳವರೆಗೆ ವಿಸ್ತರಿಸುವ ಪ್ರಸ್ತಾವನೆಯನ್ನೂ ಸಿದ್ಧಪಡಿಸಲಾಗಿದೆ. ಇದರಿಂದ ಹೆಚ್ಚುತ್ತಿರುವ ಭಕ್ತರ ಸಂಖ್ಯೆಗೆ ಅನುಗುಣವಾಗಿ ಅನ್ನಪ್ರಸಾದ ವಿತರಣೆಯನ್ನು ಇನ್ನಷ್ಟು ವೇಗವಾಗಿ ಹಾಗೂ ಸುಗಮವಾಗಿ ನಡೆಸಲು ಸಾಧ್ಯವಾಗಲಿದೆ.

ಇದೇ ವೇಳೆ, ತಿರುಮಲ ತಿರುಪತಿ ದೇವಸ್ಥಾನಗಳ ಲೆಕ್ಕಪತ್ರ ನಿರ್ವಹಣಾ ವ್ಯವಸ್ಥೆಯನ್ನು ಆಧುನೀಕರಿಸುವ ಕಾರ್ಯಕ್ಕೂ ವೇಗ ನೀಡಲಾಗಿದೆ.

ಲೆಕ್ಕಪತ್ರ ನಿರ್ವಹಣಾ ಕೈಪಿಡಿಯನ್ನು ಸಿದ್ಧಪಡಿಸುವ ಜವಾಬ್ದಾರಿಯನ್ನು ಭಾರತೀಯ ಚಾರ್ಟರ್ಡ್ ಅಕೌಂಟೆಂಟ್‌ಗಳ ಸಂಸ್ಥೆಗೆ ವಹಿಸಲಾಗಿದ್ದು, ಈ ಸಂಬಂಧ ಸಂಸ್ಥೆಯ ಪ್ರತಿನಿಧಿಗಳು ಮತ್ತು ಟಿಟಿಡಿ ಅಧಿಕಾರಿಗಳು ಹಲವು ಸುತ್ತಿನ ಸಮಾಲೋಚನಾ ಸಭೆಗಳನ್ನು ನಡೆಸಿದ್ದಾರೆ. ಹೊಸ ವ್ಯವಸ್ಥೆಯ ಮೂಲಕ ಆರ್ಥಿಕ ವ್ಯವಹಾರಗಳನ್ನು ಇನ್ನಷ್ಟು ಪಾರದರ್ಶಕ ಹಾಗೂ ಪರಿಣಾಮಕಾರಿಯಾಗಿ ನಿರ್ವಹಿಸುವ ಗುರಿಯನ್ನು ಟಿಟಿಡಿ ಹೊಂದಿದೆ.

# 'ಸ್ವಚ್ಛತೆ ನಿರ್ಲಕ್ಷ್ಯಿಸಿದ ಸರ್ಕಾರಿ ಇಲಾಖೆಗಳಿಗೆ ನೋಟಿಸ್'

● ವಿಕ್ರಮ ವಾಹಿನಿ | ಬೆಂಗಳೂರು

ನಗರದಾದ್ಯಂತ ನಡೆಯುತ್ತಿರುವ 'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನವನ್ನು ಮತ್ತಷ್ಟು ತೀವ್ರಗೊಳಿಸಲು, ಸ್ವಚ್ಛತಾ ಕಾರ್ಯ ಕೈಗೊಳ್ಳದ ಸರ್ಕಾರಿ ಇಲಾಖೆಗಳಿಗೆ ನೋಟಿಸ್ ಜಾರಿಗೊಳಿಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಶುಕ್ರವಾರ ನಡೆದ ವರ್ಚುವಲ್ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಎಲ್ಲಾ ಸರ್ಕಾರಿ ಕಚೇರಿಗಳು ತಮ್ಮ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳನ್ನು ಕಡ್ಡಾಯವಾಗಿ ಸ್ವಚ್ಛಗೊಳಿಸಬೇಕು. ನಿರ್ಲಕ್ಷ್ಯ ತೋರಿದ ಇಲಾಖೆಗಳಿಗೆ ನೋಟಿಸ್ ನೀಡಿ ಕ್ರಮ ಕೈಗೊಳ್ಳುವಂತೆ ನಗರ ಪಾಲಿಕೆ ಆಯುಕ್ತರಿಗೆ ನಿರ್ದೇಶನ ನೀಡಿದರು.

ಆಗಸ್ಟ್ 1ರಿಂದ 6ರವರೆಗೆ ನಡೆದ ಅಭಿಯಾನದಲ್ಲಿ 453 ಸಾರ್ವಜನಿಕ ಸ್ಥಳಗಳಿಂದ 10,056 ಮೆಟ್ರಿಕ್ ಟನ್ ನಿರ್ಮಾಣ ಮತ್ತು ನೆಲಸಮ (ಸಿ&ಡಿ) ತ್ಯಾಜ್ಯ ತೆರವುಗೊಳಿಸಲಾಗಿದೆ. ಪ್ರಸ್ತುತ 54 ಟಿಪ್ಪರ್ ಹಾಗೂ 18 ಜೆಸಿಬಿಗಳ ಮೂಲಕ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಕಾರ್ಯ ನಡೆಯುತ್ತಿದ್ದು, ಅಗತ್ಯವಿದ್ದರೆ ಇನ್ನಷ್ಟು ವಾಹನ ಹಾಗೂ ಯಂತ್ರೋಪಕರಣಗಳನ್ನು ನಿಯೋಜಿಸುವಂತೆ ಸೂಚಿಸಿದರು.

ನಗರದಲ್ಲಿ ಹೊಸದಾಗಿ 3,022 ಸಿ&ಡಿ ತ್ಯಾಜ್ಯ ಸುರಿದಿರುವ ಸ್ಥಳಗಳನ್ನು ಗುರುತಿಸಲಾಗಿದ್ದು, ಅಲ್ಲಿ ಸುಮಾರು 59,823 ಮೆಟ್ರಿಕ್ ಟನ್ ತ್ಯಾಜ್ಯ ಇರುವುದಾಗಿ ಅಧಿಕಾರಿಗಳು ವರದಿ ನೀಡಿದ್ದಾರೆ. ಈ ಪ್ರದೇಶಗಳನ್ನು ಶೀಘ್ರ ಸ್ವಚ್ಛಗೊಳಿಸಿ, ಮತ್ತೆ ತ್ಯಾಜ್ಯ ಸುರಿಯದಂತೆ ಕಟ್ಟುನಿಟ್ಟಿನ ಮೇಲ್ವಿಚಾರಣೆ ವಹಿಸುವಂತೆ ಸಚಿವರು ಸೂಚಿಸಿದರು.

ಮಳೆಗಾಲದಲ್ಲೂ ತ್ಯಾಜ್ಯ ವಿಲೇವಾರಿಗೆ ಅಡಚಣೆ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು. ಕಟ್ಟಡ ಭಗ್ನಾವಶೇಷಗಳನ್ನುಸರ್ಕಾರಗುರುತಿಸಿರುವಸ್ಥಳಗಳಲ್ಲಿಯೇ ವಿಲೇವಾರಿ ಮಾಡುವುದನ್ನು ಖಚಿತಪಡಿಸಬೇಕು ಎಂದು ಹೇಳಿದರು. ಸಿ&ಡಿ ತ್ಯಾಜ್ಯ ವಿಲೇವಾರಿ ಕೇಂದ್ರಗಳಲ್ಲಿ ಮಾರ್ಷಲ್‌ಗಳಿಗೆ ಮೂಲಸೌಕರ್ಯ ಒದಗಿಸಿ, ಟಿಪ್ಪರ್ ವಾಹನಗಳ ಸಂಚಾರದ ದಾಖಲೆಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆಯೂ ನಿರ್ದೇಶನ ನೀಡಿದರು.



'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನವನ್ನು ಮತ್ತಷ್ಟು ತೀವ್ರಗೊಳಿಸಿರುವ ರಾಜ್ಯ ಸರ್ಕಾರ, ಸ್ವಚ್ಛತಾ ಕಾರ್ಯ ಕೈಗೊಳ್ಳದ ಸರ್ಕಾರಿ ಇಲಾಖೆಗಳಿಗೆ ನೋಟಿಸ್ ಜಾರಿಗೊಳಿಸಲು ಸೂಚನೆ ನೀಡಿದೆ. ಆಗಸ್ಟ್ 1ರಿಂದ 6ರವರೆಗೆ 10,056 ಮೆಟ್ರಿಕ್ ಟನ್ ಸಿ&ಡಿ ತ್ಯಾಜ್ಯ ತೆರವುಗೊಳಿಸಲಾಗಿದ್ದು, ಹೊಸದಾಗಿ ಗುರುತಿಸಲಾದ ತ್ಯಾಜ್ಯ ತಾಣಗಳನ್ನೂ ಶೀಘ್ರ ಸ್ವಚ್ಛಗೊಳಿಸಲು ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಜೊತೆಗೆ, ರೈಲ್ವೆ ಇಲಾಖೆಯ ಜಾಗಗಳ ಸ್ವಚ್ಛತೆ ಹಾಗೂ ಸಿ&ಡಿ ತ್ಯಾಜ್ಯದ ವೈಜ್ಞಾನಿಕ ವಿಲೇವಾರಿಯನ್ನು ಸಮನ್ವಯದೊಂದಿಗೆ ತ್ವರಿತಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಸಂಚಾರಿ ಪೊಲೀಸರು ನಿಗದಿತ ಸಮಯದಲ್ಲಿ ಟಿಪ್ಪರ್ ವಾಹನಗಳ ಸಂಚಾರಕ್ಕೆ ವಿಧಿಸಿರುವ ನಿರ್ಬಂಧದಿಂದ ತ್ಯಾಜ್ಯ ತೆರವು ಕಾರ್ಯಕ್ಕೆ ಅಡಚಣೆಯಾಗುತ್ತಿರುವ ಹಿನ್ನೆಲೆಯಲ್ಲಿ, ಅಭಿಯಾನದಲ್ಲಿ ತೊಡಗಿರುವ ವಾಹನಗಳಿಗೆ ಎಲ್ಲ ಸಮಯದಲ್ಲೂ ಸಂಚಾರಕ್ಕೆ ಅವಕಾಶ ಕಲ್ಪಿಸುವ ಬಗ್ಗೆ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚಿಸುವಂತೆ ಮುಖ್ಯ ಆಯುಕ್ತರಿಗೆ ಸೂಚಿಸಿದರು. ರೈಲ್ವೆ ಇಲಾಖೆಯ ಜಮೀನುಗಳ ಸ್ವಚ್ಛತಾ ಕಾರ್ಯವನ್ನೂ ಸಮನ್ವಯದ ಮೂಲಕ ತ್ವರಿತಗೊಳಿಸಲು ಸೂಚನೆ ನೀಡಿದರು.

ನಗರ ಪಾಲಿಕೆವಾರು ತ್ಯಾಜ್ಯ ತೆರವು: ಬೆಂಗಳೂರು ಕೇಂದ್ರ–537 ಮೆ.ಟನ್, ಪೂರ್ವ–1,448 ಮೆ.ಟನ್, ಉತ್ತರ–3,819 ಮೆ.ಟನ್, ದಕ್ಷಿಣ–1,672 ಮೆ.ಟನ್ ಹಾಗೂ ಪಶ್ಚಿಮ–2,580 ಮೆ.ಟನ್ ಸೇರಿ ಒಟ್ಟು 10,056 ಮೆಟ್ರಿಕ್ ಟನ್ ಸಿ&ಡಿ ತ್ಯಾಜ್ಯ ತೆರವುಗೊಳಿಸಲಾಗಿದೆ.

# ರೂ 10, ರೂ 20, ರೂ 50 ನಕಲಿ ನೋಟು ಚಲಾವಣೆ ಹೆಚ್ಚಳ

● ವಿಕ್ರಮ ವಾಹಿನಿ | ನವದೆಹಲಿ

ದೇಶದ ವಿವಿಧೆಡೆ ರೂ 10, ರು 20 ಮತ್ತು ರೂ 50 ಮುಖಬೆಲೆಯ ನಕಲಿ ನೋಟುಗಳ ಚಲಾವಣೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಭದ್ರತಾ ಸಂಸ್ಥೆಗಳು ಸೂಚಿಸಿವೆ.

ಇದುವರೆಗೆ ರೂ 200 ಮತ್ತು ರೂ 500 ಮುಖಬೆಲೆಯ ನಕಲಿ ನೋಟುಗಳನ್ನು ಹೆಚ್ಚಾಗಿ ಚಲಾವಣೆಗೆ ಬಿಡುತ್ತಿದ್ದ ನಕಲಿ ನೋಟು ದಂಧೆಕೋರರು ಇದೀಗ ತಮ್ಮ ಕಾರ್ಯತಂತ್ರ ಬದಲಿಸಿ ಸಣ್ಣ ಮುಖಬೆಲೆಯ ನೋಟುಗಳನ್ನು ಗುರಿಯಾಗಿಸಿಕೊಂಡಿದ್ದಾರೆ ಎನ್ನಲಾಗಿದೆ. ಸಣ್ಣ ನೋಟುಗಳನ್ನು ಸ್ವೀಕರಿಸುವಾಗ ಸಾರ್ವಜನಿಕರು ಹೆಚ್ಚಿನ ಪರಿಶೀಲನೆ ನಡೆಸದಿರುವುದನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಗುಪ್ತಚರ ಸಂಸ್ಥೆಗಳ ಮಾಹಿತಿಯಂತೆ, ಸಂಘಟಿತ ಅಪರಾಧ ಜಾಲಗಳು ಹಾಗೂ ಪಾಕಿಸ್ತಾನ ಮೂಲದ ಐಎಸ್‌ಐ ಬೆಂಬಲಿತ ನಕಲಿ ನೋಟು ಜಾಲಗಳು ಈ ರೀತಿಯ ಕಾರ್ಯಾಚರಣೆಯಲ್ಲಿ ತೊಡಗಿರುವ ಶಂಕೆ ವ್ಯಕ್ತವಾಗಿದೆ. ದಿನನಿತ್ಯದ ಸಣ್ಣಪುಟ್ಟ ವಹಿವಾಟುಗಳ ಮೂಲಕ ನಕಲಿ ನೋಟುಗಳನ್ನು ಮಾರುಕಟ್ಟೆಯಲ್ಲಿ ಹರಡಲು ಪ್ರಯತ್ನಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. 2027ರ ಏಪ್ರಿಲ್‌ವರೆಗೆ ಈ ವಿಚಾರದಲ್ಲಿ ಹೆಚ್ಚಿನ ನಿಗಾ ವಹಿಸಲಾಗುತ್ತಿದ್ದು, ದೇಶದ ವಿವಿಧ ಭಾಗಗಳಲ್ಲಿ ಭದ್ರತಾ ಸಂಸ್ಥೆಗಳು ನಕಲಿ ನೋಟುಗಳ ಚಲಾವಣೆ ಕುರಿತು ಮಾಹಿತಿ ಸಂಗ್ರಹಿಸುತ್ತಿವೆ. ಹೊಸ ತಂತ್ರಜ್ಞಾನ ಆಧಾರಿತ ನೋಟುಗಳು ಮಾರುಕಟ್ಟೆಗೆ ಬಂದ ಬಳಿಕ ನಕಲಿ ನೋಟು ಜಾಲದ ಕಾರ್ಯತಂತ್ರದಲ್ಲಿ ಮತ್ತಷ್ಟು ಬದಲಾವಣೆಯಾಗುವ ಸಾಧ್ಯತೆಯನ್ನೂ ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ನಕಲಿ ನೋಟುಗಳ ಬಗ್ಗೆ ಅನುಮಾನ ಬಂದರೆ ಅದನ್ನು ಮತ್ತೊಬ್ಬರಿಗೆ ಚಲಾವಣೆ ಮಾಡದೆ, ಸಂಬಂಧಿಸಿದ ಬ್ಯಾಂಕ್ ಅಥವಾ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಸಾರ್ವಜನಿಕರಿಗೆ ಸೂಚಿಸಲಾಗಿದೆ.

# 'ದಯೆಯಿಲ್ಲದ ಶಿಕ್ಷಣ ಸಮಾಜಕ್ಕೆ ಅಪಾಯ'

● ವಿಕ್ರಮ ವಾಹಿನಿ | ಕಲಬುರಗಿ



ಇಂದಿನ ಸ್ಪರ್ಧಾತ್ಮಕ ಶಿಕ್ಷಣ ವ್ಯವಸ್ಥೆ ಬುದ್ಧಿವಂತ ವಿದ್ಯಾರ್ಥಿಗಳನ್ನು ರೂಪಿಸುತ್ತಿದೆಯೇ ಹೊರತು, ಕರುಣೆ, ದಯೆ ಮತ್ತು ಚಾರಿತ್ರ್ಯ ಹೊಂದಿದ ವ್ಯಕ್ತಿಗಳನ್ನು ಬೆಳೆಸುತ್ತಿಲ್ಲ. ಕರುಣೆಯಿಲ್ಲದ ಬುದ್ಧಿವಂತಿಕೆ ಸಮಾಜಕ್ಕೆ ಅಪಾಯಕಾರಿಯಾಗುತ್ತದೆ ಎಂದು ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.

ನಗರದಲ್ಲಿ ಆಯೋಜಿಸಿದ್ದ 'ದಿವ್ಯ ಸಂಜೆ' ಸಂವಾದ ಕಾರ್ಯಕ್ರಮದಲ್ಲಿ ಶಿಕ್ಷಣ ತಜ್ಞ ಡಾ. ಗುರುರಾಜ ಕರ್ಜಗಿ ಅವರ ಪ್ರಶ್ನೆಗಳಿಗೆ ಉತ್ತರಿಸುತ್ತ ಮಾತನಾಡಿದ ಅವರು, ಮೌಲ್ಯ ಶಿಕ್ಷಣವು ಶಿಕ್ಷಣ ಪದ್ಧತಿಯ ಅವಿಭಾಜ್ಯ ಅಂಗವಾಗಬೇಕು ಎಂದು ಪ್ರತಿಪಾದಿಸಿದರು. ಶಿಕ್ಷಣದ ವ್ಯಾಪಾರೀಕರಣದಿಂದ

**ಉತ್ತಮ ಶಿಕ್ಷಕರಿಂದ ಉತ್ತಮ ಸಮಾಜ:** ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕಾದರೆ ಮೊದಲು ಉತ್ತಮ ಶಿಕ್ಷಕರನ್ನು ರೂಪಿಸಬೇಕು. ಶಿಕ್ಷಕರಿಗೆ ಸೂಕ್ತ ಗೌರವ, ಉತ್ತಮ ವೇತನ ಹಾಗೂ ಸಮಾಜದಲ್ಲಿ ಮಾನ್ಯತೆ ದೊರೆಯಬೇಕು. ಶಿಕ್ಷಕರು ಮಕ್ಕಳ ಪಾಲಿಗೆ ತಂದೆ–ತಾಯಿ ಮತ್ತು ಗುರುಗಳ ಸ್ಥಾನದಲ್ಲಿದ್ದು, ಅವರಿಂದಲೇ ಉತ್ತಮ ಚಾರಿತ್ರ್ಯದ ನಾಗರಿಕರು ರೂಪುಗೊಳ್ಳುತ್ತಾರೆ ಎಂದು ಹೇಳಿದರು.

ಆರೋಗ್ಯ, ಶಿಕ್ಷಣಕ್ಕೆ ಆದ್ಯತೆ: ಕಲಬುರಗಿ ಭಾಗದಲ್ಲಿ ರಕ್ತಹೀನತೆ ಹಾಗೂ ಅಪೌಷ್ಟಿಕತೆ ಗಂಭೀರ ಸಮಸ್ಯೆಯಾಗಿದ್ದು, ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯ ಮೇಲೂ ಪರಿಣಾಮ ಬೀರುತ್ತಿದೆ. ಈ ಹಿನ್ನೆಲೆಯಲ್ಲಿ ಶಿಕ್ಷಣ, ಆರೋಗ್ಯ ಮತ್ತು ಪೌಷ್ಟಿಕ ಆಹಾರ ಕ್ಷೇತ್ರಗಳಿಗೆ ಸಂಸ್ಥೆ ಹೆಚ್ಚಿನ ಆದ್ಯತೆ ನೀಡಲಿದ್ದು, ಶೀಘ್ರದಲ್ಲೇ ಸತ್ಯ ಸಾಯಿ ಕ್ಯಾಂಪಸ್ ಸಮೀಪ ಆಸ್ಪತ್ರೆ ಆರಂಭಿಸಲಾಗುವುದು ಎಂದು ಘೋಷಿಸಿದರು.

**ಸೇವಾ ಚಟುವಟಿಕೆಗಳ ಪರಿಚಯ:** ಕಾರ್ಯಕ್ರಮದಲ್ಲಿ ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಕೈಗೊಂಡಿರುವ ಶಿಕ್ಷಣ, ಆರೋಗ್ಯ ಹಾಗೂ ಮಾನವೀಯ ಸೇವಾ ಚಟುವಟಿಕೆಗಳ ಕುರಿತ ವಿಡಿಯೊ ಪ್ರದರ್ಶಿಸಲಾಯಿತು. ಕಾರ್ಯಕ್ರಮವು ವಿದ್ಯಾರ್ಥಿಗಳ ವೇದಮಂತ್ರ ಪಾರಾಯಣದಿಂದ ಆರಂಭಗೊಂಡು, ಶ್ರೀ ಸತ್ಯ ಸಾಯಿ ಲೋಕಸೇವಾ ಗುರುಕುಲಂ ವಿದ್ಯಾರ್ಥಿಗಳ ವಾದ್ಯಗೋಷ್ಠಿಯೊಂದಿಗೆ ಮುಕ್ತಾಯವಾಯಿತು.

**ವಿದ್ಯಾರ್ಥಿಯ ಬದುಕಿನ ಅನುಭವ:** ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ವಿದ್ಯಾರ್ಥಿ ಮಹದೇವ್ ತಮ್ಮ ಜೀವನದ ಅನುಭವ ಹಂಚಿಕೊಂಡು, ಬಾಲ್ಯದ ಸಂಕಷ್ಟದ ದಿನಗಳಲ್ಲಿ ಸತ್ಯ ಸಾಯಿ ಸಂಸ್ಥೆ ನೀಡಿದ ಶಿಕ್ಷಣ ಮತ್ತು ಮಾರ್ಗದರ್ಶನದಿಂದ ಆತ್ಮವಿಶ್ವಾಸ ಬೆಳೆದು ಜೀವನ ರೂಪುಗೊಂಡಿದೆ ಎಂದು ಭಾವುಕರಾಗಿ ಹೇಳಿದರು. ತಮ್ಮಂತೆಯೇ ಗ್ರಾಮೀಣ ಹಿನ್ನೆಲೆಯ ಸಾವಿರಾರು ಮಕ್ಕಳಿಗೆ ಸಂಸ್ಥೆ ಆಶಾಕಿರಣವಾಗಿದೆ ಎಂದು ತಿಳಿಸಿದರು.

**ಪರಿವರ್ತಕ ಪ್ರಶಸ್ತಿ ಪ್ರದಾನ:** ಕಾರ್ಯಕ್ರಮದಲ್ಲಿ ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಡಾ. ಬಿ.ಎನ್. ನರಸಿಂಹಮೂರ್ತಿ, ಶರಣ ಬಸವೇಶ್ವರ ಸಂಸ್ಥಾನದ 9ನೇ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪ, ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ. ಶ್ರೀಕಂಠಮೂರ್ತಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಇದೇ ವೇಳೆ ಶಿಕ್ಷಣ ಹಾಗೂ ಸಮಾಜಸೇವೆಯಲ್ಲಿ ಸಲ್ಲಿಸಿದ ಕೊಡುಗೆಗಾಗಿ ಬಸವರಾಜ ಪಾಟೀಲ ಸೇಡಂ ಮತ್ತು ಡಾ. ಸಂಜೀವ್ ಗುಪ್ತ ಅವರಿಗೆ 'ಕರ್ನಾಟಕ ಪರಿವರ್ತಕ ಪ್ರಶಸ್ತಿ' ಪ್ರದಾನಿಸಿ ಗೌರವಿಸಲಾಯಿತು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 133,